ಸುದ್ದಿಗಳ ಹೊನಲು

ಸಂಜೆ ಮುಗಿಲು

ಸಂಪುಟ: 21, ಸಂಚಿಕೆ: 285, ಪುಟಗಳು: 8, ಮಂಗಳವಾರ, 23 ಜುಲೈ 2024 RNI NO. KARKAN/2002/08054
epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3

ವೇಣು ಸಾರಥ್ಯದಲ್ಲಿ...

ಸುಭಾಷಿತ

ಜಗಳ ಮಾಡಲು ಬಂದವನ ಎದುರು ಮೌನವಾಗು. ಅದು ಜಗಳದ ಬಾಗಿಲನ್ನು ಮುಚ್ಚುತ್ತದೆ.

। ಎ.ಆರ್.ಕೃಷ್ಣಶಾಸ್ತ್ರಿ

ಪಂಚಾಂಗ

(ಮಂಗಳವಾರ 23, ಜುಲೈ-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಗ್ರೀಷ್ಮ ಋತು
- ಆಷಾಡ ಮಾಸ, ಕೃಷ್ಣ ಪಕ್ಷ
- ಮಂಗಳವಾರ, ದ್ವಿತೀಯ ತಿಥಿ
- ಧನಿಷ್ಠ ನಕ್ಷತ್ರ,
- ರಾಹುಕಾಲ 3:41 ರಿಂದ 5:17
- ಗುಳಿಕಕಾಲ 12:30 ರಿಂದ 2:05
- ಯಮಗಂಡಕಾಲ 9:18 ರಿಂದ 10:54

ಸಂಕ್ಷಿಪ್ತ ಸುದ್ದಿ

ಮುಡಾ ಹಗರಣಕ್ಕೆ ರಾಜ್ಯಪಾಲರ ಮಧ್ಯಪ್ರವೇಶ

ಬೆಂಗಳೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಸೈಟ್ ಹಗರಣ ರಾಜ್ಯದಲ್ಲಿ ಭಾರೀ ಸದ್ದು ಮಾಡುತ್ತಿರುವ ಬೆನ್ನಲ್ಲೇ ರಾಜ್ಯಪಾಲರ ಮಧ್ಯಪ್ರವೇಶವಾಗಿದೆ.

ಮುಡಾ ಪ್ರಕರಣದ ಬಗ್ಗೆ ಪೂರ್ಣ ವಿವರಣೆ ನೀಡುವಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್ ಅವರಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸೂಚಿಸಿದ್ದಾರೆ.

ಏನಿದು ಆರೋಪ?: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಧರ್ಮಪತ್ನಿ ಪಾರ್ವತಿ ಅವರಿಗೆ ಅರ್ಹತೆಗೂ ಮೀರಿ ಎರಡು ಕೋಟಿ ರೂ. ಬೆಲೆಬಾಳುವ 14 ನಿವೇಶನ?ಗಳನ್ನು ಪ್ರತಿಷ್ಠಿತ ವಿಜಯನಗರ ಬಡಾವಣೆಯಲ್ಲಿ ಹಂಚಿಕೆ ಮಾಡಲಾಗಿದೆ. ಪುಟ 2

ಹೂವು, ತರಕಾರಿ ದುಬಾರಿ

ಬೆಂಗಳೂರು: ಬೆಂಗಳೂರಿನಲ್ಲಿ ಹಾಗೂ ನಗರದ ಹೊರವಲಯಗಳಲ್ಲಿ ಒಂದು ವಾರದಿಂದ ನಿರಂತರವಾಗಿ ಮಳೆಯಾಗುತ್ತಿದೆ. ಮಳೆಯಿಂದಾಗಿ ನದಿಗಳು ತುಂಬಿ ಹರಿಯುತ್ತಿವೆ. ಈ ಮಧ್ಯೆ ಮಳೆಯಿಂದಾಗಿ ಬೆಳೆದ ಬೆಳೆಗಳಿಗೆ ಕೂಡ ಹಾನಿಯಾಗುತ್ತಿದ್ದು, ಮಾರುಕಟ್ಟೆಗೆ ಸರಿಯಾಗಿ ತರಕಾರಿ- ಹೂಗಳು ಬರುತ್ತಿಲ್ಲ. ಹೀಗಾಗಿ ತರಕಾರಿ ಹಾಗೂ ಹೂಗಳ ಬೆಲೆ ಏರಿಕೆಯಾಗಿದೆ.

ಸಾಮಾನ್ಯವಾಗಿ 70-80 ರೂ. ಇರಬೇಕಿದ್ದ ಸೇವಂತಿಗೆ ಹೂವು ಇದೀಗ ಸಗಟು ಮಾರುಕಟ್ಟೆಯಲ್ಲಿಯೇ 250-300 ರೂ.ಗೆ ಮಾರಟವಾಗುತ್ತಿದ್ದರೆ, ಚಿಲ್ಲರೆ ಮಾರಾಟಗಾರರು ಕಾಲು ಕೆ.ಜಿ. ಸೇವಂತಿ ಹೂವಿಗೆ 100 ರೂ.ಗೆ ಮಾರುತ್ತಿದ್ದಾರೆ. ಇನ್ನು ಕೆಜಿಗೆ 400 ರೂ ನಗದಿ ಮಾಡಲಾಗಿದೆ.

ಸದ್ಯ ಕಾಕಡ 500, ಮಲ್ಲಿಗೆ 300, ಕನಕಾಂಬರ 800, ಗುಲಾಬಿ- 200 ರೂ. ಗೆ ಮಾರಾಟವಾಗುತ್ತಿದೆ. ಇನ್ನು ಆಷಾಢ ಮಾಸದಲ್ಲಿಯೇ ಇಷ್ಟೊಂದು ಬೆಲೆ ಏರಿಕೆಯಾಗಿದ್ದು, ಪುಟ 2

ಹೊಸದಾಗಿ ಉದ್ಯೋಗಕ್ಕೆ ಸೇರುವ ಯುವಕರಿಗೆ ಸರ್ಕಾರವೇ ನೀಡಲಿದೆ ಮೊದಲ ಪಿಎಫ್

ನವದೆಹಲಿ: ಹೊಸದಾಗಿ ಉದ್ಯೋಗಕ್ಕೆ ಸೇರುವ 30 ಲಕ್ಷ ಯುವಕರಿಗೆ 1 ತಿಂಗಳ ಪಿಎಫ್ ಅನ್ನು ಕೇಂದ್ರ ಸರ್ಕಾರವೇ ನೀಡಲಿದೆ ಎನ್ನುವ ಮಾಹಿತಿಯನ್ನು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್‌ಹೇಳಿದ್ದಾರೆ. 2024-25ನೇ ಕೇಂದ್ರ ಬಜೆಟ್ ಮಂಡನೆ ಮಾಡಿರುವ ಸೀತಾರಾಮನ್, ಉದ್ಯೋಗಾಕಾಂಕ್ಷಿಗಳಿಗೆ ಬಂಪರ್ ಕೊಡುಗೆಯನ್ನು ಘೋಷಿಸಿದ್ದಾರೆ.

ಮೊದಲ ಬಾರಿಗೆ ಸಂಘಟಿತ ವಲಯದಲ್ಲಿ ಉದ್ಯೋಗವನ್ನು ಪ್ರಾರಂಭಿಸುವವರಿಗೆ ಒಂದು ಪಿಎಫ್ ಅನ್ನು ನೀಡಲಾಗುವುದು. ಈ ವೇತನವನ್ನು ಡಿಬಿಟಿ ಮೂಲಕ ಮೂರು ಕಂತುಗಳಲ್ಲಿ ಬಿಡುಗಡೆ ಮಾಡಲಾಗುವುದು. ಉದ್ಯೋಗ ಮತ್ತು ಕೌಶಲ್ಯ ಅಭಿವೃದ್ಧಿಯು ಸರ್ಕಾರದ ಒಂಬತ್ತು ಆದ್ಯತೆಗಳಲ್ಲಿ ಒಂದಾಗಿದೆ. ಇದರ ಅಡಿಯಲ್ಲಿ, ಮೊದಲ ಬಾರಿಗೆ ಉದ್ಯೋಗಾಕಾಂಕ್ಷಿಗಳಿಗೆ ಹೆಚ್ಚಿನ ಸಹಾಯವನ್ನು

ಪಡೆಯಲಿದ್ದಾರೆ.

ಇಪಿಎಫ್‌ಒನಲ್ಲಿ ನೋಂದಾಯಿಸಿದ ಜನರಿಗೆ ಮೂರು ಕಂತುಗಳಲ್ಲಿ ನೀಡಲಾಗುತ್ತದೆ. ಸರ್ಕಾರವು ಉದ್ಯೋಗಕ್ಕೆ ಸಂಬಂಧಿಸಿದ ಮೂರು ಯೋಜನೆಗಳನ್ನು ಪ್ರಾರಂಭಿಸುತ್ತದೆ ಎಂದು ಹಣಕಾಸು ಸಚಿವರು ಹೇಳಿದರು. ಒಂದು ತಿಂಗಳ ಪಿಎಫ್ (ಭವಿಷ್ಯ ನಿಧಿ) ಕೊಡುಗೆ ನೀಡುವುದರಿಂದ ಉದ್ಯೋಗ ಮಾರುಕಟ್ಟೆಗೆ ಪ್ರವೇಶಿಸುವ 30 ಲಕ್ಷ ಯುವಕರಿಗೆ ಪ್ರೋತ್ಸಾಹ ನೀಡಲಾಗುವುದು ಎಂದು ಅವರು ಹೇಳಿದರು.

ಉದ್ಯೋಗಿಗಳಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಉತ್ತೇಜಿಸಲು ದೇಶದಲ್ಲಿ ಮಹಿಳಾ ಮಹಿಳಾ ಹಾಸ್ಟೆಲ್‌ಗಳನ್ನು ಸ್ಥಾಪಿಸಲಾಗುವುದು ಎಂದು ಅವರು ಘೋಷಿಸಿದರು.

ಟಾಪ್-500 ಕಂಪನಿಗಳಲ್ಲಿ 12 ತಿಂಗಳ ಇಂಟರ್ನ್‌ಶಿಪ್ ಮತ್ತು ಒಂದು ಕೋಟಿ ಯುವಕರಿಗೆ ಮಾಸಿಕ ಭತ್ಯೆ ಮುಂದಿನ ಐದು ವರ್ಷಗಳಲ್ಲಿ ಟಾಪ್-500 ಕಂಪನಿಗಳಲ್ಲಿ ಒಂದು ಕೋಟಿ ಯುವಕರಿಗೆ ಇಂಟರ್ನ್‌ಶಿಪ್ ಅವಕಾಶವನ್ನು ನೀಡಲಿದೆ.

ಈ ಇಂಟರ್ನ್‌ಶಿಪ್ 12 ತಿಂಗಳವರೆಗೆ ಇರುತ್ತದೆ. ಇದರಲ್ಲಿ ಯುವಕರು ವ್ಯಾಪಾರದ ನೈಜ ಅರ್ಥವನ್ನು ತಿಳಿದುಕೊಳ್ಳಲು ಮತ್ತು ವಿವಿಧ ವೃತ್ತಿಗಳ ಸವಾಲುಗಳನ್ನು ಎದುರಿಸಲು ಅವಕಾಶವನ್ನು ಪಡೆಯುತ್ತಾರೆ.

ಇದರ ಅಡಿಯಲ್ಲಿ ಯುವಕರಿಗೆ ಪ್ರತಿ ತಿಂಗಳು 5,000 ರೂ. ಅಷ್ಟೇ ಅಲ್ಲ ಅವರಿಗೆ ಒಟ್ಟು ಆರು ಸಾವಿರ ರೂಪಾಯಿ ಸಹಾಯಧನ ನೀಡಲಾಗುವುದು. ಕಂಪನಿಗಳು ತಮ್ಮ ಸಾಂಸ್ಥಿಕ ಸಾಮಾಜಿಕ ಜವಾಬ್ದಾರಿಯ ಭಾಗವಾಗಿ ತರಬೇತಿ ವೆಚ್ಚ ಮತ್ತು ಇಂಟರ್ನ್‌ಶಿಪ್ ವೆಚ್ಚದ ಶೇಕಡಾ 10 ರಷ್ಟು ಭರಿಸಬೇಕಾಗುತ್ತದೆ.

ಅಧಿಕಾರಿಗಳ ನಡೆಗೆ ಸಿಎಂ ಸಿದ್ದರಾಮಯ್ಯ ಕಿಡಿ

ವಾಮಮಾರ್ಗದಲ್ಲಿ ಇಡಿ ಕೆಲಸ

ಬೆಂಗಳೂರು: ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ದುರ್ಬಲಗೊಳಿಸುವ ಯತ್ನ ನಡೆದಿದೆ. ಇಡಿಯವರ ಬೆದರಿಕೆಗಳಿಗೆ ನಾವು ಬೆದರುವುದಿಲ್ಲ. ಇಡಿ ತನಿಖೆ ನಡೆಸುವುದಕ್ಕೆ ನಮಗೆ ತಕರಾರಿಲ್ಲ. ಆದರೆ ನಮ್ಮ ಸರ್ಕಾರವನ್ನ ಗುರಿಯಾಗಿಸುವ ಕೆಲಸ ಮಾಡುತ್ತಿದೆ. ಕಾನೂನಿಗೆ ವಿರುದ್ಧವಾಗಿ ವಾಮಮಾರ್ಗವಾಗಿ ಇಡಿ ಕೆಲಸ ಮಾಡುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ಇಡಿ ತನಿಖಾ ಸಂಸ್ಥೆ ಹಾಗೂ ಕೇಂದ್ರ ಬಿಜೆಪಿ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಸಿಎಂ, ಡಿಸಿಎಂ ಹಾಗೂ ಮಾಜಿ ಸಚಿವ ಬಿ. ನಾಗೇಂದ್ರ ಹೆಸರೇಳುವಂತೆ ಕಿರುಕುಳ ಆರೋಪಕ್ಕೆ ಸಂಬಂಧಿಸಿ ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಕಾಂಗ್ರೆಸ್ ನಾಯಕರು ಪ್ರತಿಭಟನೆ ನಡೆಸುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿ ನೇತೃತ್ವದಲ್ಲಿ ಪ್ರತಿಭಟನೆ ನಡೆಯುತ್ತಿದ್ದು ಸಚಿವರಾದ ಡಾ.ಜಿ.ಪರಮೇಶ್ವರ್, ಮುನಿಯಪ್ಪ, ಪ್ರಿಯಾಂಕ್ ಖರ್ಗೆ, ಹೆಚ್.ಕೆ.ಪಾಟೀಲ್, ಭೈರತಿ ಸುರೇಶ್, ಲಾಡ್, ಕೆ.ಎನ್.ರಾಜಣ್ಣ, ಕೃಷ್ಣಬೈರೇಗೌಡ, ಎಂ.ಬಿ.ಪಾಟೀಲ್

, ವೆಂಕಟೇಶ್, ದಿನೇಶ್ ಗುಂಡೂರಾವ್, ಲಕ್ಷ್ಮೀ ಹೆಬ್ಬಾಳ್ಕರ್, ರಹೀಂ ಖಾನ್, ಎಂ.ಸಿ.ಸುಧಾಕರ್, ಶರಣಪ್ರಕಾಶ್ ಪಾಟೀಲ್ ಸೇರಿ ಹಲವರು ಭಾಗಿಯಾಗಿದ್ದಾರೆ. ಇಡಿ ಅಧಿಕಾರಿಗಳ ನಡೆ ಖಂಡಿಸಿ ಕೇಂದ್ರದ ವಿರುದ್ಧ ಘೋಷಣೆ ಕೂಗಿ ಕಾಂಗ್ರೆಸ್ ನಾಯಕರು ಆಕ್ರೋಶ ಹೊರ ಹಾಕಿದ್ದಾರೆ.

ನಿಗಮದ ಹಣ ವರ್ಗಾಣೆ ಆಗಿರುವುದು 89.63 ಕೋಟಿ ರೂ.: ಪ್ರತಿಭಟನೆ ವೇಳೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಇಡಿ ವಿರುದ್ಧ ವಾಗ್ಬಾಳಿ ನಡೆಸಿದ್ದಾರೆ. ಇಡಿ ಅಧಿಕಾರಿಗಳು ಸ್ವಯಂಪ್ರೇರಣೆಯಿಂದ ತನಿಖೆ ಮಾಡುತ್ತಿದ್ದಾರೆ. ಒಂದೇ ಕೇಸ್ ನಲ್ಲಿ ಮೂರು ತನಿಖಾ ಸಂಸ್ಥೆ ವಿಚಾರಣೆ ಮಾಡುತ್ತಿವೆ. ಪುಟ 2

ಸರ್ಕಾರದ ಅಧಿಕಾರಿಗಳಿಗೆ ನೀಡಲು ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಪ್ರತಿ ತಿಂಗಳು

8 ಕೋಟಿ ರೂ. ಸಂಗ್ರಹ

ಬೆಂಗಳೂರು: ಯಲಹಂಕ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಪ್ರತಿ ತಿಂಗಳು 8 ಕೋಟಿ ರೂ. ಸಂಗ್ರಹವಾಗುತ್ತದೆ. ಈ ಹಣ ಮೇಲಧಿಕಾರಿಗಳಿಗೆ ವರ್ಗಾವಣೆಯಾಗುತ್ತಿದೆ ಎಂದು ಯಲಹಂಕದ ಬಿಜೆಪಿ ಶಾಸಕ ಎಸ್ ಆರ್ ವಿಶ್ವನಾಥ್ ಆರೋಪಿಸಿದರು. ಈ ಬಗ್ಗೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಅಧಿವೇಶನದ ಪ್ರಶ್ನೋತ್ತರ ವೇಳೆಯಲ್ಲಿ ಪ್ರಸ್ತಾಪಿಸಿದ ಅವರು, ಯಲಹಂಕದ ಸುತ್ತಮುತ್ತ ಸುಮಾರು 100ಕ್ಕೂ ಹೆಚ್ಚು ಅಕ್ರಮ ಬಡಾವಣೆಗಳಿವೆ. ಯಲಹಂಕ ಸುತ್ತಮುತ್ತಲಿನ ಕಂದಾಯ ಇಲಾಖೆಯ 100 ಎಕರೆ ಕೃಷಿ ಭೂಮಿಯನ್ನು ಅಕ್ರಮವಾಗಿ ವಾಣಿಜ್ಯ ಅಥವಾ ನಿವಾಸಕ್ಕಾಗಿ ಪರಿವರ್ತನೆ ಮಾಡಲಾಗಿದೆ. ಈ ಅಕ್ರಮ ಬಡಾವಣೆಗಳು ಯಾವುದೇ ಸೌಲಭ್ಯಗಳನ್ನು ಹೊಂದಿಲ್ಲ. ಮತ್ತು ಈ ಬಡಾವಣೆಗಳಲ್ಲಿ ವಾಸಿಸುವವರು ನಕಲಿ ದಾಖಲೆಗಳನ್ನು ಹೊಂದಿದ್ದಾರೆ ಎಂದು ಸದನಕ್ಕೆ ತಿಳಿಸಿದರು. ಪುಟ 2

ಬೆಂಗಳೂರನ್ನು 5 ವಲಯಗಳನ್ನಾಗಿ ವಿಭಜಿಸುವ ಮಸೂದೆಗೆ

ಕ್ಯಾಬಿನೆಟ್ ಒಪ್ಪಿಗೆ

ಬೆಂಗಳೂರು: ರಾಜ್ಯ ಸಚಿವ ಸಂಪುಟ ಬೆಂಗಳೂರು ವಿಭಜಿಸುವ ಮಸೂದೆಗೆ ಅನುಮೋದನೆ ನೀಡಿದೆ. ವಿಧಾನಸೌಧದಲ್ಲಿ ನಡೆದ ಕ್ಯಾಬಿನೆಟ್ ಸಭೆ ಬೆಂಗಳೂರನ್ನ 5 ವಿಭಾಗಗಳಾಗಿ ವಿಭಜಿಸುವ ಮಸೂದೆಗೆ ಒಪ್ಪಿಗೆ ನೀಡಿದೆ.

ಬಿ ಎಸ್ ಪಾಟೀಲ್ ನೇತೃತ್ವದಲ್ಲಿ ನಡೆದ ಗ್ರೇಟರ್ ಬೆಂಗಳೂರು ಅಥಾರಿಟಿ ಮಾಡುವ ಸಲಹೆಗೆ ಅನುಮೋದನೆ ಸಿಕ್ಕಿದೆ. ಸಮಿತಿಯ ಶಿಫಾರಸುಗಳನ್ನು ಒಪ್ಪಲು ಸಂಪುಟ ಸಭೆ ನಿರ್ಧಾರ ಕೈಗೊಂಡಿದ್ದು ಮಂಗಳವಾರ ವಿಧಾನಸಭೆಯಲ್ಲಿ ಮಸೂದೆ ಮಂಡನೆಯಾಗುವ ಸಾಧ್ಯತೆಯಿದೆ.

ಈ ವೇಳೆ ಕೇಂದ್ರ ಸರ್ಕಾರದ ಮೂರು ಪ್ರಮುಖ ವಿಚಾರಗಳ ಬಗ್ಗೆ ವಿಧಾನಸಭೆಯಲ್ಲಿ ನಿರ್ಣಯ ಕೈಗೊಳ್ಳಲು ಕ್ಯಾಬಿನೆಟ್ ಒಪ್ಪಿಗೆ ನೀಡಿದೆ. ನೀಟ್ ಪರೀಕ್ಷೆಗೆ ವಿರೋಧ, ವಿಧಾನಸಭೆ ಹಾಗೂ ಲೋಕಸಭೆ ಕ್ಷೇತ್ರಗಳ ಮರು ವಿಂಗಡಣೆ ಖಂಡನೆ, ಒಂದು ದೇಶ, ಒಂದು ಚುನಾವಣೆ ವಿರೋಧಿಸಿ ಮಂಗಳವಾರ ನಿರ್ಣಯ ಮಂಡನೆಯಾಗಲಿದೆ.

3 ಕೋಟಿ ವೆಚ್ಚದಲ್ಲಿ ಶಾಲೆ ಬಿಟ್ಟ ಮಕ್ಕಳ ಸರ್ವೇ

ಬಿಬಿಎಂಪಿ ವಿರುದ್ಧ ಆಕ್ರೋಶ

ಬೆಂಗಳೂರು: ಇತ್ತೀಚೆಗಷ್ಟೇ ಬಿಬಿಎಂಪಿ ಶಾಲೆಗಳ ದಾಖಲಾತಿ ಪ್ರಮಾಣ ಕುಸಿತವಾಗಿತ್ತು. ಅಲ್ಲದೇ ಎಸ್ ಎಸ್‌ಎಲ್‌ಸಿ ಪರೀಕ್ಷೆಯಲ್ಲೂ ಕೆಲ ಶಾಲೆಗಳ ಫಲಿತಾಂಶ ಕುಸಿತವಾಗಿತ್ತು. ಸದ್ಯ ಇದರಿಂದ ಅಲರ್ಟ್ ಆದ ಪಾಲಿಕೆ, ಇದೀಗ ಹೈಕೋರ್ಟ್ ಆದೇಶದಂತೆ ಪಾಲಿಕೆ ವ್ಯಾಪ್ತಿಯಲ್ಲಿನ ಶಾಲೆ ಬಿಟ್ಟ ಮಕ್ಕಳ ಸರ್ವೇಗೆ ಮುಂದಾಗಿದೆ. ಸದ್ಯ ಗಾಂಧಿನಗರ ವಿಧಾನಸಭಾಕ್ಷೇತ್ರ ವ್ಯಾಪ್ತಿಯಲ್ಲಿ ಪ್ರಾಥಮಿಕವಾಗಿ ಸರ್ವೇಗೆ ತಯಾರಿ ನಡೆಸಿರೋ ಪಾಲಿಕೆ, ಸರ್ವೇ ಜವಾಬ್ದಾರಿಯನ್ನ ಖಾಸಗಿ ಸಂಸ್ಥೆಗೆ ವಹಿಸಿದ್ದು ಪ್ರತಿ ಮನೆಗೆ ತಲಾ 10 ರೂಪಾಯಿಯಂತೆ 30 ಲಕ್ಷ ಮನೆಗಳಿಗೆ ಬರೋಬ್ಬರಿ 3 ಕೋಟಿ ಮೀಸಲಿಡಲು ಹೊರಟಿದೆ.

ಸದ್ಯ ಪಾಲಿಕೆ ವ್ಯಾಪ್ತಿಯ ಸ್ಲಂಗಳು, ಮಧ್ಯಮವರ್ಗದ ಜನರು ವಾಸಿಸೋ ಜಾಗಗಳಲ್ಲೂ ಸರ್ವೇಗೆ ಸಜ್ಜಾಗಿರೋ ಪಾಲಿಕೆ, ಮಕ್ಕಳು ಶಾಲೆ ಬಿಡಲು ಇರೋ ಕಾರಣ ಹಾಗೂ ಪೋಷಕರ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಕಲೆಹಾಕೋದಕ್ಕೆ ಪ್ಲಾನ್

ಮಾಡಿದೆ. ಗಾಂಧಿನಗರ ವಿಧಾನಸಭಾಕ್ಷೇತ್ರದ ಬಳಿಕ ಇತರೆ ಭಾಗಗಳಲ್ಲೂ ಸರ್ವೇ ನಡೆಸೋಕೆ ಚಿಂತನೆ ನಡೆಸಿರೋ ಪಾಲಿಕೆ ಇದಕ್ಕಾಗಿ ಖಾಸಗಿ ಸಂಸ್ಥೆಗಳಿಗೆ ಟೆಂಡರ್ ಕರೆದಿದೆ.

ಇತ್ತ ಪಾಲಿಕೆ ನಡೆಗೆ ಸಾರ್ವಜನಿಕರಿಂದ ವಿರೋಧ ವ್ಯಕ್ತವಾಗ್ತಿದೆ. ಒಂದೆಡೆ ಪಾಲಿಕೆ ಶಾಲೆಗಳಿಗೆ ಮೂಲಸೌಕರ್ಯ ನೀಡದೇ ಸರ್ವೇಗೆ ಕೋಟಿ ಕೋಟಿ ಹಣ ಕೊಡಲು ಹೊರಟಿದ್ರೆ, ಪುಟ 2

ವಾಲ್ಮೀಕಿ ಹಗರಣ: ಇಬ್ಬರು ಇಡಿ ಅಧಿಕಾರಿಗಳ ವಿರುದ್ಧವೇ

ಎಫ್‌ಐಆರ್

ಬೆಂಗಳೂರು: ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ನಡೆದಿದೆ ಎನ್ನಲಾದ 187 ಕೋಟಿ ರೂ. ಅವ್ಯವಹಾರ ಪ್ರಕರಣಕ್ಕೆ ಟ್ವಿಸ್ಟ್ ಸಿಕ್ಕಿದ್ದು ಜಾರಿ ನಿರ್ದೇಶನಾಲಯದ ಇಬ್ಬರು ಅಧಿಕಾರಿಗಳ ವಿರುದ್ಧವೇ ಎಫ್ ಐಆರ್ ದಾಖಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಹಣಕಾಸು ಇಲಾಖೆಯನ್ನು ಸಿಲುಕಿಸುವಂತೆ ರಾಜ್ಯ ಸರ್ಕಾರಿ ಅಧಿಕಾರಿಯೊಬ್ಬರಿಗೆ ಒತ್ತಡ ಹೇರಿದ ಆರೋಪದ ಮೇರೆಗೆ ಜಾರಿ ನಿರ್ದೇಶನಾಲಯದ ಇಬ್ಬರು ಅಧಿಕಾರಿಗಳ ವಿರುದ್ಧ ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪುಟ 2

ಮಕ್ಕಳನ್ನೇ ಕಾಡುತ್ತಿದೆ ಡೆಂಗ್ಯೂ

ಆರೋಗ್ಯ ಇಲಾಖೆ ಪ್ಲಾನ್

ಬೆಂಗಳೂರು: ಸಿಲಿಕಾನ್ ಸಿಟಿಯಲ್ಲಿ ದಿನದಿಂದ ದಿನಕ್ಕೆ ಡೆಂಗ್ಯೂ ಆತಂಕ ಹೆಚ್ಚುತ್ತಲೇ ಇದೆ. ಇದುವರೆಗೂ ಬಿಬಿಎಂಪಿ ವ್ಯಾಪ್ತಿಯಲ್ಲಿ 6382 ಪ್ರಕರಣಗಳು ದಾಖಲಾಗಿವೆ. ಶೇ. 60% ರಷ್ಟು ರೋಗಿಗಳಲ್ಲಿ ಮಕ್ಕಳೇ ಹೆಚ್ಚಾಗಿದ್ದಾರೆ. ಈ ಬಾರಿ ಡೆಂಗ್ಯೂ ಅತಿ ಹೆಚ್ಚು ಮಕ್ಕಳನ್ನು ಬಾಧಿಸುತ್ತಿದೆ. ಅದರಲ್ಲೂ ಡೆಂಘೀ ಬಂದು ಹೋದ ಮಕ್ಕಳಲ್ಲಿ ಮತ್ತೆ ಈ ಡೆಂಗ್ಯೂ ಅಟ್ಯಾಕ್ ಮಾಡ್ತಿದೆ. ಇದರಿಂದ ಮಕ್ಕಳು ಶಾಕ್‌ಗೆ ಒಳಗಾಗ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಶಾಲೆಗಳ ಮೇಲೆ ಹದ್ದಿನ ಕಣ್ಣು ಇಡಲು ಆರೋಗ್ಯ ಇಲಾಖೆ ಸೂಚನೆ ನೀಡಿದೆ.

ಶಾಲಾ ಮಕ್ಕಳಲ್ಲಿ ಡೆಂಗ್ಯೂ ಏರಿಕೆ ಹಿನ್ನಲೆ ಡೆಂಗ್ಯೂ ಪಾಸಿಟಿವ್ ಕಂಡು ಬಂದ ಶಾಲೆಗಳ ಮೇಲೆ ಹದ್ದಿನ ಕಣ್ಣಿಡಲು ಆರೋಗ್ಯ ಇಲಾಖೆ ಮುಂದಾಗಿದೆ. ಹೆಚ್ಚು ಪಾಟಿಸಿವ್ ಪ್ರಕರಣಗಳು ಕಂಡು ಬಂದ ಶಾಲೆ ಗುರುತಿಸಿ ಆ ಶಾಲಾ ಮಕ್ಕಳಿಗೆ ಮಸ್ಕಿಟೋ ರಿಪ್ಲಿಕೆಂಟ್ ಉಚಿತವಾಗಿ ನೀಡಲು ಮುಂದಾಗಿದೆ. ಪಾಸಿಟಿವ್ ಕಂಡು ಬಂದ ಶಾಲೆ ಸುತ್ತಮುತ್ತ ಸೂಕ್ತ ಮುನ್ನೆಚ್ಚರಿಕೆಗೆ ಆರೋಗ್ಯ ಇಲಾಖೆ ಮುಂದಾಗಿದೆ.

ಡೆಂಗ್ಯೂ ಬಂದು ಹೋದ ಮಕ್ಕಳಿಗೆ ಮತ್ತೆ ಸೊಳ್ಳೆ

ಕಚ್ಚಿ ಎರಡೆರಡು ಬಾರಿ ಪಾಸಿಟಿವ್ ಸಾಧ್ಯತೆ. ಹೀಗಾಗಿ ಶಾಲಾ ಮಕ್ಕಳಲ್ಲಿ ಡೆಂಘಿ ಪ್ರಮಾಣ ಕಡಿಮೆ ಮಾಡಲು ಆರೋಗ್ಯ ಇಲಾಖೆ ಹರಸಾಹಸ ಪಡ್ತಿದೆ. ಮಕ್ಕಳು ಫುಲ್ ಸ್ಲೀವ್ ಬಟ್ಟೆಗಳನ್ನ ಧರಿಸದ ಕಾರಣ, ಮತ್ತೆ ಸೊಳ್ಳೆಗಳು ಕಚ್ಚುವ ಸಾಧ್ಯತೆ ಹೆಚ್ಚಿರಲಿದೆ. ಈ ಹಿನ್ನೆಲೆ ರಿಪೆಲ

ಸೂರಜ್ ರೇವಣ್ಣಗೆ ಜಾಮೀನು ಮಂಜೂರು

ಬೆಂಗಳೂರು: ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣಗೆ ಜಾಮೀನು ಮಂಜೂರಾಗಿದೆ. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಮಾತ್ರ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ. ಜೂನ್ 23 ರಂದು ಸೂರಜ್ ರೇವಣ್ಣ ಅವರನ್ನು ಬಂಧಿಸಲಾಗಿತ್ತು. ಹೊಳೆ ನರಸೀಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಐಪಿಸಿ ಸೆಕ್ಷನ್ 377 ಅಡಿ ದಾಖಲಾಗಿದ್ದ ಎಫ್ಐಆರ್‌ನಲ್ಲಿ ಸೂರಜ್ ರೇವಣ್ಣ ಅವರನ್ನು ಜೂನ್ 23 ರಂದು ಸಿಐಡಿ ಅರೆಸ್ಟ್ ಮಾಡಿತ್ತು.

ಸಚಿವಾಲಯದ ಅಧಿಕಾರಿ ವರ್ಗ ವಿರೋಧ

ಬೆಂಗಳೂರು: ಮಂತ್ರಿ ಆಳಿಯನಿಗೆ ಹುದ್ದೆ ಸೃಷ್ಟಿ ಮಾಡಲು ಸರ್ಕಾರ ಮುಂದಾಗಿದ್ದು, ಸರ್ಕಾರದ ತೀರ್ಮಾನದ ವಿರುದ್ಧ ವಿಧಾನಸಭಾ ಸಚಿವಾಲಯದ ಅಧಿಕಾರಿ ವರ್ಗ, ಸಿಬ್ಬಂದಿ ಹೋರಾಟಕ್ಕಿಳಿದಿದ್ದಾರೆ. ಸರ್ಕಾರದ ಮೇಲೆ ಒತ್ತಡ ಹೇರಿ ಆಳಿಯನಿಗೆ ಕಾಯದರ್ಶಿ-2 ಹುದ್ದೆ ಸೃಷ್ಟಿ ಯತ್ನ ಆರೋಪ ಕೇಳಿಬಂದಿದೆ. ಸಚಿವ ಮುನಿಯಪ್ಪ ಅಳಿಯ ಕೆ.ಸಿ.ಶಶಿಧರ್ ಹಾಲಿ ವಿಧಾನಸಭಾ ಸಚಿವಾಲಯದಲ್ಲಿ ಗಣಕ ವಿಭಾಗದ ನಿರ್ದೇಶಕರಾಗಿದ್ದು, ನಿರ್ದೇಶಕ ಹುದ್ದೆಯಿಂದ ಕಾರ್ಯದರ್ಶಿ-2 ಹುದ್ದೆಗೆ ನಿಯೋಜನೆ ಮಾಡಲು ಮನವಿ ಮಾಡಿದ್ದಾರೆ.

» **ಮುನಿಯಪ್ಪ ಅಳಿಯನಿಗೆ ವಿಧಾನಸಭೆ ಕಾರ್ಯದರ್ಶಿ-2 ಹುದ್ದೆ ಸೃಷ್ಟಿಗೆ ಮುಂದಾದ ಸರ್ಕಾರ**

ಶಶಿಧರ್ ಮನವಿಗೆ ಮಾವ ಆಗಿರುವ ಸಚಿವ ಮುನಿಯಪ್ಪ ಅವರಿಂದಲೂ ಶಿಫಾರಸು ಮಾಡಿದ್ದಾರೆ ಎನ್ನಲಾಗಿದೆ. ಶಶಿಧರ್ ಪರವಾಗಿ ಪತ್ನಿಯಾಗಿರುವ ಶಾಸಕಿ ರೂಪಾಕಲಾ ಅವರಿಂದಲೂ ಲಾಭಿ ಆರೋಪ ಕೇಳಿಬಂದಿದ್ದು, ನಿರ್ದೇಶಕ ಹುದ್ದೆಯಿಂದ ಕಾರ್ಯದರ್ಶಿ-2 ಹುದ್ದೆಗೆ ಮೇಲ್ದರ್ಜೆಗೆ ಏರಿಸಲು ಕಡತ ಸಿದ್ಧಗೊಳಿಸಿದ್ದಾರೆ ಎನ್ನಲಾಗಿದೆ.

ಡಿಪಿಎಆರ್ ಸಿದ್ಧಗೊಳಿಸಿರುವ ಕಡತಕ್ಕೆ ವಿಧಾನಸಭಾ ಸಚಿವಾಲಯದಿಂದಲೂ ಗ್ರೀನ್ ಸಿಗ್ನಲ್ ಸಿಕ್ಕಿದ್ದು, ಸಚಿವಾಲಯದ ನಿರ್ಧಾರದಿಂದ ಕಂಗೆಟ್ಟ ವಿಧಾನಸಭೆಯ ಅಧಿಕಾರಿ ವರ್ಗ ಮತ್ತು ಸಿಬ್ಬಂದಿ ವಿರೋಧ ವ್ಯಕ್ತಪಡಿಸಿದ್ದಾರೆ. ಗಣಕ ವಿಭಾಗದ ಅಧಿಕಾರಿಯನ್ನು ಸಚಿವಾಲಯದಲ್ಲಿ ಪರಿಗಣಿಸಬಾರದು. ಸಚಿವಾಲಯದ ವಿಭಾಗದ ವೃಂದಗಳಲ್ಲೇ ಹುದ್ದೆ ಸೃಷ್ಟಿಸಿ ನೀಡಬೇಕು ಅಂತಾ ಒತ್ತಾಯಿಸಿದ್ದಾರೆ. ಸಚಿವನ ಆಳಿಯನಿಗಾಗಿ ಹುದ್ದೆ ಸೃಷ್ಟಿ ಮಾಡುವ ಪ್ರಯತ್ನಕ್ಕೆ ತೀವ್ರ ವಿರೋಧ ವ್ಯಕ್ತವಾಗಿದ್ದು, ಸಿಎಂ ಸಿದ್ದರಾಮಯ್ಯ ಬಳಿ ಕಡತ ಇದೆ. ಅವರು ಸಹಿ ಹಾಕ್ತಾರಾ? ಕಾದುನೋಡಬೇಕಿದೆ.

ಅಶೋಕ್ ವಿರುದ್ಧ ಪ್ರದೀಪ್ ಈಶ್ವರ್ ಹಕ್ಕುಚ್ಯುತಿ ಮಂಡನೆ ಪ್ರಸ್ತಾಪ

ರೂಲಿಂಗ್ ಕಾಯ್ದಿರಿಸಿದ ಸ್ಪೀಕರ್

ಬೆಂಗಳೂರು: ವಿಧಾನಸಭೆಯಲ್ಲಿ ಪ್ರತಿಪಕ್ಷ ನಾಯಕ ಆರ್.ಅಶೋಕ್ ವಿರುದ್ಧ ಹಕ್ಕುಚ್ಯುತಿ ಮಂಡನೆ ಪ್ರಸ್ತಾಪ ಮಾಡಲಾಗಿದೆ. ಆರ್. ಅಶೋಕ್ ನಿಂದನೆ ಮಾಡಿದ್ದಾರೆ ಎಂದು ಶಾಸಕ ಪ್ರದೀಪ್ ಈಶ್ವರ್ ಹಕ್ಕುಚ್ಯುತಿ ಪ್ರಸ್ತಾಪಿಸಿದರು.

ಬಡತನ, ಕಣ್ಣೀರು ಸುರಿಸಿ ನಾನು ವಿಧಾನಸಭೆಗೆ ಬಂದಿದ್ದೇನೆ. ನಾನು ಶ್ರೀಮಂತ ಕುಟುಂಬದಿಂದ ಬಂದವನಲ್ಲ. ನಾನು ಗೆದ್ದ ಕೂಡಲೇ ಹತ್ತು ಆಂಬ್ಯುಲೆನ್ಸ್‌ಗಳನ್ನು ಬಡವರಿಗಾಗಿ ಕೊಟ್ಟಿದ್ದೇನೆ. ನನ್ನ ಸ್ವಂತ ದುಡ್ಡಲ್ಲಿ ಜನರನ್ನು ಕಾಪಾಡುತ್ತಿದ್ದೇನೆ. ವಿರೋಧ ಪಕ್ಷದ ನಾಯಕರ ಮೇಲೆ ಗೌರವ ಇದೆ. ಅವರು ಶಾಸಕರ ಮೇಲೆ ಕೆಟ್ಟದಾಗಿ ಪದ ಬಳಕೆ ಮಾಡಿದ್ದಾರೆ. ಇದು ಸರೀನಾ ಎಂದು ಎಂದು ಪ್ರಶ್ನಿಸಿದ ಅವರು ಹಕ್ಕುಚ್ಯುತಿ ಮಂಡಿಸಿದರು.

ಹಕ್ಕುಚ್ಯುತಿ ಮಂಡನೆ ವಿಚಾರವಾಗಿ ಆರ್. ಅಶೋಕ್ ಮಾತನಾಡಿ, ಗೌರವಾನ್ವಿತ ಪ್ರದೀಪ್ ಈಶ್ವರ್ ಅವರು ನಾನು ಅವಾಚ್ಯ ಶಬ್ದ ಬಳಸಿದೆ ಎಂದು ಹೇಳುತ್ತಿದ್ದಾರೆ. ನಾನು ದಾಖಲೆಗಳನ್ನು ಕೇಳಿದೆ ಆ ರೀತಿ ಯಾವುದು ಇಲ್ಲ. ಪ್ರದೀಪ್ ಈಶ್ವರ್ ಬಹಳ ದೊಡ್ಡ ದೊಡ್ಡ ಮಾತಾಡಿದ್ದಾರೆ. ನಾನು ಆ ರೀತಿ ಬಳಸಿದ್ದರೆ ದಾಖಲೆಗಳನ್ನು ಕೊಡಲಿ. ಹಾಗೆ ಬಳಸಿದ್ದರೆ ತಪ್ಪು ತಪ್ಪೇ ಎಂದರು. ಇನ್ನೂ ಸಾಮಾಜಿಕ ಜಾಲತಾಣದಲ್ಲಿ ಸುಳ್ಳು ಪೋಸ್ಟ್ ಹಾಕಿಕೊಂಡಿದ್ದಾರೆ, ಅದರ ಬಗ್ಗೆ ಮಾತಾಡಲಿ ಎಂದು ಬಿಜೆಪಿ ಶಾಸಕರು ಇದೇ ವೇಳೆ ಟಾಂಗ್ ಕೊಟ್ಟರು.

ಬಳಿಕ ಸ್ಪೀಕರ್ ಖಾದರ್ ಮಧ್ಯ ಪ್ರವೇಶಿಸಿ ಹಕ್ಕುಚ್ಯುತಿ ಸ್ವೀಕಾರ ಮಾಡಬೇಕಾ? ಅಥವಾ ಮಾಡಬಾರದಾ? ಎಂಬ ಬಗ್ಗೆ ರೂಲಿಂಗ್ ಕಾಯ್ದಿರಿಸಿದರು. ನಾವು ಸದನದಲ್ಲಿ ನಮ್ಮ ಸ್ಟೇಟಸ್‌ನ್ನು ತೋರಿಸೋದು ಬೇಡ. ಅದನ್ನು ಹೊರಗೆ ಎಲ್ಲಿ ಮಾಡಬೇಕೋ ಅಲ್ಲಿ ಮಾಡೋಣ. ನಾನು ದಾಖಲೆಗಳನ್ನು ತರಿಸಿಕೊಂಡು ಪರಿಶೀಲನೆ ಮಾಡುತ್ತೇನೆ ಎಂದು ಸದನಕ್ಕೆ ತಿಳಿಸಿದರು.

ಬೆಂಗಳೂರಿನಲ್ಲಿ ಆಯುಷ್ ಔಷಧಿ ಕೊರತೆ ಇಲ್ಲ

ಬೆಂಗಳೂರು: ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಆಯುಷ್ ಔಷಧಿಗಳ ಕೊರತೆ ಇಲ್ಲ, ಸಿಬ್ಬಂದಿ ಹಾಜರಾತಿ ಬಗ್ಗೆ ತಿಳಿಯಲು ಇ ಹಾಜರಾತಿ ವ್ಯವಸ್ಥೆ ಜಾರಿ ಮಾಡಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಗೋಪಿನಾಥ್ ಅವರು ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಆಯುಷ್ ಚಿಕಿತ್ಸಾಲಯಗಳ ಕೊರತೆ ಇದೆ. ಹೆಚ್ಚು ಆಯುಷ್ ಚಿಕಿತ್ಸಾಲಯ ಪ್ರಾರಂಭಿಸಬೇಕು. ಆಯುಷ್ ಚಿಕಿತ್ಸಾ ಕೇಂದ್ರಗಳಲ್ಲಿ ವೈದ್ಯರ ಕೊರತೆ ಇದ್ದು, ವೈದ್ಯರ ನೇಮಕ ಮಾಡಬೇಕು. ಔಷಧಿ ಕೊರತೆ ಇದ್ದು, ಕೂಡಲೇ ಔಷಧಿ ಸರಬರಾಜು ಮಾಡಬೇಕು ಎಂದು ಆಗ್ರಹಿಸಿದರು.

ಗೋಪಿನಾಥನ್ ಅವರ ಮಾತಿಗೆ ಉತ್ತರಿಸಿದ ದಿನೇಶ್ ಗುಂಡೂರಾವ್, ಬೆಂಗಳೂರು ನಗರ, ಗ್ರಾಮಾಂತರದಲ್ಲಿ 24 ಆಯುಷ್ ಚಿಕಿತ್ಸಾಯಗಳಿವೆ. ಆಯುಷ್ ಚಿಕಿತ್ಸಾಲಯದಲ್ಲಿ ಔಷಧಿಗಳ ಕೊರತೆ ಇಲ್ಲ. ಸಮಯಕ್ಕೆ ಸರಿಯಾಗಿ ಔಷಧಿ ಸರಬರಾಜು ವ್ಯವಸ್ಥೆ ಮಾಡಿದ್ದೇವೆ. ಆಯುಷ್ ವೈದ್ಯರ ಕೊರತೆ ಇದೆ. ಖಾಲಿ ಹುದ್ದೆಗಳ ನೇಮಕ ಪ್ರಕ್ರಿಯೆ ಶುರು ಮಾಡುತ್ತೇವೆ ಎಂದರು.

ಆಯುಷ್ ಇಲಾಖೆಯಲ್ಲಿ ಹಾಜರಾತಿಗೆ ಇ ಹಾಜರಾತಿ ವ್ಯವಸ್ಥೆ ಜಾರಿ ಮಾಡಲಾಗಿದೆ. ಗೈರಾಗುವ ಸಿಬ್ಬಂದಿಗೆ ನಿಯಮದ ಪ್ರಕಾರ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಇದೇ ಸಂದರ್ಭದಲ್ಲಿ ಅವರು ಇಲಾಖೆಯ ಸಿಬ್ಬಂದಿಗೆ ಎಚ್ಚರಿಕೆ ನೀಡಿದರು.

ಐಟಿ ಉದ್ಯೋಗಿಗಳಿಗೆ ಶಾಕಿಂಗ್ ಸುದ್ದಿ

9 ಗಂಟೆಯಲ್ಲ, 14 ಗಂಟೆ ದುಡಿಯಬೇಕು

ಬೆಂಗಳೂರು: ಕರ್ನಾಟಕದ ಐಟಿ ಉದ್ಯೋಗಿಗಳಿಗೆ ಬಿಗ್ ಶಾಕಿಂಗ್ ನ್ಯೂಸ್ ಕಾದಿದೆ. ಇನ್ನುಂದೆ 9 ಗಂಟೆಯಲ್ಲ. ಸರ್ಕಾರ ತಿದ್ದುಪಡಿ ಮಾಡಿ ಕಾಯ್ದೆ ಜಾರಿಗೆ ಬಂದರೆ 14 ಗಂಟೆ ಕೆಲಸ ಮಾಡಬೇಕಾಗಬಹುದು.

ಕರ್ನಾಟಕ ಶಾಪ್ಸ್ ಕಮರ್ಷಿಯಲ್ ಎಸ್ಟಾಬ್ಲಿಶ್ಮೆಂಟ್ 2024 ಕಾಯ್ದೆಗೆ ತಿದ್ದುಪಡಿ ತಂದು ಜಾರಿಗೆ ತರಲು ಸರ್ಕಾರದ ಮೇಲೆ ಕಂಪನಿಗಳು ಒತ್ತಡ ಹೇರುತ್ತಿವೆ. ಕಾರ್ಮಿಕ ಇಲಾಖೆಯೂ ಕಾನೂನು ಜಾರಿಗೆ ತರಲು ಚಿಂತನೆ ನಡೆಸಿದ್ದು, ಐಟಿ ಕಾರ್ಮಿಕರ ಅಸೋಸಿಯೇಷನ್ ಜೊತೆ ಸಭೆ ನಡೆಸಿದೆ.

ಈ ಪ್ರಸ್ತಾವನೆಗೆ ನೌಕರರು ವಿರೋಧ ವ್ಯಕ್ತಪಡಿಸಿದ್ದಾರೆ. 14 ಗಂಟೆ ಕೆಲಸ ಮಾಡುವುದರಿಂದ ಮಾನಸಿಕ ಒತ್ತಡ ಉಂಟಾಗುತ್ತದೆ. ಜೊತೆಗೆ ಅದೇ ಸಂಬಳಕ್ಕೆ ಹೆಚ್ಚು ಸಮಯ ದುಡಿಯಬೇಕು ಎನ್ನುವುದು ಎಷ್ಟು ಸರಿ ಎಂದು ಪ್ರಶ್ನಿಸಿದ್ದಾರೆ.

ಬುಧವಾರ ಐಟಿ ಉದ್ಯೋಗಿಗಳ ಸಭೆ ಕರೆದಿದ್ದು, ಕಾಯ್ದೆ ಜಾರಿಯಾದರೆ ಕೆಲಸಕ್ಕೆ ಹಾಜರಾಗದೆ ಪ್ರತಿಭಟನೆ ನಡೆಸಲು ಮುಂದಾಗಿದೆ.

ಈ ಬಗ್ಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಪ್ರತಿಕ್ರಿಯಿಸಿ, ಯಾವುದೋ ಇಂಡಸ್ಟ್ರಿ ಕಡೆಯಿಂದ ಬೇಡಿಕೆ ಬಂದಿದೆ. ಈ ವಿಚಾರಕ್ಕೆ ಪರ-ವಿರೋಧ ಚರ್ಚೆ ಇದ್ದು,ಅಂತಿಮ ತೀರ್ಮಾನ ಮಾಡಬೇಕಿದೆ ಎಂದಿದ್ದಾರೆ.

ರಾಜ್ಯದ ಎಲ್ಲಾ ಮಾಲ್‌ಗಳಿಗೂ ಮಾರ್ಗಸೂಚಿ: ಡಿಕೆಶಿ ಘೋಷಣೆ

ನವದೆಹಲಿ: ಪಂಚೆ ಹಾಕಿ ಬಂದ ರೈತನಿಗೆ ಜಿ.ಟಿ.ಮಾಲ್ ಸಿಬ್ಬಂದಿ ಪ್ರವೇಶ ನಿರಾಕರಣೆ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲ ಮಾಲ್ ಗಳಿಗೆ ಮಾರ್ಗಸೂಚಿ ಹೊರಡಿಸಲಾಗುವುದು ಎಂದು ಬೆಂಗಳೂರು ಅಭಿವೃದ್ಧಿ ಸಚಿವರಾಗಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಘೋಷಣೆ ಮಾಡಿದ್ದಾರೆ.

ವಿಧಾನಸಭೆಯಲ್ಲಿ ಸರ್ಕಾರದ ಪರವಾಗಿ ಹೇಳಿಕೆ ನೀಡಿದ ಅವರು, ಮಾಲ್‌ಗಳಿಗೆ ನಾವು ಮಾರ್ಗಸೂಚಿ ತರುತ್ತೇವೆ. ಪಂಚೆ ನಮ್ಮ ಸಂಸ್ಕೃತಿ. ಇಂತಹ ಘಟನೆಗಳು ಮತ್ತೆ ಆಗಬಾರದು ಎಂದು ಹೇಳಿದರು.

ಜಿ.ಟಿ.ಮಾಲ್ ತೆರಿಗೆ ಬಾಕಿ ಇತ್ತು. ಸ್ವಲ್ಪ ಕಟ್ಟಿದ್ದಾರೆ ಇನ್ನೂ ಬಾಕಿ ಇದೆ. ಚೆಕ್ ಕೊಟ್ಟಿದ್ದಾರೆ, ಇನ್ನೂ ತೆರಿಗೆ ಬಾಕಿ ಇದೆ. ಸದ್ಯ ಜಿ.ಟಿ.ಮಾಲ್ ಮುಚ್ಚಿಸಲಾಗಿದೆ ಎಂದು ಸ್ಪಷ್ಟನೆ ನೀಡಿದರು.

ಈ ವೇಳೆ ಕೆಲ ಕ್ಲಬ್‌ಗಳಿಗೂ ಡ್ರೆಸ್ ಕೋಡ್ ಬಗ್ಗೆಯೂ ಕೂಡ ವಿಷಯ ಪ್ರಸ್ತಾಪಿಸಿದ ಕೆಲ ಶಾಸಕರು, ಕ್ಲಬ್ ಗಳಲ್ಲಿ ಕೂಡ ಪಂಚೆ ಚಪ್ಪಲಿ ಹಾಕಿಕೊಂಡು ಹೋದರೆ ಬಿಡಲ್ಲ ಎಂದು ಆಳಲು ವ್ಯಕ್ತಪಡಿಸಿದರು.

ಮಾಲ್‌ಗಳಿಗೂ ಕ್ಲಬ್‌ಗಳಿಗೂ ಹೋಲಿಕೆ ಬೇಡ ಎಂದು ಹೆಚ್.ಕೆ.ಪಾಟೀಲ್ ಸಲಹೆ ನೀಡಿದರು. ಈ ವೇಳೆ ಆರ್ ಅಶೋಕ್ ಮಧ್ಯಪ್ರವೇಶ ಮಾಡಿ, ಕೇವಲ ಮಾರ್ಗಸೂಚಿ ಮಾಡಿದ್ರೆ ಸಾಲದು. ಲೈಸೆನ್ಸ್ ಕೊಡುವಾಗ ಷರತ್ತು ಹಾಕಿ ಕೊಡಿ. ಗ್ರಾಮೀಣ ಪ್ರದೇಶದ ಜನರಿಗೆ ಮುಕ್ತ ಅವಕಾಶ ಎಂದು ಷರತ್ತು ವಿಧಿಸಿ. ಆಗ ಅವರಿಗೆ ನೆನಪಿನಲ್ಲಿ ಉಳಿಯುತ್ತೆ ಎಂದು ಸಲಹೆ ನೀಡಿದರು.

ವಾಲ್ಮೀಕಿ ನಿಗಮದ 40 ಕೋಟಿ ರೂ. ಹಣ ಖಜಾನೆಯಿಂದ ನೇರವಾಗಿ ಬೇರೆ ಖಾತೆಗಳಿಗೆ

ಸ್ಪಷ್ಟೀಕರಣ ಕೇಳಿದ ಬೊಮ್ಮಾಯಿ

ನವದೆಹಲಿ: ವಾಲ್ಮೀಕಿ ನಿಗಮಕ್ಕೆ ಸಂಬಂಧಿಸಿದ ಸುಮಾರು 40 ಕೋಟಿ ರೂ. ಹಣ ನೇರವಾಗಿ ರಾಜ್ಯ ಸರ್ಕಾರದ ಖಜಾನೆಯಿಂದ ಬೇರೆ ಬೇರೆ ಖಾತೆಗಳಿಗೆ ವರ್ಗಾವಣೆಯಾಗಿರುವ ಬಗ್ಗೆ ಮಾಹಿತಿ ಇದ್ದು, ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟೀಕರಣ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.

ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ನಿಗಮದ ಹಗರಣದ ಆಳ ಮತ್ತು ಅಗಲ ನೋಡಿದರೆ ಹೊಸ ತಿರುವುಗಳಿಗೆ ಕಾರಣವಾಗುತ್ತಿದೆ. ಇದಕ್ಕೆ ಅಂತ್ಯಾನೇ ಇಲ್ಲ ಅಂತ ಅನಿಸುತ್ತದೆ. ಈಗಾಗಲೇ ಹಲವಾರು ಅಕೌಂಟ್‌ಗಳನ್ನು ತೆರೆದು ಹೈದರಾಬಾದ್‌ಗೆ ಹಣ ವರ್ಗಾವಣೆಯಾಗಿರುವುದು ಬೆಳಕಿಗೆ ಬಂದಿದೆ. ಆದರೆ, ಅದು ಹಣಕಾಸು ಇಲಾಖೆಗೆ ಸಂಬಂಧ ಇಲ್ಲ ಎಂದು ಮುಖ್ಯಮಂತ್ರಿಗಳು ಹೇಳುತ್ತಾರೆ ಎಂದು ಟೀಕಿಸಿದ್ದಾರೆ.

ನಮಗೆ ಇತ್ತೀಚೆಗೆ ಒಂದು ಮಾಹಿತಿ ಬಂದಿದೆ. ಮಾ.31 ರಂದು ನೇರವಾಗಿಯೇ ರಾಜ್ಯ ಸರ್ಕಾರದ ಖಜಾನೆಯಿಂದ ಸುಮಾರು 40 ಕೋಟಿ ರೂ. ಅಧಿಕೃತ ಖಾತೆಗೆ ಹೋಗದೇ ಬೇರೆ ಬೇರೆ ಖಾತೆಗಳಿಗೆ ವರ್ಗಾವಣೆಯಾಗಿದೆ ಎಂಬ ಮಾಹಿತಿ ಇದೆ. ಇದು ಹೇಗೆ ಹೊರಗೆ ಬಂದಿದೆ ಎಂದರೆ, ಪೇಮೆಂಟ್ ಮಾಡಿರುವ ಚಲನ್ ಅನು ಕಂಪ್ಯೂಟರ್ ನಿಂದ ತೆಗೆದು ಹಾಕುವ ಪಯತ್ನವಾಗಿದೆ. ಆ ಹಿನ್ನೆಲೆಯಲ್ಲಿ ಖಜಾನೆಯಲ್ಲಿ ಸ್ವಲ್ಪ ಗಲಿಬಿಲಿಯಾಗಿದೆ. ಹೀಗಾಗಿ ಈ ವಿಷಯ ಹೊರಗೆ ಬಂದಿದೆ. ಮುಖ್ಯಮಂತ್ರಿಗಳು ಈ ಬಗ್ಗೆ ವಿಧಾನಸಭೆಯಲ್ಲಿ ಸ್ಪಷ್ಟೀಕರಣ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ವಾಲ್ಮೀಕಿ ನಿಗಮಕ್ಕೆ ಎಷ್ಟು ಹಣ ಬಿಡುಗಡೆಯಾಗಿದೆ? ಮಾ.31 ಕ್ಕೆ ಖಜಾನೆಯಿಂದ ಹಣ ಬಿಡುಗಡೆಯಾಗಿದೆಯಾ? ಬಿಡುಗಡೆಯಾಗಿದ್ದರೆ ಯಾವ ಖಾತೆಗೆ ಬಿಡುಗಡೆಯಾಗಿದೆ. ಚಲನ್ ನಾಶ ಮಾಡುವ ಪ್ರಯತ್ನ ನಡೆದಿದೆಯೋ ಇಲ್ಲವೋ ಎನ್ನುವ ಬಗ್ಗೆ ಮುಖ್ಯಮಂತ್ರಿಗಳು ಸ್ಪಷ್ಟೀಕರಣ ನೀಡಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಗೋವಿಂದ ಕಾರಜೋಳ ಹಾಜರಿದ್ದರು.

ನಾವು ಅವರಿಗೆ ಹೆದರುವುದಿಲ್ಲ

ವಾಲ್ಮೀಕಿ ನಿಗಮದಲ್ಲಿ ಅಕ್ರಮ ನಡೆದಿಲ್ಲ ಎಂದು ನಾವು ಹೇಳ್ತಿಲ್ಲ. ವಿಪಕ್ಷದವರು 186 ಕೋಟಿ ದುರುಪಯೋಗ ಆಗಿದೆ ಅಂತಿದ್ದಾರೆ. ನಿಗಮದ ಹಣ ವರ್ಗಾಣೆ ಆಗಿರುವುದು 89.63 ಕೋಟಿ ರೂ. ಪ್ರಕರಣ ಸಂಬಂಧ ಈಗಾಗಲೇ 12 ಆರೋಪಿಗಳ ಬಂಧನವಾಗಿದೆ. ಅಧಿಕಾರಿಗಳು ಈಗಾಗಲೇ 34 ಕೋಟಿ ರಿಕವರಿ ಮಾಡಿದ್ದಾರೆ. ಶೇಕಡಾ 90ರಷ್ಟು ಎಸ್ ಐಟಿ ಅಧಿಕಾರಿಗಳ ತನಿಖೆ ಮುಗಿದಿದೆ. ಬ್ಯಾಂಕ್ ಅಧಿಕಾರಿಗಳ ದೂರಿನ ಮೇರೆಗೆ ಸಿಬಿಐ ತನಿಖೆ ಮಾಡ್ತಿದೆ. ಆದ್ರೆ ಇಡಿ ತಂಡ ಸ್ವಯಂ ಪ್ರೇರಣೆಯಿಂದ ತನಿಖೆ ಮಾಡುತ್ತಿದೆ. ಪ್ರಕರಣ ಸಂಬಂಧ ಅಧಿಕಾರಿ ಕಲ್ಲೇಶ್ ರನ್ನು ವಿಚಾರಣೆ ಮಾಡಿದ್ದಾರೆ. ವಿಚಾರಣೆ ವೇಳೆ ಸಿಎಂ, ಡಿಸಿಎಂ, ಸಚಿವರ ಹೆಸರೇಳುವಂತೆ ಒತ್ತಡ ಹಾಕಿದ್ದಾರೆ.

ಅಧಿಕಾರಿ ಕಲ್ಲೇಶ್ ಗೆ ಬೆದರಿಸಿ, ಹೆದರಿಸಿ ಹೆಸರೇಳುವಂತೆ ಇಡಿ ಒತ್ತಡ ಹಾಕಿದೆ. ಜೀವಬೆದರಿಕೆ ಹಾಕಿ ಒತ್ತಡ ಹಾಕಿದ್ದಾರೆಂದು ಕಲ್ಲೇಶ್ ಆರೋಪಿಸಿದ್ದಾರೆ. ಕಾಂಗ್ರೆಸ್ ಗುರಿಯಾಗಿಸಿಕೊಂಡು ಬೆದರಿಸುವ ಯತ್ನ ಆಗ್ತಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ದುರ್ಬಲಗೊಳಿಸುವ ಯತ್ನ ನಡೆದಿದೆ. ಇಡಿಯವರ ಇಂತಹ ಬೆದರಿಕೆಗಳಿಗೆ ನಾವು ಬೆದರುವುದಿಲ್ಲ. ಇಡಿ ತನಿಖೆ ನಡೆಸುವುದಕ್ಕೆ ನಮಗೆ ತಕರಾರಿಲ್ಲ. ಆದರೆ ನಮ್ಮ ಸರ್ಕಾರವನ್ನ ಗುರಿಯಾಗಿಸುವ ಕೆಲಸ ಮಾಡುತ್ತಿದೆ. ಕಾನೂನಿಗೆ ವಿರುದ್ಧವಾಗಿ ವಾಮಮಾರ್ಗವಾಗಿ ಇಡಿ ಕೆಲಸ ಮಾಡುತ್ತಿದೆ. ಇಡಿ, ಕೇಂದ್ರದ ವಿರುದ್ಧ ಕಾನೂನು ಪ್ರಕಾರ ಹೋರಾಟ ಮಾಡುತ್ತೇವೆ ಎಂದು ಸಿದ್ದರಾಮಯ್ಯ ಕಿಡಿಕಾರಿದರು.

ಬಿಜೆಪಿಯವರ ಕಾಲದಲ್ಲಿ ಹಲವು ಹಗರಣ ನಡೆದಿವೆ. ಆದರೆ ಇದರ ಬಗ್ಗೆ ಅವರು ಮಾತನಾಡುತ್ತಿಲ್ಲ. ಈ ಹಿಂದೆ ತನಿಖಾ ಸಂಸ್ಥೆಗಳನ್ನು ಚೋರ್ ಎನ್ನುತ್ತಿದ್ರು. ರವಿ, ಗಣಪತಿ, ಪರಮೇಮೇಹ್ತಾ ಪ್ರಕರಣವನ್ನ ಸರ್ಕಾರ ಸಿಬಿಐಗೆ ನೀಡಿತ್ತು. ನಮ್ಮದು ತನಿಖೆಗೆ ತಕರಾರಿಲ್ಲ. ಆದರೆ ಕಾನೂನು ಬಾಹಿರ ಹಾಗೂ ಯಾರನ್ನೂ ಗುರಿ ಇಟ್ಟು ಮಾಡಬಾರದು. ''ಸದನದಲ್ಲೂ ಈ ವಿಚಾರ ಪ್ರಸ್ತಾಪ ಮಾಡುತ್ತೇವೆ'' ಎಂದರು.

ಇನ್ನು ಇದೇ ವೇಳೆ ಮಾತನಾಡಿದ ಡಿಸಿಎಂ ಡಿಕೆ ಶಿವಕುಮಾರ್, ಸರ್ಕಾರದ ಎಲ್ಲಾ ಮಂತ್ರಿಗಳು ಶಾಸಕರು ದೊಡ್ಡ ಪ್ರತಿಭಟನೆ ಮಾಡುತ್ತಿದ್ದೇವೆ. ವಾಲ್ಮೀಕಿ ಹಗರಣ ಬೆಳಕಿಗೆ ಬಂದಿದೆ. ತಪ್ಪಾಗಿದೆ ಎಂದು ನಮಗೆ ಮನವರಿಕೆಯಾಗಿದೆ. ಅಧಿಕಾರಿಗಳು ದುರ್ಬಳಕೆ ಮಾಡಿದ್ದಾರೆ ಅನ್ನೋದು ಗೊತ

ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ಮತ್ತು ಉದ್ಘಾಟನೆ

ಪೀಣ್ಯ ದಾಸರಹಳ್ಳಿ: ಬೆಂಗಳೂರು ಉತ್ತರ ತಾಲ್ಲೂಕಿನ ಮಾದನಾಯಕನಹಳ್ಳಿ ನಗರಸಭೆ ಹಾಗೂ ಕಿತ್ತನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಲವಾರು ಗ್ರಾಮಗಳಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿಗಳ ಭೂಮಿ ಪೂಜೆ ಮತ್ತು ವಿವೇಕಯೋಜನೆಯಡಿಯಲ್ಲಿ ಶಾಲಾ ಕೊಠಡಿಗಳು ಮತ್ತು ಗ್ರಂಥಾಲಯ ಅಂಬೇಡ್ಕರ್ ಭವನ ಕಟ್ಟಡಗಳ ಉದ್ಘಾಟನೆಯನ್ನ ಶಾಸಕ ಎಸ್.ಆರ್. ವಿಶ್ವನಾಥ್ ಅವರು ಉದ್ಘಾಟಿಸಿದರು. ಇದೆ ವೇಳೆಯಲ್ಲಿ ಕೆಂಗನಹಳ್ಳಿ ಗ್ರಾಮದ ಸರ್ಕಾರಿ ಶಾಲೆಯ ಕೊಠಡಿ ಉದ್ಗಾಟನೆಯನ್ನು ಮಾಡಲಾಯಿತು.

ನಂತರ ಮಾತನಾಡಿದ ಶಾಸಕ ಎಸ್ ಆರ್ ವಿಶ್ವನಾಥ್ ದಾಸನಪುರ ಹೋಬಳಿಯ ಮಾದನಾಯಕನಹಳ್ಳಿ ನಗರಸಭೆ ಮತ್ತು ಕಿತ್ತನಹಳ್ಳಿ ಗ್ರಾಮ ಪಂಚಾಯತಿಯ ಅಲವಾರು ಗ್ರಾಮಗಳಲ್ಲಿ ಕಾಂಕ್ರೀಟ್ ರಸ್ತೆ ಮತ್ತು ಚರಂಡಿ ಸುಮಾರು 6 ಕೋಟಿ 30ಲಕ್ಷ ರೂ ವೆಚ್ಚದ ಕಾಮಗಾರಿಗಳಿಗೆ ಚಾಲನೆ ನೀಡಿದ್ದೇವೆ ಜೊತೆಯಲ್ಲಿ ವಿವೇಕ ಯೋಜನೆಯಡಿಯಲ್ಲಿ ನಿರ್ಮಾಣವಾದ ಶಾಲಾ ಕೊಠಡಿಗಳ ಉದ್ಘಾಟನೆ ಮತ್ತು ಅಂಬೇಡ್ಕರ್ ಭವನ ಉದ್ಘಾಟನೆ ಯನ್ನು ಇಂದು ಮಾಡಿದ್ದೇವೆ

ಪ್ರತಿ 15 ದಿನಗಳಿಗೊಮ್ಮೆ ಎರಡು ಗ್ರಾಮ ಪಂಚಾಯತಿಗಳ ಕಾಮಗಾರಿಗಳಿಗೆ ಚಾಲನೆ ಕೊಡುತ್ತಿದ್ದೇವೆ ಯಾಕೆಂದರೆ ಒಂದೇ ಸಾರಿ ಮಾಡಿದರೆ ಗುತ್ತಿಗೆದಾರರು ಕೆಲಸ ಮಾಡುವುದು ಗೊತ್ತಾಗುವಿದಿಲ್ಲ ಕಾಮಗಾರಿಗಳನ್ನು ಚುನಾವಣೆ ಪೂರ್ವದಲ್ಲಿ ಏನು ಮಾಡಿದ್ದೆ ಅದು ಈ ಸರ್ಕಾರ ರದ್ದು ಮಾಡಿತ್ತು ಮತ್ತೆ ಕಾಡಿ ಬೇಡಿ ಒಂದಷ್ಟು ಅನುದಾನಗಳನ್ನು ತಂದು ಕಾಮಗಾರಿಗಳ ಚಾಲನೆ ನೀಡಿದ್ದೇವೆ

ಬಹಳಷ್ಟು ವೇಗವಾಗಿ ಬೆಳೆಯುತ್ತಿರುವಂತಹ ಯಲಹಂಕ ಕ್ಷೇತ್ರಕ್ಕೆ ಸಾಕಷ್ಟು ಅನುದಾನ ಬೇಕು ಎಂದು ಮುಖ್ಯಮಂತ್ರಿಗಳು ಉಪ ಮುಖ್ಯ ಮಂತ್ರಿಗಳಲ್ಲಿ ಮನವಿ ಪತ್ರವನ್ನು ಸಹ ಕೊಟ್ಟಿರುತ್ತೇನೆ ಅಸೆಂಬ್ಲಿಯಲ್ಲೂ ಸಹ ಗಲಾಟೆ ಮಾಡಿದ್ದೇವೆ ಎಂದರು.

ಕಾಂಗ್ರೇಸ್ ಶಾಸಕರಿಗೂ ಸೇರಿದ ಹಾಗೆ ಯಾವುದೇ ರೀತಿಯದಂತ ಅನುದಾನ 14 ತಿಂಗಳಿನಿಂದ ಕೊಟ್ಟಿಲ್ಲ ಜುಲೈ ಅದ ಮೇಲೆ ಒಂದಷ್ಟು ಅನುದಾನ ಕೊಡುತ್ತೇವೆ ಏಳಿದ್ರಿ ಯಾಕೆಂದರೆ ಪ್ರಗತಿ ಇದ್ದರೆ ಮಾತ್ರನೇ ಕ್ಷೇತ್ರ ಮತ್ತು ರಾಜ್ಯಗಳು ಅಬಿವೃದ್ಧಿ ಕಡೆ ಹೋಗತಕ್ಕಂಥದು ಆ ದೃಷ್ಟಿಯಿಂದ ಸ್ವಲ್ಪ ಕಷ್ಟವಾದರೂ ಇವತ್ತು ಒಂದಷ್ಟು ಕೆಲಸ ಕಾರ್ಯಗಳಿಗೆ ಚಾಲನೆ ನೀಡಿದ್ದೇವೆ ಎಂದರು. ಇದೇ ಸಂದರ್ಭದಲ್ಲಿ ನಗರಸಭೆ ಆಯುಕ್ತ ಕೃಷ್ಣಮೂರ್ತಿ, ಕಿತ್ತನಹಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಭಾಗ್ಯ ಶೇಖರ್. ಉಪಾಧ್ಯಕ್ಷ ಬೆಟ್ಟಹಳ್ಳಿ ಕುಮಾರ್ ನರಸೇಗೌಡ ಕೆಂಗನಹಳ್ಳಿ ರಮೇಶ್.ಸವಿತಾ ಚಿಕ್ಕಕೆಂಪಯ್ಯ. ಅಭಿನಾಶ್ ಗಣೇಶ್ , ಮುಖೇಶ್ ಕೆಂಗನಹಳ್ಳಿ ಗ್ರಾಮದ ಎಸ್ ಡಿ ಎಂ ಸಿ ಅಧ್ಯಕ್ಷ ನಾರಾಯಣ್ ಇನ್ನೂ ಮುಂತಾದವರು ಇದ್ದರು.

ಮೆದುಳಿನ ಆರೋಗ್ಯ ಅತಿಮುಖ್ಯ: ಚಿದಂಬರ

ಚಾಮರಾಜನಗರ: ದಿನನಿತ್ಯದ ಸ್ವಾಸ್ಥ್ಯ ಜೀವನಕ್ಕೆ ಮೆದುಳಿನ ಆರೋಗ್ಯವು ಪ್ರತಿಯೊಬ್ಬರಿಗೂ ಅತಿಮುಖ್ಯವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಚಿದಂಬರ ಅವರು ತಿಳಿಸಿದರು.

ನಗರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧನಾ ಆಸ್ಪತ್ರೆಯಲ್ಲಿರುವ ಬ್ರೈನ್‌ಹೆಲ್ತ್ ಕ್ಲಿನಿಕ್ ವಿಭಾಗದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ವಿಜ್ಞಾನ ಸಂಸ್ಥೆ ಹಾಗೂ ಬೆಂಗಳೂರು ನಿಮಾನ್ಸ್ ನ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ 'ವಿಶ್ವ ಮೆದುಳು ದಿನ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವ್ಯಕ್ತಿ ತನ್ನ ಜೀವಿತಾವಧಿಯಲ್ಲಿ ಇತರರೊಂದಿಗೆ ಸಂವಹನ ಮಾಡಲು, ನಿರ್ಧಾರಗಳನ್ನು ತೆಗೆದುಕೊಳ್ಳಲು, ಉಪಯುಕ್ತ ಜೀವನ ನಡೆಸಲು ಮತ್ತು ಪೂರ್ಣ ಸಂಭಾವ್ಯತೆಯನ್ನು ಅರಿತುಕೊಳ್ಳಲು ಮೆದುಳು ಆರೋಗ್ಯ ಅನುವು ಮಾಡಿಕೊಡಲಿದೆ ಎಂದು ವಿಶ್ವಸಂಸ್ಥೆ ಪ್ರತಿಪಾದಿಸಿದೆ. ಪ್ರತಿಯೊಬ್ಬರು ಉತ್ತಮ ದೈಹಿಕ ಚಟುವಟಿಕೆ, ಆರೋಗ್ಯಕರ ಹವ್ಯಾಸಗಳು, ಯೋಗ ಮತ್ತು ಧ್ಯಾನ, ಸಾಕಷ್ಟು ನಿದ್ರೆ ಹಾಗೂ ಸಂಘಜೀವಿಯಾಗಿ ಜೀವಿಸುವುದರಿಂದ ಮೆದುಳಿನ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದರು. ಮೆದುಳು ಸಮಸ್ಯೆ ನರ ಸಂಬಂಧಿತ ಕಾಯಿಲೆಯಾಗಿದ್ದು, ತಲೆನೋವು ಹಾಗೂ ಅಧಿಕ ರಕ್ತದ ಒತ್ತಡದಿಂದ ಪಾರ್ಶ್ವವಾಯು ಮತ್ತು ಮರಿಗುಳಿತನ ಉಂಟಾಗುತ್ತದೆ. ರಕ್ತನಾಳ, ನರಕೋಶಗಳಿಗೆ ಹಾನಿಯಾದರೆ ಈ ತೊಂದರೆಗಳು ಕಾಣಿಸಿಕೊಳ್ಳುತ್ತದೆ. ಔಷಧೋಪಚಾರದಿಂದ ಮೆದುಳು ಸಮಸ್ಯೆಯನ್ನು ಆರಂಭಿಕ ಹಂತದಲ್ಲೇ ಗುಣಪಡಿಸಬಹುದು. ಈ ನಿಟ್ಟಿನಲ್ಲಿ ಬೆಂಗಳೂರು ನಿಮಾನ್ಸ್‌ನ ಕರ್ನಾಟಕ ಮೆದುಳು ಆರೋಗ್ಯ

ಉಪಕ್ರಮ ವಿಭಾಗದಿಂದ ನರ ಸಂಬಂಧಿತ ಅಸ್ವಸ್ಥತೆ ಮತ್ತು ದೌರ್ಬಲ್ಯವನ್ನು ಪರಿಹರಿಸಲು ಹಮ್ಮಿಕೊಳ್ಳಲಾಗಿರುವ ವಿಶಿಷ್ಟ ಅಭಿಯಾನವನ್ನು ಜಿಲ್ಲೆಗೂ ವಿಸ್ತರಿಸಲಾಗುತ್ತಿದೆ ಎಂದು ಡಾ. ಚಿದಂಬರ ತಿಳಿಸಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿದ ಸಿಮ್ಸ್ ಜನರಲ್ ಮೆಡಿಸನ್ ವಿಭಾಗದ ಡಾ. ರಮೇಶ ಅವರು ನಿಗದಿತ ಸಮಯದಲ್ಲಿ ಚಿಕಿತ್ಸೆ ಪಡೆದರೆ ಪಾರ್ಶ್ವವಾಯು ರೋಗವನ್ನು ಗುಣಪಡಿಸಬಹುದು. ರಕ್ತಸ್ರಾವ ಮತ್ತು ಅಧಿಕ ರಕ್ತ ಒತ್ತಡದಿಂದ ಹೃದಯ ಮತ್ತು ಕಿಡ್ನಿಗೆ ಹಾನಿಯಾಗಲಿದ್ದು, ಈ ಕಾಯಿಲೆಗೆ ತುತ್ತಾದವರಿಗೆ ಸ್ಕ್ಯಾನಿಂಗ್ ಮಾಡಿ ಸೂಕ್ತ ಚಿಕಿತ್ಸೆ ನೀಡಲಾಗುವುದು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಸಿಮ್ಸ್) ಡೀನ್ ಡಾ. ಮಂಜುನಾಥ್ ಅವರು ಮೆದುಳಿಗೆ ನಾವು ದಿನನಿತ್ಯ ವ್ಯಾಯಾಮ ನೀಡಬೇಕು. ಎಲ್ಲರಿಗೂ ಮೆದುಳಿನ ರಕ್ಷಣೆ ತುಂಬಾ ಮುಖ್ಯ. ರಕ್ತದೊತ್ತಡ ಮತ್ತು ಮಧುಮೇಹ ಕಾಯಿಲೆಯಿಂದ ಪಾರ್ಶ್ವವಾಯು ಹಾಗೂ ಮೆದುಳಿನ ಅಸ್ವಸ್ಥತೆ ಉಂಟಾಗುತ್ತದೆ. ಊಟ, ಉಪಹಾರದಲ್ಲಿ ಕಡಿಮೆ ಉಪ್ಪನ್ನು ಉಪಯೋಗಿಸಬೇಕು ಎಂದು ಸಲಹೆ ನೀಡಿದರು.

ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಕಾರ್ಯನಿರ್ವಹಿಸಿ: ಚಂದ್ರು

ಚಾಮರಾಜನಗರ: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿಯ ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಚಾಮರಾಜನಗರ ಜಿಲ್ಲೆ ಮೊದಲನೇ ಸ್ಥಾನಕ್ಕೆ ಬರಲು ಅಧಿಕಾರಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕೆಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ. ಚಂದ್ರು ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಅನ್ನಭಾಗ್ಯದಂತಹ ಮಹತ್ತರ ಕಾರ್ಯಕ್ರಮಗಳಲ್ಲಿ ಫಲಾನುಭವಿಗಳಿಗೆ ಡಿಬಿಟಿ ಮೂಲಕ ಹಣ ವರ್ಗಾವಣೆ ಯಾಗಬೇಕು. ಪಡಿತರ ಚೀಟಿದಾರರಿಗೆ ಡಿಬಿಟಿ ಹಣ ಹೊಂದಾಣಿಕೆಯಾಗದೆ ಇದ್ದಲ್ಲಿ ಆಹಾರ ನಾಗರಿಕ ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಅಧಿಕಾರಿಗಳು ತಕ್ಷಣವೇ ಕಾರ್ಯಪ್ರವೃತ್ತರಾಗಿ ತೊಂರೆಗಳನ್ನು ಪರಿಹರಿಸಬೇಕು. ತಾಲೂಕು ಮಟ್ಟದಲ್ಲಿಯೂ ತ್ವರಿತ ಸ್ಪಂದನೆ ಸಿಗಬೇಕು ಎಂದು ಅಧ್ಯಕ್ಷರು ತಿಳಿಸಿದರು.

ಗೃಹಲಕ್ಷ್ಮಿ ಯೋಜನೆ ನೊಂದಣಿಗೆ ಬಾಕಿ ಇರುವವರನ್ನು ಸೇರ್ಪಡೆ ಮಾಡುವ ಕಾರ್ಯದಲ್ಲಿ ಇನ್ನಷ್ಟು ಪ್ರಗತಿಯಾಗಬೇಕಿದೆ. ನೊಂದಣಿ ಮಾಡಿಸಲು ಬಾಕಿ ಇರುವ ಫಲಾನುಭವಿಗಳ ಮಾಹಿತಿಯನ್ನು ಪಡೆದು ಅಂಗನವಾಡಿ ಕಾರ್ಯಕರ್ತೆಯರ ಸಹಕಾರ ಪಡೆದು ಶೇ. 100ರಷ್ಟು ಅರ್ಹರೆಲ್ಲರಿಗು ನೊಂದಣಿಯಾಗುವಂತೆ ಕ್ರಮವಹಿಸಿ. ಬ್ಯಾಂಕ್ ಖಾತೆಗಳು ಚಾಲ್ತಿಯಿಲ್ಲದ ಫಲಾನುಭವಿಗಳ ವಿವರಗಳನ್ನು ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ನೀಡಿ ಸೌಲಭ್ಯ ತಲುಪಿಸಿ ಎಂದರು.

ಗೃಹಜ್ಯೋತಿ, ಯುವನಿಧಿ, ಶಕ್ತಿ ಯೋಜನೆಗಳ ಪ್ರಗತಿ ಪರಾಮರ್ಶಿಸಿ ಯೋಜನೆಗಳುಇನ್ನಷ್ಟುಪರಿಣಾಮಕಾರಿಯಾಗಿ ಜನರನ್ನು ತಲುಪಲಿ. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಲಹೆಗಳನ್ನು ಪಡೆದು ಯೋಜನೆಗಳ ಪ್ರಗತಿಯಲ್ಲಿ ಸಾಗಲು ಮುಂದಾಗುವಂತೆ ಅಧ್ಯಕ್ಷರಾದ ಹೆಚ್.ವಿ. ಚಂದ್ರು ಅವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೀತಾ ಹುಡೇದ ಅವರು ಮಾತನಾಡಿ ಯೋಜನೆಗಳ ಅನುಷ್ಠಾನದಲ್ಲಿ ಅಧಿಕಾರಿಗಳು ಸಮರ್ಪಕವಾಗಿ ತೊಡಗಿಕೊಳ್ಳಬೇಕು. ಫಲಾನುಭವಿಗಳಿಂದ ಬರುವ ಅಹವಾಲು ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಬೇಕು. ಸರ್ಕಾರದ ಯೋಜನೆಗಳ ಉದ್ದೇಶ ಫಲಪ್ರದವಾಗುವಂತೆ ನೋಡಿಕೊಳ್ಳುವ ಹೊಣೆಗಾರಿಕೆಯನ್ನು ಅಧಿಕಾರಿಗಳು ನಿರ್ವಹಿಸಬೇಕು ಎಂದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು, ಸದಸ್ಯರು ಯೋಜನೆಗಳ ಪ್ರಗತಿ ಪರಿಶೀಲಿಸಿದರು.

ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅವಧಿ ವಿಸ್ತರಣೆ

ಚಾಮರಾಜನಗರ: ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ (ಪಿ.ಯು.ಸಿ ಮತ್ತು ಪಿ.ಯು ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳು 2024-25ನೇ ಸಾಲಿಗೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಜುಲೈ 23ರವರೆಗೆ ವಿಸ್ತರಿಸಲಾಗಿದೆ. ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಪ್ರವರ್ಗ-1, ಪರಿಶಿ?ಟ ಜಾತಿ, ಪರಿಶಿಷ್ಟ ವರ್ಗಗಳಿಗೆ ಸೇರಿದ ವಿದ್ಯಾರ್ಥಿ ಕುಟುಂಬದ ವಾರ್ಷಿಕ ಆದಾಯ ಮಿತಿ 2.50 ಲಕ್ಷ ರೂ. ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳ ಹಾಗೂ ಇತರೆ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ಮಿತಿ 1 ಲಕ್ಷ ರೂ. ಒಳಗಿರಬೇಕು. ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್‌ಅನ್ನು ನೋಡಬಹುದು.

ಅರೆಕಾಲಿಕ ಕಾನೂನು ಸ್ವಯಂ ಸೇವಕರ ನೇಮಕಾತಿಗೆ ಅರ್ಜಿ ಆಹ್ವಾನ

ಚಾಮರಾಜನಗರ: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಯಳಂದೂರು, ಕೊಳ್ಳೇಗಾಲ ಹಾಗೂ ಗುಂಡ್ಲುಪೇಟೆ ತಾಲ್ಲೂಕು ಕಾನೂನು ಸೇವಾ ಸಮಿತಿಗಳಲ್ಲಿ ಒಂದು ವ?ದ ಅವಧಿಗೆ ಗೌರವಧನದ ಆಧಾರದಲ್ಲಿ ಹೊಸದಾಗಿ ಅರೆಕಾಲಿಕ ಕಾನೂನು ಸ್ವಯಂ ಸೇವಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಶಿಕ್ಷಕರು (ನಿವೃತ್ತಿ ಶಿಕ್ಷಕರೂ ಸಹ), ನಿವೃತ್ತಿ ಸರ್ಕಾರಿ ನೌಕರರು, ಹಿರಿಯ ನಾಗರಿಕರು, ಎಂ.ಎಸ್.ಡಬ್ಲ್ಯೂ, ಅಂಗನವಾಡಿ ಕಾರ್ಯಕರ್ತೆಯರು, ವೈದ್ಯರು ಮತ್ತು ಪಿಜಿಶಿಯನ್, ಕಾನೂನು ಪದವೀಧರರು (ವಕೀಲ ವೃತ್ತಿಗೆ ನೋಂದಾಯಿತರಲ್ಲದ), ರಾಜಕೀಯೇತರ ಸದಸ್ಯರು, ಸೇವಾನಿರತ ಎನ್.ಜಿ.ಓ.ಗಳು, ಮಹಿಳಾ ನೆರೆಹೊರೆಯ ಗುಂಪುಗಳ ಮೈತ್ರಿ ಸಂಘದ ಸದಸ್ಯರು, ಸ್ವ ಸಹಾಯ ಗುಂಪುಗಳ ಸದಸ್ಯರು, ವಿದ್ಯಾವಂತ ಮತ್ತು ಉತ್ತಮ ನಡತೆಯುಳ್ಳ ಖೈದಿಗಳು ಅರ್ಜಿ ಸಲ್ಲಿಸಬಹುದು. ಕಾನೂನು ಸ್ವಯಂ ಸೇವಕರನ್ನು ಸಂದರ್ಶನದ ಮೂಲಕ ನೇಮಕಾತಿ ಮಾಡಲಾಗುವುದು. ಆಸಕ್ತರು ನಿಗದಿತ ನಮೂನೆ ಮತ್ತು ಸಂಬಂಧಿಸಿದ ದಾಖಲಾತಿಗಳೊಂದಿಗೆ ಅರ್ಜಿಗಳನ್ನು ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳ ಕಚೇರಿಯಿಂದ ಪಡೆದು ಭರ್ತಿ ಮಾಡಿ ಜುಲೈ 27ರ ಮಧ್ಯಾಹ್ನ 2 ಗಂಟೆಯೊಳಗೆ ಸಲ್ಲಿಸಬೇಕು. ಲಕೋಟೆ ಮೇಲೆ ಅರೆಕಾಲಿಕ ಕಾನೂನು ಸ್ವಯಂ ಸೇವಕರ ಹುದ್ದೆಗಾಗಿ ಎಂಬ ಮೇಲ್ಬರಹದೊಂದಿಗೆ ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಕಳುಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರಾದ ಈಶ್ವರ್ ತಿಳಿಸಿದ್ದಾರೆ.

ವಿಕಲಚೇತನರಿಂದ ಅರ್ಜಿ ಆಹ್ವಾನ

ರಾಮನಗರ: ಜಿಲ್ಲೆಯ ಕನಕಪುರ, ಮಾಗಡಿ, ರಾಮನಗರ ಹಾಗೂ ಚನ್ನಪಟ್ಟಣ ತಾಲ್ಲೂಕಿನ ಗ್ರಾಮ ಪಂಚಾಯಿತಿಗಳಿಗೆ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸಲು ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕನಕಪುರ ತಾಲ್ಲೂಕಿನ ಹೇರಂದ್ಯಾಪನಹಳ್ಳಿ, ರಾಮನಗರ ತಾಲ್ಲೂಕಿನ ಗೋಪಹಳ್ಳಿ ಮತ್ತು ಭೈರಮಂಗಲ, ಚನ್ನಪಟ್ಟಣ ತಾಲ್ಲೂಕಿನ ಮಳೂರು ಪಟ್ಟಣ, ದಶವಾರ ಮತ್ತು ಸುಳ್ಳೇರಿ ಹಾಗೂ ಮಾಗಡಿ ತಾಲ್ಲೂಕಿನ ನೇತೆನಹಳ್ಳಿ, ಕಣ್ಣೂರು, ಬಿಸ್ಕೂರು ಮತ್ತು ಬಾಣವಾಡಿ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಜಿ ಸಲ್ಲಿಸಬಹುದಾಗಿದೆ.

24ರಿಂದ ಶಿಕ್ಷಕರ ಸಾಮಾನ್ಯ ವರ್ಗಾವಣೆ ಕೌನ್ಸಲಿಂಗ್

ಚಾಮರಾಜನಗರ: 2023-24ನೇ ಸಾಲಿನಲ್ಲಿ ಶಿಕ್ಷಕರ ಸಾಮಾನ್ಯ ವರ್ಗಾವಣೆ ಕೌನ್ಸಲಿಂಗ್ ಅನ್ನು ಜುಲೈ 24ರಿಂದ 29ರವರೆಗೆ ನಗರದ ಕೋರ್ಟ್ ರಸ್ತೆಯಲ್ಲಿರುವ ಶ್ರೀರಾಮಚಂದ್ರ ಪ್ರೌಢಶಾಲೆ ಹಾಗೂ ಉಪನಿರ್ದೇಶಕರ ಕಚೇರಿ ಸಂಭಾಂಗಣ ರೂಮ್ ನಂ-209 ರಲ್ಲಿ ನಡೆಸಲಾಗುವುದು.

ವರ್ಗಾವಣೆಗೆ ಅರ್ಹರಾದ ಶಿಕ್ಷಕರು ಸೇವಾದೃಢೀಕರಣ, ಇಇಡಿಎಸ್ ನಲ್ಲಿ ನಮೂದಿಸಿರುವ ಸೇವಾವಿವರ ಹಾಗೂ ಆಧ್ಯತೆ ಬಯಸಿರುವ ಶಿಕ್ಷಕರ ಆದ್ಯತೆಗೆ ಸಂಬಂಧಿಸಿದಂತೆ ಪ್ರಾಧಿಕಾರದಿಂದ ಪಡೆದಿರುವ ಮೂಲ ಪ್ರಮಾಣ ಪತ್ರಗಳೊಂದಿಗೆ ವರ್ಗಾವಣಾ ಸ್ಥಳದಲ್ಲಿ ಕಡ್ಡಾಯವಾಗಿ ಹಾಜರಾಗಿ ಪರಿಶೀಲನಾ ತಂಡಕ್ಕೆ ಸಲ್ಲಿಸಿ ದೃಡೀಕರಣ ಪಡೆದು ಕೌನ್ಸಲಿಂಗ್ ಮೂಲಕ ಸ್ಥಳ ಆಯ್ಕೆಮಾಡಿಕೊಳ್ಳಬಹುದು.

ಜುಲೈ 24ರಂದು ವರ್ಗಾವಣೆ ಕೌನ್ಸಲಿಂಗ್ ಅನ್ನು ನಗರದ ಕೋರ್ಟ್ ರಸ್ತೆಯಲ್ಲಿರುವ ಶ್ರೀರಾಮಚಂದ್ರ ಪ್ರೌಢಶಾಲೆಯಲ್ಲಿ ಮುಖ್ಯಶಿಕ್ಷಕರು, ದೈಹಿಕ ಶಿಕ್ಷಣ ಶಿಕ್ಷಕರು ಹಾಗೂ ಸಹಶಿಕ್ಷಕರು (ಪ್ರಾಥಮಿಕ) ವೃಂದಗಳಿಗೆ ಬೆಳಿಗ್ಗೆ 10.30 ರಿಂದ 12 ಗಂಟೆಯವರೆಗೆ ಕ್ರಮ ಸಂಖ್ಯೆ 1ರಿಂದ 21ರವರೆಗೆ, ಮಧ್ಯಾಹ್ನ 12 ರಿಂದ 1 ಗಂಟೆಯವರೆಗೆ ಕ್ರಮ ಸಂಖ್ಯೆ 1ರಿಂದ 13 ರವರೆಗೆ, ಮಧ

ಕರಗ ಮೆರವಣಿಗೆ: ಮದ್ಯ ಮಾರಾಟ ನಿಷೇಧ

ರಾಮನಗರ: ರಾಮನಗರ ಟೌನಿನಲ್ಲಿರುವ ಶ್ರೀ ಚಾಮುಂಡೇಶ್ವರಿ ಅಮ್ಮನವರ ಕರಗ ಮತ್ತು ಇತರೆ 7 ಕರಗಗಳ ಮೆರವಣಿಗೆಯು ರಾಮನಗರ ಟೌನಿನಲ್ಲಿರುವ ಪ್ರಮುಖ ಬೀದಿಗಳಲ್ಲಿ ಹಾಗೂ ಅತ್ಯಂತ ಸೂಕ್ಷ?ಮ ಪ್ರದೇಶಗಳ ಮೂಲಕ ಹಾದು ಹೋಗಲಿದ್ದು, ಮೆರವಣಿಗೆ ಮತ್ತು ರಸಮಂಜರಿ ಕಾರ್ಯಕ್ರಮಗಳ ಸಮಯದಲ್ಲಿ ಯಾವುದೇ ರೀತಿಯ ಕಾನೂನು ಸುವ್ಯವಸ್ಥೆಗೆ ಭಂಗ ಉಂಟಾಗದಂತೆ ತಡೆಯಲು ಮುನ್ನೆಚ್ಚರಿಕೆ ಕ್ರಮವಾಗಿ ರಾಮನಗರ ನಗರಸಭಾ ವ್ಯಾಪ್ತಿಯಲ್ಲಿ ಜು. 23 ರಂದು ಬೆಳಿಗ್ಗೆ 6 ಗಂಟೆಯಿಂದ ಜು. 24 ರಂದು ರಾತ್ರಿ 12 ಗಂಟೆಯವರೆಗೆ ಎಲ್ಲಾ ರೀತಿಯ ಮದ್ಯ ಮಾರಾಟವನ್ನು ನಿಷೇಧಿಸಿ ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್ ಅವರು ಆದೇಶ ಹೊರಡಿಸಿದ್ದಾರೆ.

ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ರಾಮನಗರ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ (ಪಿ.ಯು.ಸಿ ಮತ್ತು ಪಿಯು ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕೆ ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದ್ದ ಅರ್ಜಿ ಅವಧಿಯನ್ನು ಜು. 23ರ ವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ: 0850770004 ಅಥವಾ 8050770005 ಅನ್ನು ಸಂಪರ್ಕಿಸಿ.

ಅರ್ಜಿ ಆಹ್ವಾನ

ರಾಮನಗರ: ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಮತ್ಸ್ಯವಾಹಿನಿ ಯೋಜನೆಯಡಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಮೂಲಕ ಚಲಿಸಬಲ್ಲ ಪರಿಸರ ಸ್ನೇಹಿ ಕಿಯೋಸ್ಕ್ ತ್ರಿಚಕ್ರ ವಾಹನಗಳಲ್ಲಿ ತಾಜಾ ಮೀನು ಮತ್ತು ಮೀನು ಉತ್ಪನ್ನಗಳ ಮಾರಾಟಕ್ಕಾಗಿ ವಾಹನಗಳನ್ನು ಪರವಾನಗಿ ಆಧಾರದಲ್ಲಿ ಪಡೆಯಲು ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಸಾಮಾನ್ಯ ವರ್ಗದವರಿಗೆ 1 ಲಕ್ಷರೂ.ಗಳು ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಮಹಿಳಾ ವರ್ಗದವರಿಗೆ 0.50 ಲಕ್ಷ ರೂ.ಗಳ ಭದ್ರತಾ ಠೇವಣಿ ಹಾಗೂ 3000 ರೂ.ಗಳ ಮಾಸಿಕ ಬಾಡಿಗೆ ಮೊತ್ತ ನಿಗಧಿಪಡಿಸಲಾಗಿದೆ. ಆಸಕ್ತರು ಅರ್ಜಿ ನಮೂನೆಯನ್ನು ಸಂಬಂಧಿಸಿದ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳಿಂದ ಪಡೆದು ಎಲ್ಲಾ ಅಗತ್ಯ ದಾಖಲಾತಿಗಳೊಂದಿಗೆ ಆಗಸ್ಟ್ 5 ರೊಳಗೆ ಕಚೇರಿಯ ವೇಳೆಯಲ್ಲಿ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಮೀನುಗಾರಿಕೆ ಉಪನಿರ್ದೇಶಕರು, ರಾಮನಗರ ಜಿಲ್ಲೆ ಮೊ: 9448655014, ಮೀನುಗಾರಿಕೆ ಸಹಾಯಕ ನಿರ್ದೇಶಕರು, ರಾಮನಗರ ತಾಲ್ಲೂಕು ಮೊ:9986883110, ಮೀನುಗಾರಿಕೆ ಸಹಾಯಕ ನಿರ್ದೇಶಕರು, ಚನ್ನಪಟ್ಟಣ ತಾಲ್ಲೂಕು ಮೊ:9880347733 ಮತ್ತು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಕನಕಪುರ ತಾಲ್ಲೂಕು ಮೊ:8618277242 ಹಾಗೂ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮಾಗಡಿ ತಾಲ್ಲೂಕು ಮೊ:7795621180 ಇವರನ್ನು ಸಂಪರ್ಕಿಸಲು ತಿಳಿಸಿದ್ದಾರೆ.

ಅರ್ಜಿ ಆಹ್ವಾನ

ರಾಮನಗರ: ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯಡಿ 2020-21, 2021-22, 2022-23 ಮತ್ತು 2023-24ನೇ ಸಾಲಿನಲ್ಲಿ ಉಳಿಕೆಯಾಗಿರುವ ಗುರಿಗಳಿಗೆ ವಿವಿಧ ಯೋಜನೆಗಳಾದ ಮೀನು ಮರಿ ಪಾಲನೆ ಕೊಳಗಳ ನಿರ್ಮಾಣ, ಮೀನು ಕೃಷಿ ಕೊಳಗಳ ನಿರ್ಮಾಣ, ಮಧ್ಯಮ ಪ್ರಮಾಣದ ಅಲಂಕಾರಿಕಾ ಮೀನು ಸಾಕಾಣಿಕೆ ಘಟಕ ನಿರ್ಮಾಣ, ಮೀನು ಮಾರಾಟಕ್ಕೆ ಕಿಯೋಸ್ಕ್ ಗಳ ಸ್ಥಾಪನೆಗೆ ಸಹಾಯಧನ ನೀಡಲು ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ 40ರಷ್ಟು ಸಹಾಯಧನ ಮತ್ತು ಪರಿಶಿಷ್ಟ ಜಾತಿ/ಪಂಗಡ ಹಾಗೂ ಮಹಿಳಾ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ 60ರಷ್ಟು ಸಹಾಯಧನ ನೀಡಲಾಗುವುದು. ಆಸಕ್ತರು ಅರ್ಜಿ ನಮೂನೆಯನ್ನು ಸಂಬಂಧಿಸಿದ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳಿಂದ ಪಡೆದು ಎಲ್ಲಾ ಅಗತ್ಯ ದಾಖಲಾತಿಗಳೊಂದಿಗೆ ಆಗಸ್ಟ್ 5 ರೊಳಗೆ ಕಚೇರಿ ವೇಳೆಯಲ್ಲಿ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪನಿರ್ದೇಶಕರು, ರಾಮನಗರ ಜಿಲ್ಲೆ ಮೊ:9448655014, ಮೀನುಗಾರಿಕೆ ಸಹಾಯಕ ನಿರ್ದೇಶಕರು, ರಾಮನಗರ ತಾಲ್ಲೂಕು ಮೊ:9986883110 ಮೀನುಗಾರಿಕೆ ಸಹಾಯಕ ನಿರ್ದೇಶಕರು, ಚನ್ನಪಟ್ಟಣ ತಾಲ್ಲೂಕು ಮೊ:9880347733 ಮತ್ತು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಕನಕಪುರ ತಾಲ್ಲೂಕು ಮೊ:8618277242 ಹಾಗೂ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮಾಗಡಿ ತಾಲ್ಲೂಕು ಮೊ:7795621180 ಇವರನ್ನು ಸಂಪರ್ಕಿಸಬಹುದಾಗಿದೆ.

ಸಾಲ ಪಡೆಯಲು ಅರ್ಜಿ

ಬೆಂಗಳೂರು: 2024-25 ನೇ ಸಾಲಿನಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ರೈತ ಮಹಿಳೆಯರಲ್ಲಿ ಹೈನುಗಾರಿಕೆಯನ್ನು ಪ್ರೋತ್ಸಾಹಿಸಲು ಹಸು / ಎಮ್ಮೆ ಖರೀದಿಗೆ ಪಡೆಯುವ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡುವ ಮಹಿಳೆಯರಿಗೆ ರಾಜ್ಯ ಸರ್ಕಾರದಿಂದ ಶೇ.6ರ ಬಡ್ಡಿ ಸಹಾಯಧನ ನೀಡುವ ಯೋಜನೆ ಜಾರಿಯಲ್ಲಿದ್ದು. ರೈತಾಪಿ ವರ್ಗದವರು ಅರ್ಜಿ ಸಲ್ಲಿಸಿ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮತ್ತು ಇತರೆ ವರ್ಗದ ಆಸಕ್ತ ರೈತಾಪಿ ವರ್ಗದ ಮಹಿಳೆಯರು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮುಖ್ಯ ಪಶುವೈದ್ಯಾಧಿಕಾರಿಗಳು (ಆಡಳಿತ) ಬೆಂಗಳೂರು ಉತ್ತರ -9480319121, ಬೆಂಗಳೂರು ದಕ್ಷಿಣ-9448206163, ಬೆಂಗಳೂರು ಪೂರ್ವ-9448155033, ಆನೇಕಲ್-9448732044 ನ್ನು ಸಂಪರ್ಕಿಸಿ.

ಪೌರಕಾರ್ಮಿಕರ ಸಮಸ್ಯೆಯನ್ನು ಸಚಿವರ ಗಮನಕ್ಕೆ ತಂದು ಪರಿಹಾರಕ್ಕೆ ಪ್ರಯತ್ನಿಸುವ ಆಶ್ವಾಸನೆ

ಬೆಂಗಳೂರು: ಶೃಂಗೇರಿಯು ಒಂದು ಪವಿತ್ರ ಯಾತ್ರಾ ಸ್ಥಳವಾಗಿದ್ದು, ಪ್ರತಿದಿನ ಸಾವಿರಾರು ಪ್ರವಾಸಿಗರು ಹಾಗೂ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿದ್ದು ಸರ್ಕಾರದ ಶಕ್ತಿ ಯೋಜನೆಯಿಂದಾಗಿ ಪಟ್ಟಣಕ್ಕೆ ಆಗಮಿಸುವವರ ಸಂಖ್ಯೆಯು ಪ್ರತಿದಿನ ಹೆಚ್ಚುತ್ತಿದೆ. ಇದರಿಂದಾಗಿ ಪಟ್ಟಣದಲ್ಲಿ ಹೆಚ್ಚಿನ ಪ್ರಮಾಣದ ತ್ಯಾಜ್ಯವು ಸಂಗ್ರಹಣೆಯಾಗುತ್ತಿದ್ದು, ಈ ಕಸವನ್ನು ವಿಲೇವಾರಿ ಮಾಡಲು ಅಸಾಧ್ಯವಾಗಿರುತ್ತದೆ.

ಶೃಂಗೇರಿ ಪಟ್ಟಣ ಪಂಚಾಯಿತಿಯಲ್ಲಿ 15 ಜನ ಪೌರಕಾರ್ಮಿಕರ ಹುದ್ದೆ ಮಂಜೂರಾಗಿದ್ದು, ಪ್ರಸ್ತುತ ಕೇವಲ 2 ಜನ ಖಾಯಂ ಪೌರ ಕಾರ್ಮಿಕರು ಮಾತ್ರ ಸೇವೆ ಸಲ್ಲಿಸುತ್ತಿದ್ದಾರೆ ಹಾಗೂ ನೇರ ಪಾವತಿಯಡಿ 09 ಜನ, ಹೊರಗುತ್ತಿಗೆಯಲ್ಲಿ 02 ಹಾಗೂ ದಿನಗೂಲಿಯಲ್ಲಿ 01 ಪೌರಕಾರ್ಮಿಕರು ಸೇರಿ ಒಟ್ಟು 13 ಜನ ಕೆಲಸ ನಿರ್ವಹಿಸುತ್ತಿದ್ದಾರೆ. ಆದರೆ ಈ ಯಾತ್ರಾಸ್ಥಳದಲ್ಲಿ ಪ್ರತಿನಿತ್ಯ ಉತ್ಪತ್ತಿಯಾಗುವ ಹೆಚ್ಚಿನ ತ್ಯಾಜ್ಯವಸ್ತುವನ್ನು ಈ 13 ಜನ ಪೌರಕಾರ್ಮಿಕರಿಂದ ನಿರ್ವಹಣೆ ಮಾಡುವುದು ಕಷ್ಟಸಾಧ್ಯವಾಗಿರುತ್ತದೆ.

ಶೃಂಗೇರಿ ಪಟ್ಟಣ ಪಂಚಾಯಿತಿಯಲ್ಲಿ ಜನಸಂಖ್ಯೆಯ ಆಧಾರದಲ್ಲಿ ಪೌರಕಾರ್ಮಿಕರ ಸಂಖ್ಯೆಯನ್ನು ಪರಿಗಣಿಸಿಕೊಂಡು ಪಟ್ಟಣದ ಸ್ವಚ್ಛತಾ ಕೆಲಸವನ್ನು ನಿರ್ವಹಿಸಲು ಸಾಧ್ಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ತಿಳಿಸಿರುತ್ತಾರೆಂದು ತಿಳಿದುಬಂದಿದೆ. 'ಡಿ' ಗ್ರೂಪ್ ಹುದ್ದೆಗಳಿಗೆ ನೇಮಕಾತಿ ಅಧಿಕಾರವು ಜಿಲ್ಲಾಧಿಕಾರಿಗಳಿಗೆ ಇದ್ದರೂ ಪಂಚಾಯ್ತಿಯ ಸರ್ಕಾರದ ಪೂರ್ವ ಮಂಜೂರಾತಿ ಪಡೆಯಬೇಕೆಂಬ ಷರತ್ತು ಇರುತ್ತದೆ. ಶೃಂಗೇರಿ ಪಟ್ಟಣ ಪಂಚಾಯ್ತಿಗೆ ವಿಶೇಷ ಪ್ರಕರಣ ಎಂದು ಪರಿಗಣಿಸಿ 20 ಪೌರಕಾರ್ಮಿಕರ ಹುದ್ದೆಗಳನ್ನು ಮಂಜೂರು ಮಾಡಲು ಹಾಗೂ ಕರ್ನಾಟಕದ ಪುರಸಭೆಗಳ (ನಗರಸಭೆಗಳು, ಪುರಸಭೆಗಳು, ಪಟ್ಟಣ ಪಂಚಾಯ್ತಿಗಳ ನೇಮಕಾತಿ ವಿಶೇಷ) ನಿಯಮಗಳು 2022 ರಂತೆ ನೇಮಕಾತಿಗೆ ಅರ್ಜಿ ಸಲ್ಲಿಸುವ ಅವಧಿ ಮುಕ್ತಾಯಗೊಂಡಿರುವುದರಿಂದ ಈ ಅವಧಿಯನ್ನು ವಿಸ್ತರಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಪೌರಕಾರ್ಮಿಕರು ತಮ್ಮ ಎಲ್ಲಾ ಬೇಡಿಕೆಗಳ ಈಡೇರಿಕೆಗಾಗಿ ಇತ್ತೀಚೆಗೆ ಮುಷ್ಕರ ನಡೆಸಿದ್ದು, ಡೆಂಗ್ಯು ಪ್ರಕರಣಗಳ ಹೆಚ್ಚಳದ ಹಿನ್ನಲೆಯಲ್ಲಿ ಜನಪ್ರತಿನಿಧಿಗಳು ಹಾಗೂ ಉನ್ನತ ಮಟ್ಟದ ಅಧಿಕಾರಿಗಳ ಆಶ್ವಾಸನೆಯಿಂದ ಮುಷ್ಕರವನ್ನು ಹಿಂಪಡೆದಿರುತ್ತಾರೆ.

ಕರ್ನಾಟಕ ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರಾದ ಡಾ. ಆರತಿ ಕೃಷ್ಣ, ಅವರು ಇತ್ತೀಚೆಗೆ ಶೃಂಗೇರಿ ದೇವಸ್ಥಾನಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಪೌರಕಾರ್ಮಿಕರು ಈ ಎಲ್ಲಾ ಸಮಸ್ಯೆಗಳ ಬಗ್ಗೆ, ಮನವಿಯನ್ನು ಸಲ್ಲಿಸಿ. ಸರ್ಕಾರದಿಂದ ಸೂಕ್ತ ಪರಿಹಾರ ದೊರಕಿಸಿಕೊಡಬೇಕೆಂದು ಮನವಿ ಸಲ್ಲಿಸಿದ್ದರು. ಈ ಬಗ್ಗೆ ಪ್ರತಿಕ್ರಿಯಿಸಿದ ಉಪಾಧ್ಯಕ್ಷರು ಸರ್ಕಾರದ ಮಟ್ಟದಲ್ಲಿ ಸಚಿವರ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳುವಲ್ಲಿ ಪ್ರಯತ್ನಿಸುವುದಾಗಿ ಆಶ್ವಾಸನೆ ನೀಡಿರುತ್ತಾರೆ.

ಈ ಹಿನ್ನಲೆಯಲ್ಲಿ ಪೌರಕಾರ್ಮಿಕರನ್ನು ಖಾಯಂಗೊಳಿಸುವ ಹಾಗೂ ಹೆಚ್ಚುವರಿ ಹುದ್ದೆಯನ್ನು ಮಂಜೂರು ಮಾಡುವ ಬಗ್ಗೆ ಹಾಗೂ ಇತರೆ ಎಲ್ಲಾ ಬೇಡಿಕೆಗಳನ್ನು ಈಡೇರಿಸುವ ಸಂಬಂಧ ಕರ್ನಾಟಕ ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರಾದ ಡಾ. ಆರತಿ ಕೃಷ್ಣ ಅವರು ಇಂದು ಪೌರಾಡಳಿತ ಸಚಿವರಾದ ರಹೀಂ ಖಾನ್‌ರವರನ್ನು ಭೇಟಿಯಾಗಿ ಮನವಿಯನ್ನು ಸಲ್ಲಿಸಿದರು. ಸದರಿ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವರು ಕೂಡಲೇ ಈ ಸಮಸ್ಯೆಗೆ ಪರಿಹಾರವನ್ನು ಕಂಡುಕೊಳ್ಳಲು ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡಲಾಗುವುದೆಂದು ಆಶ್ವಾಸನೆ ನೀಡಿರುತ್ತಾರೆ ಎಂದು ಕರ್ನಾಟಕ ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ನಾಡಪ್ರಭು ಕೆಂಪೇಗೌಡರ 515ನೇ ಜಯಂತ್ಯೋತ್ಸವ

ಬೆಂಗಳೂರು: ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮತ್ತು ಜಲಮಂಡಳಿ ನೌಕರರ ಸಂಘ ಹಾಗೂ ಬೆಂಗಳೂರು ನಗರ ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಬಳಗ ಇವರ ಸಂಯುಕ್ತ ಆಶ್ರಯದಲ್ಲಿ ನಾಡಪ್ರಭು ಕೆಂಪೇಗೌಡರ 515ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಜುಲೈ 23 ರಂದು ಮಧ್ಯಾಹ್ನ 2.30 ಗಂಟೆಗೆ ಬೆಂಗಳೂರು ಜಲಮಂಡಳಿಯ ಸುವರ್ಣ ಭವನ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಇಲ್ಲಿ ಆಯೋಜಿಸಲಾಗಿದೆ.

ಸಮಾರಂಭದ ದಿವ್ಯ ಸಾನಿಧ್ಯವನ್ನು ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾ ಸ್ವಾಮೀಜಿಯವರು, ವಹಿಸಲಿದ್ದು, ಈ ಸಮಾರಂಭದ ಘನ ಉಪಸ್ಥಿತಿಯನ್ನು ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ವಹಿಸಲಿದ್ದಾರೆ.

ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ಎಸ್. ಆರ್.ಉಮಾಶಂಕರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೆಂಗಳೂರು ಜಲಮಂಡಳಿಯ ಅಧ್ಯಕ್ಷರಾದ ಡಾ. ರಾಮ್ ಪ್ರಸಾತ್ ಮನೋಹರ್ ಅವರು ವಹಿಸಲಿದ್ದಾರೆ. ಖ್ಯಾತ ಇತಿಹಾಸ ತಜ್ಞರು ಹಾಗೂ ಸಂಶೋಧಕರಾದ ಡಾ. ತಲಕಾಡು ಚಿಕ್ಕರಂಗೇಗೌಡ, ಅವರು ಪ್ರಧಾನ ಭಾಷಣ ಮಾಡಲಿದ್ದಾರೆ. ಹಾಗೂ ಮಂಡಳಿಯ ಎಲ್ಲಾ ಹಿರಿಯ/ಕಿರಿಯ ಅಧಿಕಾರಿಗಳು/ಸಿಬ್ಬಂದಿ ನೌಕರರುಗಳು/ಮಂಡಳಿಯ ಎಲ್ಲಾ ನೌಕರರ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರುಗಳು ಮತ್ತು ಪದಾಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುತ್ತಿದ್ದಾರೆ ಎಂದು ಬೆಂಗಳೂರು ಜಲಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಂಗಾರತಿ ಮಾದರಿಯಲ್ಲಿ ಕಾವೇರಿ ಆರತಿ:ಡಿಸಿಎಂ ಡಿ.ಕೆ.ಶಿವಕುಮಾರ್

ಮಂಡ್ಯ: ರೈತರ ಜೀವನಾಡಿಯಾಗಿರುವ ಕಾವೇರಿ ತಾಯಿಗೆ ಪುಣ್ಯ ಕ್ಷೇತ್ರ ವಾರಣಾಸಿಯಲ್ಲಿ ಮಾಡುವ ಗಂಗಾರತಿ ಮಾದರಿಯ ರೀತಿ ಕಾವೇರಿ ಆರತಿ ಮಾಡಲು ಚಿಂತಿಸಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.

ಅವರು ಇಂದು ಕೃಷ್ಣರಾಜಸಾಗರ ಅಣೆಕಟ್ಟಿನ ಪರಿಶೀಲನೆ ನಡೆಸಿದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ. ಕಾವೇರಿ ಆರತಿಯನ್ನು ಪ್ರಾರಂಭಿಸಲು ಮಂಡ್ಯ ಹಾಗೂ ಕೊಡಗು ಜಿಲ್ಲೆಯ ಸ್ಥಳೀಯ ಶಾಸಕರು ಹಾಗೂ ಧಾರ್ಮಿಕ ದತ್ತಿ ಇಲಾಖೆಯ ಅಧಿಕಾರಿಗಳ ತಂಡ ರಚಿಸಿ ಕಾವೇರಿ ಆರತಿ ಪ್ರಾರಂಭಿಸಲು ಒಂದು ತಿಂಗಳೊಳಗೆ ವರದಿ ನೀಡಲು ತಿಳಿಸಲಾಗುವುದು ಎಂದರು.

1657 ಕೆರೆಗಳನ್ನು ತುಂಬಿಸಲು ಕ್ರಮ:ಈ ಬಾರಿ ಕಾವೇರಿ ಜಲಾನಯನ ಪ್ರದೇಶದಲ್ಲಿ ಉತ್ತಮವಾಗಿ ಮಳೆಯಾಗುತ್ತಿದ್ದು, ಕೆ.ಆರ್.ಎಸ್. ಜಲಾಶಯ ಭರ್ತಿಯಾಗುತ್ತಿದೆ. ಜಲಾಶಯದಿಂದ ನೀರು ಬಿಡುಗಡೆ ಮಾಡಿ ಅಧಿಕಾರಿಗಳಿಗೆ ಸೂಚನೆ ನೀಡಿ ಕಾವೇರಿ ಜಲಾನಯನ ಪ್ರದೇಶದಲ್ಲಿ ಬರುವ 1657 ಕೆರೆಗಳನ್ನು ತುಂಬಿಸಲಾಗುವುದು ಎಂದರು.

ರೈತರ ಹಿತಕಾಯಲು ಸದಾ ಬದ್ಧ:ನಮ್ಮ ಸರ್ಕಾರ ರೈತಪರವಾದ ಸರ್ಕಾರವಾಗಿದ್ದು, ಯಾವುದೇ ತೊಂದರೆ ಬಂದರೂ ರೈತರ ಹಿತ ಕಾಯಲು ಸದಾ ಬದ್ಧವಾಗಿರುತ್ತೇವೆ. ಕೃಷಿಸಚಿವರು ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ತೊಂದರೆಯಾಗದಂತೆ ಮುಂಜಾಗ್ರತೆ ವಹಿಸಿ ಎರಡು ಲಕ್ಷ ಹೆಕ್ಟೇರ್ ಬಿತ್ತನೆಯ ಕಾರ್ಯಕ್ರಮ ರೂಪಿಸಿದ್ದು, 5,90,000 ಕ್ವಿಂಟಾಲ್ ಬಿತ್ತನೆ ಬೀಜ ಹಾಗೂ 27 ಲಕ್ಷ ಟನ್ ರಸಗೊಬ್ಬರವನ್ನು ಸಹ ದಾಸ್ತಾನು ಮಾಡಲಾಗಿದೆ. ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಕೊರತೆ ಉಂಟಾಗದಂತೆ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ. 30 ಲಕ್ಷ ರೈತರಿಗೆ 25 ಸಾವಿರ ಕೋಟಿ ಶೂನ್ಯ ಬಡ್ಡಿಯಲ್ಲಿ ಸಾಲ ವಿತರಣೆ ಮಾಡಲಾಗಿದೆ ಎಂದರು.

ಬೃಂದಾವನ ಅಮ್ಯೂಸ್‌ಮೆಂಟ್ ಪಾರ್ಕ್: ಕೆ.ಆರ್.ಎಸ್ ನಲ್ಲಿರುವ ಮ್ಯೂಸಿಕಲ್ ಪಾರ್ಕ್ ನ್ನು ಅಭಿವೃದ್ಧಿಪಡಿಸುವುದರ ಜೊತೆಗೆ ಹೊಸ ರೂಪ ನೀಡಲು ಈಗಾಗಲೇ ತಾಂತ್ರಿಕ ವರದಿಯನ್ನು ಪಡೆಯಲಾಗಿದೆ. ಬೃಂದಾವನ ಅಮ್ಯೂಸ್‌ಮೆಂಟ್ ಪಾರ್ಕ್ ನ್ನು ಪಿ.ಪಿ.ಪಿ ಮಾದರಿಯಲ್ಲಿ ಟೆಂಡರ್ ಕರೆದು ರೂಪಿಸಲಾಗುವುದು. ಈ ಪಾರ್ಕ್ ನಿಂದ ಸುಮಾರು 8 ರಿಂದ 10 ಸಾವಿರ ಸ್ಥಳೀಯ ಜನರಿಗೆ ಉದ್ಯೋಗ ಸಿಗಲಿದೆ ಎಂದರು.

ಪರಿಶೀಲನೆಯ ವೇಳೆ ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ, ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶ್ರೀರಂಗಪಟ್ಟಣ ಶಾಸಕ ರಮೇಶ್ ಬಾಬು ಬಂಡಿಸಿದ್ದೇಗೌಡ, ಮದ್ದೂರು ಶಾಸಕ ಕೆ.ಎಂ. ಉದಯ್, ಮೇಲುಕೋಟೆ ಶಾಸಕ

ತಪ್ಪಿತಸ್ಥರಿಗೆ ಶಿಕ್ಷೆ ನಿಶ್ಚಿತ: ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು: ತಪ್ಪಿತಸ್ಥರಿಗೆ ನಿಶ್ಚಿತವಾಗಿ ಶಿಕ್ಷೆ ಆಗಬೇಕು. ಇದರಲ್ಲಿ ಯಾವುದೇ ರೀತಿಯ ರಾಜಿ ಸಂದಾನ ನಮ್ಮ ಸರ್ಕಾರ ಮಾಡುವುದಿಲ್ಲ. ಉಪ್ಪು ತಿಂದವರು ನೀರು ಕುಡಿಯಲೇ ಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಕಲಾಪದ ವೇಳೆ, ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ಸಮುದಾಯದ ಅಭಿವೃದ್ಧಿಗೆ ಮೀಸಲಾಗಿದ್ದ ಹಣ ದುರುಪಯೋಗವಾಗಿರುವ ಕುರಿತು ನಿಯಮ 68ರ ಮೇರೆಗೆ ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ ನೀಡುತ್ತಾ ಮಾತನಾಡಿದ ಮುಖ್ಯಮಂತ್ರಿಗಳು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ 33 ಲಕ್ಷ ಅಕ್ರಮ ನೆಡೆದಿದೆ ಎಂದು ವಿರೋಧಪಕ್ಷದವರು ಆರೋಪಿಸಿದ್ದಾರೆ. ಸರ್ಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಠ ಪಂಗಡದವರ ವಿರುದ್ಧವಾಗಿದೆ ಎಂದು ಹೇಳಿ ಸತ್ಯಕ್ಕೆ ದೂರವಾದ ಆರೋಪ ಮಾಡಿದ್ದಾರೆ. ಆದರೆ ಅವರ ಆರೋಪದಲ್ಲಿ ಯಾವುದೇ ಸತ್ಯಾಂಶ ಇಲ್ಲ ಎಂದು ತಿಳಿಸಿದರು.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಅಕ್ರಮಕ್ಕೆ ಸರ್ಕಾರ ಆಗಲಿ, ಆರ್ಥಿಕ ಇಲಾಖೆಯಾಗಲಿ ಅಥವಾ ನನಗೆ ಯಾವುದೇ ರೀತಿಯ ಸಂಬಂಧ ಇಲ್ಲ. ಅಕ್ರಮ ನಡೆದಿರುವ ಬಗ್ಗೆ ತನಿಖೆ ಪ್ರಾರಂಭಿಸಲಾಗಿದೆ. ತಪ್ಪಿತಸ್ಥರು ಗೊತ್ತಾಗಬೇಕು, ತನಿಖೆ ಮುಗಿದ ಮೇಲೆ ಚಾರ್ಜ್‌ಶೀಟ್ ಆಗಬೇಕು ನಂತರ ಆರೋಪ ಸಾಬೀತಾಗ ಬೇಕು. ಆರೋಪ ಸಾಬೀತಾದ ನಂತರ ತಪ್ಪಿತಸ್ಥರಿಗೆ ಶಿಕ್ಷೆ ಆಗುತ್ತೆ. ಸರ್ಕಾರವು ಎಲ್ಲಿಯೂ ರಾಜಿ ಸಂದಾನಗಳನ್ನು ಮಾಡಿಕೊಳ್ಳದೇ ನ್ಯಾಯಾಲಯದ ಮೂಲಕ ಶಿಕ್ಷೆ ಕೊಡಿಸಲಾಗುವುದು ಎಂದು ತಿಳಿಸಿದರು.

ವಿರೋಧ ಪಕ್ಷದವರು ಗೋಬೆಲ್ಸ್ ಥಿಯರಿಯನ್ನು ಬಳಸುತ್ತಿದ್ದಾರೆ. ಗೊಬೆಲ್ಸ್ ಹಿಟ್ಲರ್ ಮಂತ್ರಿ ಮಂಡಲದಲ್ಲಿ ಮಂತ್ರಿಯಾಗಿದ್ದವರು, ಇವರನ್ನು ಸುಳ್ಳುಗಳನ್ನು ಹೇಳುವುದಕ್ಕಾಗಿಯೇ ಅವರ ಮಂತ್ರಿಮಂಡಲದಲ್ಲಿ ಇಟ್ಟುಕೊಂಡಿದ್ದರು. ಆ ತಂತ್ರಗಾರಿಕೆ ಬಳಸಿ ಸುಳ್ಳು ಆರೋಪಗಳನ್ನು ಮಾಡುತ್ತಿದ್ದಾರೆ. ಯಾವಾಗಲೂ ಸುಳ್ಳು ಆರೋಪ ಮಾಡಿ ಸರ್ಕಾರದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುವುದು ಇವರ ಜಾಯಮಾನ. ಸುಳ್ಳುಗಳನ್ನು ಸತ್ಯ ಮಾಡುವುದು ಕಷ್ಟ ಎಂದು ತಿಳಿಸಿದರು.

ನಮ್ಮ ಸರ್ಕಾರ ಪರಿಶಿಷ್ಟ ಜಾತಿ ಮತ್ತು ಪಂಗಡದವರ, ಅಲ್ಪಸಂಖ್ಯಾತರ, ರೈತರ, ಮಹಿಳೆಯರ ಮತ್ತು ಕಾರ್ಮಿಕರ ವಿರುದ್ಧವಾಗಿದೆ ಎಂದು ವಿರೋಧ ಪಕ್ಷದವರು ಹೇಳುತ್ತಿರುವರು. ಅವರು ಯಾರೂ ಸಾಮಾಜಿಕ ನ್ಯಾಯದ ಪರವಾಗಿಲ್ಲ. ಸಂವಿಧಾನವನ್ನು ವಿರೋಧಿಸುವವರು ಅವರು. ಸಂವಿಧಾನವು ಎಲ್ಲರಿಗೂ ಜಾತಿ-ಭೇದ, ಭಾಷೆ ಪ್ರಾಂತ್ಯ ಎಲ್ಲವನ್ನು, ಎಲ್ಲರನ್ನೂ ಒಳಗೊಂಡಂತೆ ಸಮನಾದ ಅವಕಾಶಗಳನ್ನು ಕಲ್ಪಿಸಿಕೊಡುತ್ತದೆ. ಆದರೆ ವಿರೋಧ ಪಕ್ಷದವರಿಗೆ ಅದರಲ್ಲಿ ನಂಬಿಕೆ ಇಲ್ಲ. ಸಂವಿಧಾನವನ್ನೇ ತಿದ್ದಲು ಹೊರಟವರು. ಈ ಹಗರಣವನ್ನು ತೆಗೆದುಕೊಂಡು ಸರ್ಕಾರಕ್ಕೆ ಮಸಿ ಬಳಿಯುವ ಕೆಲಸ ಮಾಡಲು ಹೊರಟಿದ್ದಾರೆ. ಆದರೆ ನಮ್ಮ ಸರ್ಕಾರ ಸಂವಿಧಾನದಲ್ಲಿ ನಂಬಿಕೆ ಇಟ್ಟಿರುವ ಸರ್ಕಾರ. ದೀನ ದಲಿತರ, ಅಲ್ಪಸಂಖ್ಯಾತರ, ಮಹಿಳೆಯರ, ರೈತರ, ಕಾರ್ಮಿಕರ ಪರವಾದ ಸರ್ಕಾರ. ಎಲ್ಲರಿಗೂ ಸಮನಾದ ಅವಕಾಶಗಳನ್ನು ಕಲ್ಪಿಸಿಕೊಡುವ ಸರ್ಕಾರ. ಈ ಹಗರಣದಲ್ಲಿ ತಪ್ಪಿತಸ್ಥರು ಯಾರೇ ಇರಲಿ ಅವರಿಗೆ ಶಿಕ್ಷೆ ಆಗುತ್ತದೆ ಯಾವುದೇ ಕಾರಣಕ್ಕೂ ಬಿಡುವುದಿಲ್ಲ ಎಂದು ಹೇಳಿದರು.

2013ರಲ್ಲಿ ಕರ್ನಾಟಕದಲ್ಲಿ ಎಸ್.ಟಿ.ಪಿ / ಟಿ.ಎಸ್.ಪಿ ಕಾಯಿದೆಯನ್ನು

ಜಾರಿಗೆ ತಂದ ಸರ್ಕಾರ ಕಾಂಗ್ರೇಸ್ ಸರ್ಕಾರ. ಅದು ನಮ್ಮ ಸರ್ಕಾರ. ಇಡೀ ದೇಶದಲ್ಲಿ ಆಂಧ್ರ ಪ್ರದೇಶ ಮತ್ತು ತೆಲಾಂಗಣದಲ್ಲಿ ಈ ಕಾಯಿದೆ ಇದೆ. ಬೇರೆ ಯಾವ ರಾಜ್ಯದಲ್ಲಿಯೂ ಈ ಕಾಯಿದೆ ಇಲ್ಲ ಕೇಂದ್ರ ಸರ್ಕಾದಲ್ಲಿ ಈ ಕಾಯಿದೆಯನ್ನು ಜಾರಿ ಮಾಡಿದ್ದಾರೆಯೇ? ಎಂದು ಪ್ರಶ್ನಿಸಿದರು. ಈ ಕಾನೂನು ಮಾಡಿದವರು ನಾವು ಮೊದಲು 5 ಸಾವಿರ 6 ಸಾವಿರ ಮಾತ್ರ ಖರ್ಚು ಆಗುತ್ತಿತ್ತು. ನಮ್ಮ ಕಾಂಗ್ರೇಸ್ ಸರ್ಕಾರವು 2024-25ನೇ ಸಾಲಿನ ಆಯವ್ಯಯದಲ್ಲಿ 39121 ಕೋಟಿ ರೂಗಳನ್ನು ಎಸ್.ಸಿ.ಪಿ / ಟಿಎಸ್.ಪಿ ಯೋಜನೆಗೆ ಮೀಸಲಿಟ್ಟಿದ್ದೇವೆ ಎಂದು ತಿಳಿಸಿದರು.

ಪ್ರತಿ ವರ್ಷ ಬಜೆಟ್ ಗಾತ್ರ ಹೆಚ್ಚಾಗಬೇಕು. ಪರಿಶಿಷ್ಟ ಜಾತಿಯವರು 17.15 ರಷ್ಟಿದ್ದಾರೆ. ಪರಿಶಿಷ್ಟ ಪಂಗಡದವರು 6.95 ರಷ್ಟಿದ್ದಾರೆ. ಒಟ್ಟು 24.1 ರಷ್ಟಿದ್ದಾರೆ. ಈ ವರ್ಷ ಬಜೆಟ್‌ನಲ್ಲಿ 169 ಸಾವಿರ ಕೋಟಿ ಅಭಿವೃದ್ಧಿ ಕಾಮಗಾರಿಗಳಿಗಾಗಿ ಖರ್ಚು ಮಾಡುತ್ತಿದ್ದರೆ, ಅದರಲ್ಲಿ 39 ಸಾವಿರ ಕೋಟಿಗಳನ್ನು ಎಸ್.ಟಿ.ಪಿ. / ಟಿ.ಎಸ್.ಪಿ ಯೋಜನೆಗೆ ಮೀಸಲಿಟ್ಟಿದ್ದೇವೆ. ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯಗಳನ್ನು ಈಡೇರಿಸುವಂತಹ ಕೆಲಸಗಳನ್ನು ಮಾಡುತ್ತಿರುವುದು ನಮ್ಮ ಕಾಂಗ್ರೇಸ್ ಸರ್ಕಾರ ಮಾತ್ರ ಎಂದು ತಿಳಿಸಿದರು.

ಕಾಂಟ್ರಾಕ್ಟ್‌ನಲ್ಲಿ ಮೀಸಲಾತಿ ತಂದಿದ್ದು ನಮ್ಮ ಕಾಂಗ್ರೇಸ್ ಸರ್ಕಾರ. ಶ್ರೀಮತಿ ರತ್ನಪ್ರಭ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚನೆ ಮಾಡಿ, ಅವರಿಂದ ವರದಿ ಪಡೆದು ಬಡ್ತಿಯಲ್ಲಿ ಮೀಸಲಾತಿಯನ್ನು ತಂದಿದ್ದು ನಮ್ಮ ಸರ್ಕಾರ. ಕಾಯ್ದೆ ಜಾರಿ ಮಾಡಲು ವಿರೋಧ ಪಕ್ಷದವರು ಪಿ.ಟಿ.ಸಿ.ಎಲ್ ಕಾಯಿದೆಯನ್ನು ಜಾರಿ ಮಾಡಲಿಲ್ಲ. ಆದರೆ ಪಿಟಿ.ಸಿ.ಎಲ್ ಕಾಯಿದೆಯನ್ನು ಜಾರಿಗೆ ತಂದಿದ್ದು ನಾವು. ಎಲ್ಲರಿಗೂ ರಾಜಕೀಯ ಸ್ವಾತಂತ್ರ್ಯ ಸಿಕ್ಕರೆ ಸಾಲದು. ಆರ್ಥಿಕ ಮತ್ತು ಸಾಮಾಜಿಕ ಸ್ವಾತಂತ್ರ್ಯ ಸಿಕ್ಕಾಗ ಮಾತ್ರ ಸ್ವಾತ್ರಂತ್ರವು ಸಾಕಾರವಾಗುತ್ತದೆ ಎಂದು ಡಾ. ಬಿ.ಆರ್. ಅಂಬೇಡ್ಕರ್ ಸಂವಿಧಾನಕ್ಕೂ ಮುನ್ನ ಮಾಡಿದ ಭಾಷಣದಲ್ಲಿ ಹೇಳಿರುವ ಮಾತುಗಳನ್ನು ಇದೇ ಸಮಯದಲ್ಲಿ ಮುಖ್ಯಮಂತ್ರಿಗಳು ಸದನದಲ್ಲಿ ತಿಳಿಸಿದರು.

ಇದೇ ಸಮಯದಲ್ಲಿ ಪ್ರತಿ ಪಕ್ಷಗಳು ವಿರೋಧ ವ್ಯಕ್ತಪಡಿಸಿ ಸದನದ ಬಾವಿಗಿಳಿದು ಮುಖ್ಯಮಂತ್ರಿಗಳ ಉತ್ತರಕ್ಕೆ ವಿರೋಧ ವ್ಯಕ್ತಪಡಿಸಲಾರಂಭಿಸದರು. ನಂತರ ಮುಖ್ಯಮಂತ್ರಿಗಳು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಹಗರಣದ ಕುರಿತು ಮುಂದುವರೆದ ಉತ್ತರವನ್ನು ಲಿಖಿತ ರೂಪದಲ್ಲಿ ಸದನದಲ್ಲಿ ಮಂಡಿಸಿದರು.

ಡೇ ಕೇರ್ ಕೀಮೊ ಥೆರಪಿ ಕೇಂದ್ರ ಅತಿ ಶೀಘ್ರದಲ್ಲೇ ಪ್ರಾರಂಭ

ಬೆಂಗಳೂರು: 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಣೆಯಾಗಿರುವಂತೆ ಡೇ ಕೇರ್ ಕೀಮೊ ಥೆರಪಿ ಕೇಂದ್ರಗಳನ್ನು ಆರೋಗ್ಯ ಇಲಾಖೆಯಡಿ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಅತೀ ಶೀಘ್ರದಲ್ಲಿ ಪ್ರಾರಂಭಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ಇಂದು ವಿಧಾನಾ ಪರಿಷತ್ತಿನ ಕಲಾಪದ ವೇಳೆ, ವಿಧಾನ ಪರಿಷತ್ತಿನ ಸದಸ್ಯರಾದ ಕೆ.ಎ. ತಿಪ್ಪೇಸ್ವಾಮಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಎಸ್.ಸಿ.ಡಿ ವಿಭಾಗದಲ್ಲಿ ಮೂರು ಕ್ಯಾನ್ಸರ್‌ಗಳಾದ ಬಾಯಿ, ಸ್ತನ ಹಾಗೂ ಗರ್ಭ ಕಂಠದ ಕ್ಯಾನ್ಸರ್‌ಗಳ ತಪಾಸಣೆ ಪತ್ತೆ ಹಚ್ಚುವಿಕೆ ಹಾಗೂ ತೃತೀಯ ಹಂತದ ಚಿಕಿತ್ಸೆ ರಾನೆಯ ಕಾರ್ಯಕ್ರಮಗಳನ್ನು ಎನ್.ಸಿ.ಡಿ ಪೋರ್ಟಲ್‌ನಲ್ಲಿ ದಾಖಲೆ ಮಾಡಲಾಗುತ್ತಿದೆ. ಕೇಂದ್ರ ಸರ್ಕಾರದ 2013ರ ಎಸ್.ಪಿ.ಎನ್.ಸಿ.ಡಿ ಮಾರ್ಗಸೂಚಿ ಅನ್ವಯ ತಪಾಸಣೆ ಐಚ್ಛಿಕ ವಿಷಯವಾಗಿರುತ್ತದೆ. ಪ್ರಸ್ತುತ ಎಸ್.ಸಿ.ಡಿ ಕಾರ್ಯಕ್ರಮದಡಿಯಲ್ಲಿ ಬಾಯಿ, ಸ್ತನ ಮತ್ತು ಗರ್ಭಕಂಠದ ಕ್ಯಾನ್ಸರ್ಗೆ ಸಂಬಂಧಿಸಿದಂತೆ ತಪಾಸಣೆಯನ್ನು ಎಲ್ಲಾ ಹಂತದ ಆರೋಗ್ಯ ಕೇಂದ್ರಗಳಲ್ಲಿ ಸಮುದಾಯ ಆರೋಗ್ಯ ಅಧಿಕಾರಿಗಳು ಮಹಿಳೆಯರಿಗೆ ಪ್ರಾರಂಭಿಕ ಹಂತದಲ್ಲೇ ಪತ್ತೆ ಹಚ್ಚುವ ಕಾರ್ಯವನ್ನು ನಿರ್ವಹಿಸುತ್ತಿದ್ದಾರೆ. ರಾಜ್ಯದಲ್ಲಿ 35-40ರ ವಯಸ್ಸಿನ ಮಹಿಳೆಯರಿಗೆ ಕ್ಯಾನ್ಸರ್ ತಪಾಸಣೆಯನ್ನು ಕಡ್ಡಾಯಗೊಳಿಸಿರುವುದಿಲ್ಲ. ಸ್ವಯಂ ದೈಹಿಕ ಪರೀಕ್ಷೆ ಮುಖಾಂತರ ಸ್ತನ ಕ್ಯಾನ್ಸರ್ ಪತ್ತೆ ಹಚ್ಚಲಾಗುತ್ತಿದೆ. ಬಾಯಿ ಪರೀಕ್ಷೆ ಮೂಲಕ ಬಾಯಿ ಕ್ಯಾನ್ಸರ್ ಪತ್ತೆ ಹಚ್ಚಲಾಗುತ್ತಿದೆ. ಸಂಶಯಾಸ್ಪದ ಪ್ರಕರಣಗಳ ಹೆಚ್ಚಿನ ತಪಾಸಣೆಗಾಗಿ ಸರ್ಕಾರಿ ಆಸ್ಪತ್ರೆಗಳಿಗೆ ಅಂದರೆ ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಿಗೆ ಕಳುಹಿಸ ಲಾಗುವುದು. ಮುಂದುವರೆದು ಹೆಚ್ಚಿನ ಚಿಕಿತ್ಸೆಗಾಗಿ ತೃತೀಯ ಹಂತದ ಆಸ್ಪತ್ರೆಗಳಿಗೆ ಎಬಿ-ಎಆರ್ಕೆ ಅಡಿಯಲ್ಲಿ ಚಿಕಿತ್ಸೆಗಾಗಿ ಕಳುಹಿಸಿಕೊಡಲಾಗುತ್ತಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರದಿಂದ ರಾಜ್ಯದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ ಅಡಿಯಲ್ಲಿ ಸಮಗ್ರ ಎಸ್.ಸಿ.ಡಿ ಕಾರ್ಯಕ್ರಮದಡಿ ಕ್ಯಾನ್ಸರ್ ಖಾಯಿಲೆಗೆ ಸಂಬಂಧಿಸಿದಂತೆ ತಪಾಸಣೆ ಹಾಗೂ ಚಿಕಿತ್ಸೆಯನ್ನು ಜಿಲ್ಲಾಮಟ್ಟದ ಸರ್ಕಾರಿ ಆಸ್ಪತ್ರೆಗಳಿಂದ ಆರೋಗ್ಯ ಕ್ಷೇಮ ಕೇಂದ್ರದ ಹಂತದವರೆಗೂ ನಡೆಸಲಾಗುತ್ತಿದೆ ಗರ್ಭಕಂಠದ ಕ್ಯಾನ್ಸರ್ ಮತ್ತು ಸ್ತನ ಕ್ಯಾನ್ಸರ್ ತಡೆಗಟ್ಟಲು 2024-25ನೇ ಸಾಲಿನಲ್ಲಿ ರಾಜ್ಯ ಬಜೆಟ್ ಅನುದಾನದಡಿಯಲ್ಲಿ ಅಠಟಠಿಥಠಿಜಿ ಯಂತ್ರಗಳ ಖರೀದಿಗಾಗಿ ಅನುದಾನ ಅನುಮೋದನೆಗೊಂಡಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ. ಸ್ತನ ಕ್ಯಾನ್ಸರ್ ತಪಾಸಣೆಗಾಗಿ 20 ಜಿಲ್ಲಾ ಆಸ್ಪತ್ರೆಗಳಿಗೆ ಡಿಜಿಟಲ್ ಮೊಮೋಗ್ರಾಮ್ ಯಂತ್ರಗಳನ್ನು ಟೆಂಡರ್ ಮುಖಾಂತರ ಖರೀದಿಸುವ ಪ್ರಕ್ರಿಯೆ ಕೊನೆಯ ಹಂತದಲ್ಲಿದೆ ಎಂದು ತಿಳಿಸಿದರು.

ಪ್ರಸ್ತುತ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ 9 ರಿಂದ 14 ವರ್ಷದ ಹೆಣ್ಣು ಮಕ್ಕಳಿಗೆ ನೀಡಲಾಗುವ Human Papilloma Virus Data Test ನ್ನು ಕಡ್ಡಾಯಗೊಳಿಸುವ ನಿಟ್ಟಿನಲ್ಲಿ ಯಾವುದೇ ಮಾರ್ಗಸೂಚಿ ಸ್ವೀಕೃತಗೊಂಡಿರುವುದಿಲ್ಲ ಹಾಗೂ ಲಸಿಕೆ ಸರಬರಾಜು ಆಗಿರುವುದಿಲ್ಲ. ಮಾರ್ಗಸೂಚಿ ಬಂದಲ್ಲಿ ಈ ನಿಟ್ಟಿನಲ್ಲಿ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಆಯುಷ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮ

ಬೆಂಗಳೂರು: ಆಯುಷ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಕಲಾಪದ ವೇಳೆ, ವಿಧಾನ ಪರಿಷತ್ತಿನ ಸದಸ್ಯರಾದ ಹೆಚ್.ಎಸ್. ಗೋಪಿನಾಥ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಆಯುಷ್ ಇಲಾಖೆಯಲ್ಲಿ ಮಂಜೂರಾದ 903 ವೈದ್ಯಾಧಿಕಾರಿಗಳ ಪೈಕಿ 677 ವೈದ್ಯಾಧಿಕಾರಿಗಳು ಮತ್ತು 158 ಸ್ನಾತಕೋತ್ತರ ಪದವಿ ಪಡೆದಿರುವ ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ರಾಜ್ಯದಲ್ಲಿ ಈಗಾಗಲೇ 726 ಚಿಕಿತ್ಸಾಲಯಗಳು, 168 ಆಸ್ಪತ್ರೆಗಳು 03 ಐವತ್ತು ಆಸಿಗೆಯುಳ್ಳ ಆಸ್ಪತ್ರೆಗಳು 01 ಹೈ-ಟೆಕ್ ಪಂಚಕರ್ಮ ಆಸ್ಪತ್ರೆ ಹಾಗೂ 07 ಆಯುಷ್ ಕಾಲೇಜಿಗೆ ಹೊಂದಿಕೊಂಡ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿದ್ದು, ಬಹುತೇಕ ಎಲ್ಲಾ ವಿಧಾನ ಸಭಾ ವ್ಯಾಪ್ತಿಯಲ್ಲಿ ಆಯುಷ್ ಆಸ್ಪತ್ರೆಗಳು ಇರುತ್ತವೆ. ಆಯುಷ್ ಮಂತ್ರಾಲಯವು ಭಾರತ ಸರ್ಕಾರವು ನಿಗದಿಪಡಿಸಿದ ನ್ಯಾಷನಲ್ ಲಿಸ್ಟ್ ಆಫ್ ಎಸೆನ್ಸಿಯಲ್ ಆಯುಷ್ ಮೆಡಿಸಿನ್‌ನಲ್ಲಿ ಸೂಚಿಸಿರುವ ಔಷಧಿಗಳಾದ ದ್ರಾಕ್ಷಾಸವ, ತಿಫಲಾ ಚೂರ್ಣ, ಪಿಪ್ಪಿಲಿ ಚೂರ್ಣ, ಬಾಹ್ಮಿ ವಟಿ, ನವಾಯಸ ಲೋಹ, ಕಷಾಯ ಕಲ್ಪನಗಳು, ಆಸವ ಕಲ್ಪನಗಳು, ಗುಟಿಕ ಕಲ್ಪನ ಚೂರ್ಣ ಕಲ್ಪನ, ತೈಲ ಕಲ್ಪನಗಳು ಇತ್ಯಾದಿಗಳನ್ನು ರಾಜ್ಯ ವಲಯ, ಜಿಲ್ಲಾ ವಲಯ ಮತ್ತು ರಾಷ್ಟ್ರೀಯ ಆಯುಷ್ ಅಭಿಯಾನದ ಯೋಜನೆಗಳಡಿ ಔಷಧಿಗಳಿಗಾಗಿ ನಿಗದಿಯಾದ ಅನುದಾನದಲ್ಲಿ ಆಸ್ಪತ್ರೆ / ಚಿಕಿತ್ಸಾಲಯಗಳಿಗೆ ಬೇಡಿಕೆಗನುಸಾರ ಕಾಲ ಕಾಲಕ್ಕೆ ನಿಯಮಾನುಸಾರ ಖರೀದಿಸಿ ಸರಬರಾಜು ಮಾಡಲಾಗಿದೆ. ಸರ್ಕಾರಿ ಆಯುಷ್ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರುಗಳು / ಸಿಬ್ಬಂದಿಗಳು ದೈನಂದಿನ ಹಾಜರಾತಿಯನ್ನುತಿಳಿದುಕೊಳ್ಳಲು ಹಾಗೂ ಮೇಲ್ವಿಚಾರಣೆ ಮಾಡಲು ಆನ್‌ಲೈನ್ ಮುಖಾಂತರ ಇ-ಹಾಜರಾತಿ ಪ್ರಕ್ರಿಯೆಯನ್ನು ಈಗಾಗಲೇ ಸಿದ್ದಪಡಿಸಿದ್ದು, ಪ್ರತಿ ವೈದ್ಯರುಗಳು, ಸಿಬ್ಬಂದಿಗಳ ಅನಧಿಕೃತ ಗೈರು ಹಾಜರಾತಿಯ ಬಗ್ಗೆ ಕ್ರಮ ವಹಿಸಲಾಗುತ್ತಿದೆ. ಗೈರು ಹಾಜರಾಗಿದ್ದು ಕಂಡುಬಂದ ಪ್ರಕರಣಗಳಲ್ಲಿ ನಿಯಮನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುತ್ತಿದೆ. ದೀರ್ಘಾವಧಿಯ ಗೈರಾಗಿರುವ 03 ಸಿಬ್ಬಂದಿಗಳನ್ನು ಅಮಾನತುಗೊಳಿಸಲಾಗಿದೆ ಎಂದರು.

ಬಿಎಂಟಿಸಿಯಲ್ಲಿ ಹುದ್ದೆಗಳ ಭರ್ತಿ, ಅನುಕಂಪದ ಆಧಾರದಡಿ ನೇಮಕಾತಿ

ಬೆಂಗಳೂರು: ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಇಂದು ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ರವರ ಅಧ್ಯಕ್ಷತೆಯಲ್ಲಿ ನಡೆದ ಸರಳ ಸಮಾರಂಭದಲ್ಲಿ ಮೃತ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದಡಿಯಲ್ಲಿ ನೇಮಕಾತಿ ಆದೇಶ ಪತ್ರವನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಅಭ್ಯರ್ಥಿಗಳು ಮತ್ತು ಕುಟುಂಬದವರಿಗೆ ಶುಭ ಕೋರಿ, ಸಂಸ್ಥೆ ಬಗ್ಗೆ ಹಿತ ನುಡಿಗಳನ್ನು ನುಡಿದರು. ಸಂಸ್ಥೆಯಲ್ಲಿ ಅನುಕಂಪದ ಆಧಾರದ ಮೇಲೆ ನೌಕರಿಗಾಗಿ ನಿರೀಕ್ಷಣೆಯಲ್ಲಿದ್ದ ಮೃತಾವಲಂಭಿತ ಅಭ್ಯರ್ಥಿಗಳ ಪೈಕಿ ಅರ್ಹತೆಯನುಸಾರ ಹಾಗೂ ಖಾಲಿ ಹುದ್ದೆಗಳ ಲಭ್ಯತೆಗನುಗುಣವಾಗಿ ಸುಮಾರು 250 ಮೃತರ ಅವಲಂಭಿತರುಗಳನ್ನು ಕಳೆದ ಅಕ್ಟೋಬರ್ - 2023 ಮತ್ತು ಮಾರ್ಚ್- 2024 ರಲ್ಲಿ ದರ್ಜೆ-3 (ಮೇಲ್ವಿಚಾರಕೇತರ) ಮತ್ತು ದರ್ಜೆ-4ರ ಖಾಲಿ ಹುದ್ದೆಗಳಿಗೆ ನೇಮಕ ಮಾಡಲಾಗಿದೆ.

ಸಂಸ್ಥೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಚಾಲಕ, ನಿರ್ವಾಹಕ ಹಾಗೂ ತಾಂತ್ರಿಕ ಹುದ್ದೆಗಳು ಖಾಲಿ ಇದ್ದು, ಇವುಗಳನ್ನು ಮೃತರ ಅವಲಂಭಿತರು ಆಯ್ಕೆ ಮಾಡಿಕೊಳ್ಳದೇ ಕಿರಿಯ ಸಹಾಯಕ ಕಂಬೆರಳಚ್ಚುಗಾರ ಹುದ್ದೆಗೆ ನೇಮಕಾತಿ ಬಯಸುತ್ತಿರುವುದರಿಂದ ಮೃತಾವಲಂಭಿತರಿಗೆ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ನೇಮಕ ಮಾಡಲು ಸಾಧ್ಯವಾಗುತ್ತಿರುವುದಿಲ್ಲ. ಪ್ರಸ್ತುತ ಖಾಲಿ ಇರುವ ಕ.ರಾ.ಸಾ. ಪೇದೆ, ತಾಂತ್ರಿಕ ಸಹಾಯಕ ಮತ್ತು ಸಹಾಯಕ (ಕಛೇರಿ) ಒಟ್ಟು 48 ಹುದ್ದೆಗಳಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸ

ಸಂಜೆ ಟಿಪ್ಸ್

ಹಿಟಾಚಿ ಎನರ್ಜಿ ಇಂಡಿಯಾದಿಂದ ಎನರ್ಜಿ ರನ್

ಹಿಟಾಚಿ ಎನರ್ಜಿ ಯಾವಾಗಲೂ ಪ್ರಮುಖ ರಾಷ್ಟ್ರ-ನಿರ್ಮಾಣ ಉಪಕ್ರಮಗಳಲ್ಲಿ ಮುಂಚೂಣಿಯಲ್ಲಿದೆ ಮತ್ತು 2024 ಭಾರತದಲ್ಲಿ ಅದರ ಅಸ್ತಿತ್ವದ 75 ವರ್ಷಗಳನ್ನು ಗುರುತಿಸುತ್ತದೆ. ಅದರ ಉದ್ಯೋಗಿಗಳು, ಗ್ರಾಹಕರು ಮತ್ತು ಪಾಲುದಾರರ ನಿರಂತರ ಬೆಂಬಲವಿಲ್ಲದೆ ಭಾರತದ ಶಕ್ತಿ ಪರಿವರ್ತನೆಗೆ ಶಕ್ತಿ ತುಂಬುವ ಈ ಪ್ರಯಾಣವು ಸಾಧ್ಯವಾಗುತ್ತಿರಲಿಲ್ಲ. ಹಿಟಾಚಿ ಎನರ್ಜಿ ಇಂಡಿಯಾದ ಸುಮಾರು 75 ವರ್ಷಗಳ ಭಾರತವನ್ನು ಶಕ್ತಿಯುತಗೊಳಿಸುವ ಉಪಕ್ರಮಗಳ ಭಾಗವಾಗಿ, ಕಂಪನಿಯು ತನ್ನ 1 ನೇ ಎನರ್ಜಿ ರನ್ ಅನ್ನು ಜುಲೈ 21 ರಂದು ಬೆಂಗಳೂರಿನಲ್ಲಿ ಆಯೋಜಿಸಿತ್ತು. ಉದ್ಯೋಗಿಗಳು, ಗ್ರಾಹಕರು, ಪಾಲುದಾರರು ಮತ್ತು ಇತರ ಪ್ರಮುಖ ಪಾಲುದಾರರ ಕುಟುಂಬಗಳು ಹಿಟಾಚಿ ಎನರ್ಜಿ ಉದ್ದೇಶವನ್ನು ಫಾರ್ವರ್ಡ್ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ ಜನರ ಸಂಭ್ರಮಾಚರಣೆಯಲ್ಲಿ ಒಟ್ಟು 2000 ಕ್ಕೂ ಹೆಚ್ಚು ಜನರು 3KM, 5KM ಅಥವಾ 10KM ಓಡಿದ್ದಾರೆ - ಎಲ್ಲರಿಗೂ ಸುಸ್ಥಿರ ಇಂಧನ ಭವಿಷ್ಯವನ್ನು ಮುನ್ನಡೆಸುವುದು. ಕರ್ನಾಟಕ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ, ಎಸ್ ಸೆಲ್ವಕುಮಾರ್, ಐ ಎ ಎಸ್ ಅವರು ಎನರ್ಜಿ ರನ್ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಎಲ್ಲಾ ವಿಜೇತರನ್ನು ಅಭಿನಂದಿಸಿದರು. ಹಿಟಾಚಿ ಎನರ್ಜಿಯ ಭಾರತ ಮತ್ತು ದಕ್ಷಿಣ ಏಷ್ಯಾದ ಎಂಡಿ ಮತ್ತು ಸಿಇಒ ಶ್ರೀ ಎನ್ ವೇಣು ಅವರು ಓಟಕ್ಕೆ ಚಾಲನೆ ನೀಡಿದರು.

ಟೊಮೆಟೋ ಚಿತ್ರಾನ್ನ ಮಾಡುವ ವಿಧಾನ

ಪಾಕ ಶಾಲೆ



ಬೇಕಾಗಿರುವ ಪದಾರ್ಥ

2 ಚಮಚ ಎಣ್ಣೆ, 2 ಚಮಚ ಶೇಂಗಾ, 1 ಚಮಚ ಸಾಸಿವೆ, 1 ಚಮಚ ಉದ್ದಿನ ಬೇಳೆ, 1 ಚಮಚ ಕಡ್ಲೆಬೇಳೆ, ಅರ್ಧ ಚಮಚ ಜೀರಿಗೆ, ಚಿಟಿಕೆ ಇಂಗು, ನಾಲ್ಕಾರು ಕರಿಬೇವಿನ ಎಲೆ, ಸಣ್ಣಗೆ ಹೆಚ್ಚಿದ 1 ಈರುಳ್ಳಿ, 1 ಇಂಚಿನಷ್ಟು ಗಾತ್ರದ ಶುಂಠಿ ಸಣ್ಣಗೆ ಹೆಚ್ಚಿದ್ದು, ಸಣ್ಣಗೆ ಹೆಚ್ಚಿದ 2 ಟೊಮೆಟೋ, ಕಾಲು ಚಮಚ ಅರಿಶಿನ, ಮುಕ್ಕಾಲು ಚಮಚ ಅಚ್ಚ ಖಾರದ ಪುಡಿ, 1 ಚಮಚ ಉಪ್ಪು, ಎರಡೂವರೆ ಕಪ್ ಅನ್ನ, 2 ಚಮಚ ತೆಂಗಿನ ತುರಿ, ಸ್ವಲ್ಪ ಕೊತ್ತಂಬರಿ ಸೊಪ್ಪು ಹೆಚ್ಚಿದ್ದು.

ಒಂದು ಬಾಣಲೆಯಲ್ಲಿ ಸ್ವಲ್ಪ ಎಣ್ಣೆ ಹಾಕಿ ಶೇಂಗಾವನ್ನು ಹುರಿದು ಪಕ್ಕಕ್ಕೆ ತೆಗೆದಿಟ್ಟುಕೊಳ್ಳಿ. ನಂತರ ಸಾಸಿವೆ, ಉದ್ದಿನ ಬೇಳೆ, ಕಡ್ಲೆಬೇಳೆ, ಚಮಚ ಜೀರಿಗೆ, ಚಿಟಿಕೆ ಇಂಗು, ಕರಿಬೇವಿನ ಎಲೆಯನ್ನು ಹಾಕಿ. ಇದು ಚಟಪಟಗೊಂಡ ಬಳಿಕ ಹೆಚ್ಚಿದ ಈರುಳ್ಳಿ, ಶುಂಠಿ ಹಾಕಿ. ಅದು ಸ್ವಲ್ಪ ಬಾಡಿದ ಮೇಲೆ ಹೆಚ್ಚಿದ ಟೊಮೆಟೋ ಹಾಕಿ ಒಂದು ನಿಮಿಷ ಹುರಿದು ಮುಚ್ಚಳ ಮುಚ್ಚಿ. ಟೊಮೆಟೋ ಪೂರ್ತಿ ಬೆಂದು ಕರಗಿದ ಮೇಲೆ ಅರಿಶಿನ, ಅಚ್ಚ ಖಾರದ ಪುಡಿ, ಉಪ್ಪು ಬೆರೆಸಿ ಎಲ್ಲವನ್ನೂ ಮಿಕ್ಸ್ ಮಾಡಿ. ನಂತರ ಅನ್ನ ಹಾಕಿ ಕಲಸಿ 5 ನಿಮಿಷ ಸಣ್ಣ ಉರಿಯಲ್ಲಿ ಹಾಗೇ ಮುಚ್ಚಿಡಿ. ಗ್ಯಾಸ್ ಆಫ್ ಮಾಡಿ ಬಾಣಲೆಯನ್ನು ಕೆಳಕ್ಕಿಳಿಸಿದ ಮೇಲೆ ತೆಂಗಿನ ತುರಿ, ಸ್ವಲ್ಪ ಕೊತ್ತಂಬರಿ ಸೊಪ್ಪು ಹಾಕಿ ಅಲಂಕರಿಸಿದರೆ ಟೊಮೆಟೊ ಚಿತ್ರಾನ್ನ ರೆಡಿ.

ಬಾಳೆಹಣ್ಣು ತಿನ್ನುವವರಿಗೆ ಸಲಹೆ

ಬಾಳೆಹಣ್ಣು ಪ್ರಪಂಚದಾದ್ಯಂತ ಹೆಚ್ಚು ಇಷ್ಟಪಡುವ ಮತ್ತು ತಿನ್ನುವ ಹಣ್ಣುಗಳಲ್ಲಿ ಒಂದಾಗಿದ್ದರೂ ಅದು ಕೂಡ ಅಡ್ಡಪರಿಣಾಮಗಳನ್ನು ಹೊಂದಿದೆ.

ಮಾಹಿತಿಯ ಪ್ರಕಾರ ಪ್ರತಿ ವರ್ಷ ಸುಮಾರು 100 ಬಿಲಿಯನ್ ಬಾಳೆಹಣ್ಣುಗಳನ್ನು ತಿನ್ನಲಾಗುತ್ತದೆ. ಬಾಳೆಹಣ್ಣು ಫೈಬರ್, ಪೊಟ್ಯಾಸಿಯಮ್, ಅಮೈನೋ ಆಮ್ಲಗಳು, ವಿಟಮಿನ್ ಬಿ 6 ಮತ್ತು ಇತರ ಅನೇಕ ಅಗತ್ಯ ಪೋಷಕಾಂಶಗಳನ್ನು ಒಳಗೊಂಡಿದೆ.

ಇದು ಬಿಪಿ ಮತ್ತು ಚಯಾಪಚಯ ಕ್ರಿಯೆಯನ್ನು ಸುಧಾರಿಸಬಲ್ಲದು. ಬನಾನಾ ಸ್ಮೂಥಿ, ಬ್ರೆಡ್, ಪ್ಯಾನ್ಕೇಕ್ಗಳು ಮತ್ತು ಸ್ಯಾಂಡ್ವಿಚ್ಗಳು ಬಹಳ ರುಚಿಯಾಗಿರುತ್ತವೆ. ಫ್ರೂಟ್ ಸಲಾಡ್ಗಳಲ್ಲಿ ಬಾಳೆಹಣ್ಣನ್ನು ಹೇರಳವಾಗಿ ಬಳಸಲಾಗುತ್ತದೆ. ಬಾಳೆಹಣ್ಣು ಹೃದಯಾಘಾತ ಮತ್ತು ಇತರ ಹೃದಯ ಸಂಬಂಧಿ ಕಾಯಿಲೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಬಾಳೆಹಣ್ಣು ಉಷ್ಣವಲಯದ ಹಳದಿ ಹಣ್ಣು. 13 ಡಿಗ್ರಿ ಸೆಲ್ಸಿಯಸ್ಗಿಂತ ಕಡಿಮೆ ತಾಪಮಾನದಲ್ಲಿ ಇದು ಸಾಕಷ್ಟು ಸೂಕ್ಷ್ಮವಾಗಿರುತ್ತದೆ. ಇದು ಬಾಳೆಹಣ್ಣಿನ ಸಿಪ್ಪೆ ಮತ್ತು ತಿರುಳಿನಲ್ಲಿ ಶೀತ ರೋಗಲಕ್ಷಣಗಳನ್ನು (ಅಖ) ಹೆಚ್ಚಿಸುತ್ತದೆ. ಅತಿಯಾಗಿ ತಿಂದರೆ ಹಣ್ಣಿನ ತಿರುಳು ದೈಹಿಕ ಚಟುವಟಿಕೆಗಳಿಗೆ ಅಡಚಣೆ ಉಂಟುಮಾಡುತ್ತದೆ. ಚಿಸಂಶೋಧನೆಯ ಪ್ರಕಾರ ಬಾಳೆಹಣ್ಣಿನಲ್ಲಿ ಸಾಕಷ್ಟು ಪಿಷ್ಟವಿದೆ. ಇದನ್ನು ಹೆಚ್ಚು ಸೇವಿಸಿದರೆ ತೂಕ ಹೆಚ್ಚಾಗಬಹುದು. ಆದ್ದರಿಂದ ದಿನಕ್ಕೆ 3 ಅಥವಾ ಅದಕ್ಕಿಂತ ಕಡಿಮೆ ಬಾಳೆಹಣ್ಣುಗಳನ್ನು ತಿನ್ನಬೇಕು. ದೇಹದ ಅವಶ್ಯಕತೆಗೆ ಅನುಗುಣವಾಗಿ ಸೇವಿಸುವುದು ಉತ್ತಮ.

ಬಾಳೆಹಣ್ಣಿನಲ್ಲಿ ಪೊಟ್ಯಾಸಿಯಂ ಸಾಕಷ್ಟು ಪ್ರಮಾಣದಲ್ಲಿರುತ್ತದೆ. ಪೊಟ್ಯಾಸಿಯಮ್ನ ಅತಿಯಾದ ಸೇವನೆಯು ಮಕ್ಕಳು, ವಯಸ್ಕರು ಮತ್ತು ಹಿರಿಯರಿಗೆ ಹಾನಿಕಾರಕವಾಗಿದೆ. ಒಂದು ಮಧ್ಯಮ ಗಾತ್ರದ ಬಾಳೆಹಣ್ಣು 422 ಮಿಗ್ರಾಂ ಪೊಟ್ಯಾಸಿಯಮ್ ಅನ್ನು ಹೊಂದಿರುತ್ತದೆ. ಮೈಗ್ರೇನ್ ಸುಮಾರು 15 ಪ್ರತಿಶತದಷ್ಟು ಜನರನ್ನು ಕಾಡುವ ಸಮಸ್ಯೆ. ಹೆಚ್ಚು ಬಾಳೆಹಣ್ಣು ತಿನ್ನುವುದರಿಂದ ಮೈಗ್ರೇನ್ ಮತ್ತು ತಲೆನೋವು ಉಂಟಾಗುತ್ತದೆ. ಅಷ್ಟೇ ಅಲ್ಲ ಕೆಲವರಿಗೆ ಅಲರ್ಜಿ ಕೂಡ ಉಂಟಾಗಬಹುದು. 100 ಗ್ರಾಂ ಬಾಳೆಹಣ್ಣಿನಲ್ಲಿ ಸುಮಾರು 74-150 ಕ್ಯಾಲೊರಿಗಳಿರುತ್ತವೆ. 100 ಗ್ರಾಂ ಬಾಳೆಹಣ್ಣು 35 ಗ್ರಾಂ ಕಾರ್ಬೋಹೈಡ್ರೇಟ್ಗಳನ್ನು ಹೊಂದಿರುತ್ತದೆ. ಕಾರ್ಬೋಹೈಡ್ರೇಟ್ಗಳನ್ನು ತಿನ್ನುವುದರಿಂದ ಹೊಟ್ಟೆಯಲ್ಲಿ ಅಸ್ವಸ್ಥತೆ, ಹೊಟ್ಟೆ ಸೆಳೆತ ಮತ್ತು ಉಬ್ಬರಿಸುವಿಕೆ ಉಂಟಾಗಬಹುದು.

ಹೆಲ್ ಟಿಪ್ಸ್

ಮುಖದ ಊತ ಕಡಿಮೆ ಮಾಡಲು ಮನೆಮದ್ದು

ಬ್ಯೂಟಿ ಟಿಪ್ಸ್

ನಿದ್ರೆಯ ಕೊರತೆ, ಕಡಿಮೆ ನೀರು ಕುಡಿಯುವುದರಿಂದ, ಹೆಚ್ಚು ಉಪ್ಪು ಸೇವಿಸುವುದರಿಂದ ಮುಖದಲ್ಲಿ ಊತಕಂಡುಬರುತ್ತದೆ. ಇದರಿಂದ ಕೆಲವರು ಮುಜುಗರಕ್ಕೀಡಾಗುತ್ತಾರೆ. ಹಾಗಾಗಿ ಇದನ್ನು ಶೀಘ್ರದಲ್ಲಿಯೇ ನಿವಾರಿಸಿಕೊಳ್ಳಲು ಈ ಮನೆಮದ್ದನ್ನು ಸೇವಿಸಿ.ನಿಮ್ಮ ಆಹಾರದಲ್ಲಿ ಹೆಚ್ಚಾಗಿ ನೀರು ಇರುವಂತಹ ಹಣ್ಣುಗಳು ಮತ್ತು ತರಕಾರಿಗಳನ್ನು ಸೇವಿಸಿ. ಕಲ್ಲಂಗಡಿ , ಸ್ಟ್ರಾಬೆರಿ, ಕಿತ್ತಳೆ, ನಿಂಬೆ, ಅನಾನಸ್ ಮುಂತಾದ ಹಣ್ಣುಗಳನ್ನು ಹಾಗೂ ಸೌತೆಕಾಯಿ, ಟೊಮೆಟೊ, ಸೋರೆಕಾಯಿ ಮುಂತಾದ ತರಕಾರಿಗಳನ್ನು ಸೇವಿಸಿ.

ಧನಿಯಾ, ಜೀರಿಗೆ ಮತ್ತು ಸೊಂಪು ಮೂತ್ರವನ್ನು ಹೆಚ್ಚಾಗಿ ವಿಸರ್ಜಿಸಲು ಉತ್ತೇಜಿಸುತ್ತದೆ. ಈ ಮೂರನ್ನು ಸೇರಿಸಿ ನೀರಿನಲ್ಲಿ ಕುದಿಸಿ ಸೇವಿಸಿ. ಇದರಿಂದ ಹೆಚ್ಚುವರಿ ನೀರು ಮೂತ್ರದ ಹೊರಗೆ ಹೋಗಿ ಮುಖದ ಊತ ಕಡಿಮೆಯಾಗುತ್ತದೆ. ಕಡಿಮೆ ನೀರು ಕುಡಿಯುವುದರಿಂದ ಮುಖದಲ್ಲಿ ಊತ ಕಂಡುಬರುತ್ತದೆ. ಹಾಗಾಗಿ ಸಾಕಷ್ಟು ನೀರನ್ನು ಕುಡಿಯಿರಿ.

ನಟಿ ದೀಪಿಕಾ ಪಡುಕೋಣೆಗೆ OCD ಸಮಸ್ಯೆ ಇದೆಯಂತೆ

ಮೊದಲ ಮಗುವಿನ ನಿರೀಕ್ಷೆಯಲ್ಲಿರುವ ಬಾಲಿವುಡ್ ನಟಿ ದೀಪಿಕಾ ಪಡುಕೋಣೆ, ಒಬ್ಸೆಸಿವ್ ಕಂಪಲ್ಸಿವ್ ಡಿಸಾರ್ಡರ್ (OCD) ನಿಂದ ಬಳಲುತ್ತಿದ್ದಾರೆ. ಈ ಕಾಯಿಲೆಯಿಂದಾಗಿ ದೀಪಿಕಾ ಮನೆಯಲ್ಲೂ ಸಾಮಾಜಿಕ ಅಂತರವನ್ನು ಅನುಸರಿಸುತ್ತಾರೆ ಮತ್ತು ಎಲ್ಲವನ್ನೂ ವ್ಯವಸ್ಥೆಗೊಳಿಸುತ್ತಲೇ ಇರುತ್ತಾರೆ. ಈ ಕಾಯಿಲೆಯಿಂದಾಗಿ ದೀಪಿಕಾ ಸದಾ ತಮ್ಮ ವಸ್ತುಗಳನ್ನು ಸರಿಯಾಗಿ ಜೋಡಿಸುವುದರಲ್ಲಿ ನಿರತರಾಗಿರುತ್ತಾರಂತೆ, ಸ್ನೇಹಿತರ ಮನೆಗೆ ಹೋದಾಗ ಅಲ್ಲಿಯೂ ಅದೇ ರೀತಿ ವರ್ತಿಸುತ್ತಾರೆ. ಈ ರೀತಿಯ ಅಭ್ಯಾಸವು ಅಪಾಯಕಾರಿ, ಜೊತೆಗೆ ಕೆಲವು ಅಡ್ಡ ಪರಿಣಾಮಗಳನ್ನು ಸಹ ಹೊಂದಿದೆ.

ಒಬ್ಸೆಸಿವ್ ಕಂಪಲ್ಸಿವ್ ಡಿಸಾರ್ಡರ್ ಎಂದರೇನು?: ಒಬ್ಸೆಸಿವ್ ಕಂಪಲ್ಸಿವ್ ಡಿಸಾರ್ಡರ್ (ಒಸಿಡಿ) ಒಂದು ಮಾನಸಿಕ ಕಾಯಿಲೆ. ಇದರಲ್ಲಿ ಕಂಪಲ್ಸಿವ್ ನಡವಳಿಕೆ ಹುಟ್ಟುತ್ತದೆ. ಏನನ್ನೇ ಆದರೂ ಎರಡು ಬಾರಿ ಪರಿಶೀಲಿಸುವ ಅಭ್ಯಾಸವು ರೂಪುಗೊಳ್ಳುತ್ತದೆ. ಈ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಯು ಕೆಲವು ಕೆಲಸಗಳನ್ನು ಮತ್ತೆ ಮತ್ತೆ ಮಾಡುತ್ತಲೇ ಇರುತ್ತಾನೆ. ಪದೇ ಪದೇ ವಸ್ತುಗಳನ್ನು ಎಣಿಸುವುದು, ಆಗಾಗ್ಗೆ ಕೈ ತೊಳೆಯುವುದು, ಅತಿಯಾದ ಶುಚಿತ್ವ, ಬಾಗಿಲು ಮತ್ತು ಕಿಟಕಿಗಳನ್ನು ಮುಚ್ಚುವುದು, ಲಾಕ್ ಮಾಡಿದ ನಂತರ ಪದೇ ಪದೇ ಪರಿಶೀಲಿಸುವುದು ಮುಂತಾದ ಅಭ್ಯಾಸಗಳನ್ನು ಇದು ಒಳಗೊಂಡಿದೆ. ಈ ಕಾರಣದಿಂದಾಗಿ ವ್ಯಕ್ತಿಯ ಜೀವನದಲ್ಲಿ ಅನೇಕ ಸಮಸ್ಯೆಗಳು ಉದ್ಭವಿಸುತ್ತವೆ.

ದೀಪಿಕಾ ಪಡುಕೋಣೆ ಅವರ ಅನುಭವದ ಪ್ರಕಾರ ಒಸಿಡಿ ಅವರಿಗೆ ಹೆಚ್ಚು ತೊಂದರೆ ಕೊಟ್ಟಿಲ್ಲ. ಇದು ಅವರಿಗೆ ಚಿಕಿತ್ಸೆಯಂತೆ ಕೆಲಸ ಮಾಡುತ್ತದೆ. ವ್ಯಾನಿಟಿ ವ್ಯಾನ್ನಲ್ಲಿ ಕೂಡ ದೀಪಿಕಾ ತಮ್ಮ ಸುತ್ತಮುತ್ತಲಿನ ಪ್ರದೇಶಗಳನ್ನು ಸ್ವಚ್ಛಗೊಳಿಸಲು ಪ್ರಾರಂಭಿಸುತ್ತಾರಂತೆ, ಇದು ಅವರಿಗೆ ಮೋಜಿನ ಚಟುವಟಿಕೆಯಂತಾಗಿದೆ.

OCD ಲಕ್ಷಣಗಳು?

- ಅತಿಯಾದ ಸ್ವಚ್ಛತೆ
- ಯಾವುದನ್ನಾದರೂ ಮತ್ತೆ ಮತ್ತೆ ಗಮನಿಸುವುದು
- ಸ್ನಾನದ ನಂತರವೂ ಕೊಳಕು ಅಥವಾ ಅಶುದ್ಧತೆಯ ಭಾವನೆ
- ಆಗಾಗ್ಗೆ ಕೈ ತೊಳೆಯುವುದು
- ದಿನಕ್ಕೆ ಹಲವಾರು ಬಾರಿ ಕೊಳಕು ವಸ್ತುಗಳನ್ನು ತೊಳೆಯುವ ಅಭ್ಯಾಸ
- ಮೇಲ್ಮೈಯನ್ನು ಪದೇ ಪದೇ ಸ್ವಚ್ಛಗೊಳಿಸುವುದು.

ಡೇಟಿಂಗ್ ಮಾಡುತ್ತಿಲ್ಲ, 3 ವರ್ಷಗಳಿಂದ ಒಂಟಿಯಾಗಿದ್ದೇನೆ ಎಂದ ಸುಶ್ಮಿತಾ ಸೇನ್

ಬಾಲಿವುಡ್ ಬ್ಯೂಟಿ ಸುಶ್ಮಿತಾ ಸೇನ್ ಇದೀಗ ತಮ್ಮ ವೈಯಕ್ತಿಕ ಬದುಕಿನ ಬಗ್ಗೆ ಮೌನ ಮುರಿದಿದ್ದಾರೆ. ಯಾರೊಂದಿಗೂ ಡೇಟ್ ಮಾಡುತ್ತಿಲ್ಲ. ಕಳೆದ 3 ವರ್ಷಗಳಿಂದ ಒಂಟಿಯಾಗಿದ್ದೇನೆ ಎಂದು ನಟಿ ಸುಶ್ಮಿತಾ ಸಂದರ್ಶನವೊಂದರಲ್ಲಿ ಮಾತನಾಡಿದ್ದಾರೆ.ನಟಿ ರಿಯಾ ಚಕ್ರವರ್ತಿಗೆ ನೀಡಿದ ಸಂದರ್ಶನದಲ್ಲಿ ಬದುಕಿನ ಹಲವು ವಿಚಾರಗಳನ್ನು ಮುಕ್ತವಾಗಿ ಮಾತನಾಡಿದ್ದಾರೆ. ಮಾಜಿ ಬಾಯ್ ಫ್ರೆಂಡ್ ರೋಹ್ಮನ್ ಶಾಲ್ ಜೊತೆ ಬ್ರೇಕಪ್ ಆದ್ಮೇಲೆ 3 ವರ್ಷಗಳಿಂದ ಸಿಂಗಲ್ ಇದ್ದೇನೆ ಎಂದಿದ್ದಾರೆ. ನನ್ನ ಜೀವನದಲ್ಲಿ ಈಗ ಯಾವುದೇ ಪುರುಷ ಇಲ್ಲ ಎಂದು ಮಾತನಾಡಿದ್ದಾರೆ. 2021ರಿಂದಲೂ ನಾನು ಒಂಟಿ. ನನ್ನ ಜೀವನದಲ್ಲಿ ಕೆಲವು ಅದ್ಭುತವಾದ ಸ್ನೇಹಿತರಿದ್ದಾರೆ. ನಾನು ಅವರಿಗೆ ಕಾಲ್ ಮಾಡಿ ಕಾರಲ್ಲಿ ಗೋವಾಗೆ ಹೋಗೋಣ ಎಂದು ಹೇಳ್ತೀನಿ ಎಂದು ಕಾಯುತ್ತಿರುತ್ತಾರೆ ಎಂದು ನಟಿ ಮಾತನಾಡಿದ್ದಾರೆ. ಸದ್ಯಕ್ಕೆ ನಾನು ಈ ಬ್ರೇಕ್ ಎಂಜಾಯ್ ಮಾಡುತ್ತಿದ್ದೇನೆ. ನಾನು ಸಿಂಗಲ್ ಆಗಿದ್ರೂ ಯಾರ ಮೇಲೆಯೂ ನನಗೆ ಈ ಕ್ಷಣಕ್ಕೆ ಯಾವುದೇ ಆಸಕ್ತಿ ಬಂದಿಲ್ಲ ಎಂದಿದ್ದಾರೆ ನಟಿ ಸುಶ್ಮಿತಾ.

ಪ್ರಾಮಾಣಿಕತೆಯ ಕುರಿತ ಸತ್ಯವನ್ನು ತಿಳಿಸುವ ಟ್ರುಥ್ ಅಬೌಟ್ ಹಾನೆಸ್ಟಿ ಪುಸ್ತಕ ಬಿಡುಗಡೆ



ಸಮಾಜದಲ್ಲಿರುವ ಪ್ರಾಮಾಣಿಕತೆಯನ್ನು ಅನ್ವೇಷಿಸುವ ಕುರಿತು ಬಿಹೇವಿಯರಲ್ ಎಕನಾಮಿಸ್ಟ್ ಹಾಗೂ ಲೇಖಕಿ ಜಾನು ಗೋಸ್ವಾಮಿ ರಚಿಸಿರುವ ಟ್ರುಥ್ ಅಬೌಟ್ ಹಾನೆಸ್ಟಿ ಪುಸ್ತಕ ಬಿಡುಗಡೆ ಆಗಿದೆ. ಈ ಪುಸ್ತಕವು ಓದುಗರು ತಮ್ಮ ಆತ್ಮಸಾಕ್ಷಿಗೆ ಮುಖಾಮುಖಿಯಾಗಲು ಮತ್ತು ಪ್ರಾಮಾಣಿಕತೆ ಜೊತೆಗೆ ರಾಜಿಯಾಗುವ ಸಂದರ್ಭಗಳ ಕುರಿತು ಅರಿತುಕೊಳ್ಳಲು ಪ್ರೇರೇಪಣೆ ನೀಡುತ್ತದೆ.

ಬೆಂಗಳೂರು ಇಂಟರ್ ನ್ಯಾಷನಲ್ ಸೆಂಟರ್ (ಬಿಐಸಿ) ನಲ್ಲಿ ಅಡಿಷನಲ್ ಕಮಿಷನರ್ ಜಿ ಎಸ್ ಟಿ (ನಿವೃತ್ತ) ಎಚ್ ಎಸ್ ಇಸ್ಮತುಲ್ಲಾ ಖಾನ್, ಕರ್ನಾಟಕದ ಮಾಜಿ ವಿಜಿಲೆನ್ಸ್ ಕಮಿಷನರ್ ಮತ್ತು ಡಿಜಿಪಿ ಐಪಿಎಸ್(ನಿವೃತ್ತ) ಆರ್ ಶ್ರೀ ಕುಮಾರ್ ಅವರ ಉಪಸ್ಥಿತಿಯಲ್ಲಿ ಅಧಿಕೃತವಾಗಿ ಬಿಡುಗಡೆಗೊಂಡಿದೆ.

ಈ ಕೃತಿಯು ಈಗಾಗಲೇ ವಿದ್ವಾಂಸರು, ಸರ್ಕಾರಿ ಅಧಿಕಾರಿಗಳು, ಅರ್ಥಶಾಸ್ತ್ರಜ್ಞರು ಸೇರಿದಂತೆ ಆಸಕ್ತ ಓದುಗರ ಮೆಚ್ಚುಗೆಗೆ ಪ್ರಾಪ್ತವಾಗಿದೆ. ಈ ಮೂಲಕ ತತ್ತ್ವಶಾಸ್ತ್ರ, ಇತಿಹಾಸ, ಮಾನವ ನಡವಳಿಕೆ, ಇಂಟರ್ ನ್ಯಾಷನಲ್ ರಿಲೇಷನ್ಸ್ ಮತ್ತು ಜಿಯೋ ಪಾಲಿಟಿಕ್ಸ್ ವಿಷಯಗಳಲ್ಲಿ ಪರಿಣತಿ ಹೊಂದಿರುವ ಪ್ರಸಿದ್ಧ ಲೇಖಕರಾಗಿ ಜಾನು ಗೋಸ್ವಾಮಿ ಅವರ ಖ್ಯಾತಿ ಮತ್ತಷ್ಟು ಹಿರಿದಾಗಿದೆ.

ವಿಶ್ವ ಬ್ಯಾಂಕ್ನ ಮಾಜಿ ಆರ್ಥಿಕ ವಿಶ್ಲೇಷಕಿ ಜಾನು ಅವರು ತಮ್ಮ ವೃತ್ತಿಜೀವನದ ಆರಂಭದಲ್ಲಿ ಗೋಲ್ಡ್ ಮನ್ ಸ್ಯಾಕ್ಸ್ ಸೇರಿದಂತೆ ಅನೇಕ ಜಾಗತಿಕ ಮಟ್ಟದ ಸಂಸ್ಥೆಗಳಲ್ಲಿ ಮಹತ್ವದ ಹುದ್ದೆಗಳನ್ನು ನಿಭಾಯಿಸಿ ಹೆಸರು ಗಳಿಸಿದ್ದರು. ಅವರು ಈ ಕ್ಷೇತ್ರಗಳ ಮಧ್ಯೆ ಇರುವ ಬಂಧ ಮತ್ತು ಭಾರತೀಯ ಸಮಾಜದ ಮೇಲೆ ಈ ಕ್ಷೇತ್ರಗಳು ಬೀರುವ ಪರಿಣಾಮದ ಕುರಿತು ಹುಡುಕಾಟ ನಡೆಸುತ್ತಿದ್ದಾರೆ.

ಪುಸ್ತಕ ಬಿಡುಗಡೆ ಸಂದರ್ಭದಲ್ಲಿ ಮಾತನಾಡಿದ ಜಾನು ಗೋಸ್ವಾಮಿ ಅವರು, ನಾವು ಜನರಲ್ಲಿ ಬದಲಾವಣೆಯನ್ನು ತರಬೇಕಿದೆ. ವಿಶೇಷವಾಗಿ ಆ ಬದಲಾವಣೆ ನಮ್ಮಿಂದ ಶುರುವಾಗಬೇಕಿದೆ. ನಮ್ಮ ಮನೆಯಲ್ಲಿ ಆರಂಭವಾಗಬೇಕಿದೆ. ಪ್ರಾಮಾಣಿಕ ಮನೋಭಾವವನ್ನು ಬೆಳೆಸುವುದು ಬದಲಾವಣೆ ಕಡೆಗೆ ಸಾಗುವ ನಿಟ್ಟಿನಲ್ಲಿ ಬಹುದೊಡ್ಡ ಹೆಜ್ಜೆಯಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಲೇಖಕರು ಈ ಬಂಡವಾಳಶಾಹಿ ಸಮಾಜದ ಸತ್ಯವನ್ನು ತಿಳಿದುಕೊಳ್ಳಲು ಓದುಗರು ವಿಭಿನ್ನ ದೃಷ್ಟಿಕೋನದಿಂದ ನೋಡಬೇಕು ಎಂದೂ ಹೇಳಿದರು.

ಓದುಗರನ್ನು ಹಿಡಿದಿಡಬಹುದಾದ ಈ ಕೃತಿಯ ಮತ್ತೊಂದು ವಿಶೇಷ ಗುಣವೆಂದರೆ ಲೇಖಕರು ಮಾಡಿರುವ ಆಳವಾದ ಸಂಶೋಧನೆ. ಈ ಸಂಶೋಧನೆಗಳು ಗಾಢವಾಗಿ ತಟ್ಟುತ್ತವೆ ಮತ್ತು ಆದಾಯದ ಅಸಮಾನತೆ, ಅಧಿಕಾರಶಾಹಿತನ ಮತ್ತು ಮೂಲಭೂತ ಹಕ್ಕುಗಳ ಉಲ್ಲಂಘನೆ ಕುರಿತು ತೀವ್ರವಾಗಿ ಯೋಚಿಸುವಂತೆ ಮಾಡುತ್ತವೆ. ಇಲ್ಲಿ ಕೆಲವು ಜೀವನ ಅನುಭವಗಳು ಹೇಗೆ ಮನುಷ್ಯರು ಅಪ್ರಾಮಾಣಿಕರಾಗುವಂತೆ ಮಾಡುತ್ತವೆ ಎಂಬುದನ್ನು ಓದುಗರು ಅನ್ವೇಷಿಸಬಹುದು. ಜೊತೆಗೆ ಓದುಗರು ಇಲ್ಲಿ ಪ್ರಾಮಾಣಿಕತೆ ಅನ್ನುವುದು ಸದ್ಗುಣ ಮಾತ್ರವಲ್ಲ, ಅದು ಬದಲಾವಣೆಗೆ ವೇಗ ನೀಡುತ್ತದೆ ಎಂಬುದನ್ನು ಅರ್ಥೈಸಿಕೊಳ್ಳಬಹುದಾಗಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕದ ಮಾಜಿ ವಿಜಿಲೆನ್ಸ್ ಕಮಿಷನರ್ ಮತ್ತು ಡಿಜಿಪಿ ಐಪಿಎಸ್ (ನಿವೃತ್ತ) ಆರ್ ಶ್ರೀ ಕುಮಾರ್ ಅವರು ಪೊಲೀಸ್ ಸೇವೆ ಮತ್ತು ಕೇಂದ್ರ ಜಾಗೃತ ಆಯೋಗದಲ್ಲಿ ತಾವು ಹಲವು ಹುದ

ಬಾಂಗ್ಲಾದೇಶ ಸುಪ್ರೀಂಕೋರ್ಟ್ ಆದೇಶದ ನಂತರವೂ ಪ್ರತಿಭಟನೆಗೆ ವಿದ್ಯಾರ್ಥಿಗಳ ನಿರ್ಧಾರ

ಢಾಕಾ: ಸುಪ್ರೀಂಕೋರ್ಟ್ ವಿವಾದಾತ್ಮಕ ಉದ್ಯೋಗ ಕೋಟಾದಲ್ಲಿ ಶೇ. 56ರಷ್ಟಿದ್ದ ಒಟ್ಟಾರೆ ಮೀಸಲಾತಿ ಪ್ರಮಾಣವನ್ನು ಶೇ. 7ಕ್ಕೆ ಇಳಿಸಿದ ಒಂದು ದಿನದ ನಂತರ ವ್ಯಾಪಕವಾದ ಟೆಲಿಕಾಂ ಅಡೆತಡೆಗಳೊಂದಿಗೆ ಬಾಂಗ್ಲಾದೇಶದಲ್ಲಿ (ಃ ಚಿಟಿರಿಟಚಿಜಜ್ಞು) ಸೋಮವಾರವೂ ಕರ್ಫ್ಯೂ ಅಡಿಯಲ್ಲಿ ಉಳಿದಿದೆ. ಇತ್ತೀಚಿನ ವಾರಗಳಲ್ಲಿ ಭದ್ರತಾ ಪಡೆಗಳೊಂದಿಗೆ ಘರ್ಷಣೆಗೆ ಒಳಗಾದ ವಿದ್ಯಾರ್ಥಿ ಪ್ರತಿಭಟನಾಕಾರರು ಹೊಸ ಬೇಡಿಕೆಗಳನ್ನು ಪೂರೈಸಲು ಸರ್ಕಾರಕ್ಕೆ 48 ಗಂಟೆಗಳ ಗಡುವನ್ನು ನಿಗದಿಪಡಿಸಿದರು. ಜೂನ್ ನಲ್ಲಿ ಹೈಕೋರ್ಟ್ ಉದ್ಯೋಗ ಕೋಟಾಗಳನ್ನು ಮರುಸ್ಥಾಪಿಸಿದ ನಂತರ ಅಶಾಂತಿ ಭುಗಿಲೆದ್ದಿತು.

2018 ರ ಪ್ರಧಾನಿ ಶೇಖ್ ಹಸೀನಾ ಅವರ ಸರ್ಕಾರವು ಅವುಗಳನ್ನು ರದ್ದುಗೊಳಿಸುವ ನಿರ್ಧಾರವನ್ನು ರದ್ದುಗೊಳಿಸಿತು. ಕೋಟಾಗಳು ಸ್ವಾತಂತ್ರ್ಯ ಹೋರಾಟಗಾರರ ಕುಟುಂಬಗಳು, ಮಹಿಳೆಯರು ಮತ್ತು ಹಿಂದುಳಿದ ಪ್ರದೇಶಗಳ ಜನರಂತಹ ಗುಂಪುಗಳಿಗೆ 56 ಪ್ರತಿಶತದಷ್ಟು ಸರ್ಕಾರಿ ಉದ್ಯೋಗಗಳನ್ನು ಕಾಯ್ದಿರಿಸಿವೆ.

ಭಾನುವಾರ, ಸುಪ್ರೀಂ ಕೋರ್ಟ್ ಮಹತ್ವದ ಆದೇಶ ಹೊರಡಿಸಿದ್ದು, ಮೀಸಲಾತಿ ಕೋಟಾವನ್ನು ಕೇವಲ 7 ಪ್ರತಿಶತಕ್ಕೆ ಕಡಿತಗೊಳಿಸಿತು. ಆದಾಗ್ಯೂ, ವಿದ್ಯಾರ್ಥಿ ಪ್ರತಿಭಟನಾಕಾರರು ಅತೃಪ್ತರಾಗಿದ್ದಾರೆ.

''ಸರ್ಕಾರವು ತೀರ್ಪನ್ನು ಗೆಜೆಟ್‌ನಲ್ಲಿ ಪ್ರಕಟಿಸುವವರೆಗೆ ನಾವು ನಮ್ಮ ಪ್ರತಿಭಟನೆಯನ್ನು ಮುಂದುವರಿಸುತ್ತೇವೆ'' ಎಂದು ಢಾಕಾ ವಿಶ್ವವಿದ್ಯಾಲಯದ ವಿದ್ಯಾರ್ಥಿಯೊಬ್ಬರು ಸುದ್ದಿ ಸಂಸ್ಥೆ ರಾಯಿಟರ್ಸ್‌ಗೆ ತಿಳಿಸಿದ್ದಾರೆ. ಗೆಜೆಟ್, ಸರ್ಕಾರದ ನಿರ್ಧಾರಗಳ ಅಧಿಕೃತ ದಾಖಲೆಯಾಗಿದೆ.

ಬಂಧಿತ ಪ್ರತಿಭಟನಾ ನಾಯಕರ ಬಿಡುಗಡೆ, ಕರ್ಫ್ಯೂ ತೆರವು ಮತ್ತು ಕಳೆದ ವಾರದಿಂದ ಮುಚ್ಚಿರುವ ವಿಶ್ವವಿದ್ಯಾಲಯಗಳನ್ನು ಪುನಃ ತೆರೆಯುವಂತೆ ವಿದ್ಯಾರ್ಥಿಗಳು ಒತ್ತಾಯಿಸುತ್ತಿದ್ದಾರೆ. ಎಎಫ್‌ಪಿ ಪ್ರಕಾರ, ಹಿಂಸಾಚಾರವು ಭಾರೀ ಪ್ರಮಾಣದಲ್ಲಿ ಸಂಭವಿಸಿದೆ. ಈ ಹಿಂಸಾಚಾರದಲ್ಲಿ ಕನಿಷ್ಠ 163 ಮಂದಿ ಸಾವಿಗೀಡಾಗಿದ್ದಾರೆ. ಢಾಕಾದಲ್ಲಿ ವಿರೋಧ ಪಕ್ಷದ ನಾಯಕರು ಸೇರಿದಂತೆ 500 ಕ್ಕೂ ಹೆಚ್ಚು ಜನರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ''ಹಿಂಸಾಚಾರದ ಬಗ್ಗೆ ಕನಿಷ್ಠ 532 ಜನರನ್ನು ಬಂಧಿಸಲಾಗಿದೆ'' ಎಂದು ಢಾಕಾ ಮೆಟ್ರೋಪಾಲಿಟನ್ ಪೊಲೀಸ್ ವಕ್ತಾರ ಫಾರೂಕ್ ಹೊಸೈನ್ ಸುದ್ದಿ ಸಂಸ್ಥೆಗೆ ತಿಳಿಸಿದರು, ಕೆಲವು ಬಂಧಿತರು ವಿರೋಧ ಪಕ್ಷದ ಬಾಂಗ್ಲಾದೇಶ ನ್ಯಾಷನಲ್ ಪಾರ್ಟಿ ಯ ಹಿರಿಯ ವ್ಯಕ್ತಿಗಳು ಎಂದು ಹೇಳಿದರು.

ಢಾಕಾ ಪೊಲೀಸ್ ವಕ್ತಾರ ಹೊಸೈನ್ ಸಹ ಕನಿಷ್ಠ ಮೂವರು ಪೊಲೀಸರ ಸಾವು ಮತ್ತು 1,000 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎಂದು ದೃಢಪಡಿಸಿದ್ದಾರೆ. ಇದರಲ್ಲಿ 60 ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ.

ನಗರದಲ್ಲಿ ಇದೀಗ ಶಾಂತಿ ನೆಲೆಸಿದೆ. ನಿವಾಸಿಗಳಿಗೆ ಅಗತ್ಯ ವಸ್ತುಗಳನ್ನು ಖರೀದಿಸಲು ಅಧಿಕಾರಿಗಳು ಮೂರು ಗಂಟೆಗಳ ಕಾಲ ಕರ್ಫ್ಯೂ ಸಡಿಲಿಸಿದರು. ಸರಾಗಗೊಳಿಸುವಿಕೆಯ ಹೊರತಾಗಿಯೂ, ಸೈನ್ಯದ ಟ್ಯಾಂಕ್‌ಗಳು ಢಾಕಾದಲ್ಲಿವೆ.

ಇಂಟರ್ನೆಟ್ ಸ್ಥಗಿತ ಮತ್ತು ಪೂರೈಕೆ ಸರಪಳಿಗಳಿಗೆ ಅಡಚಣೆಗಳು ನಿವಾಸಿಗಳು ಎದುರಿಸುತ್ತಿರುವ ತೊಂದರೆಗಳನ್ನು ಹೆಚ್ಚಿಸಿವೆ. ಪೂರೈಕೆ ಸಮಸ್ಯೆಗಳಿಂದಾಗಿ ಡಿಪಾರ್ಟ್‌ಮೆಂಟ್ ಸ್ಟೋರ್‌ಗಳು ಕ್ಷೀಣಿಸುತ್ತಿರುವುದನ್ನು ವರದಿ ಮಾಡಿದೆ, ಆದರೆ ಪ್ರಯಾಣದ ಯೋಜನೆಗಳು ಮತ್ತು ಅಗತ್ಯ ಸೇವೆಗಳು ಇಂಟರ್ನೆಟ್ ಪ್ರವೇಶದ ಕೊರತೆಯಿಂದ ಅಡಚಣೆಯಾಗಿದೆ.

ವಿದ್ಯಾರ್ಥಿಗಳು ತಮ್ಮ ಬೇಡಿಕೆಗಳಿಗೆ ಸರ್ಕಾರದ ಪ್ರತಿಕ್ರಿಯೆಗಾಗಿ ಕಾಯುತ್ತಿರುವ ಕಾರಣ ಮುಂದಿನ 48 ಗಂಟೆಗಳ ಕಾಲ ನಿರ್ಣಾಯಕವಾಗಿದೆ. ಅವರ ಬೇಡಿಕೆಗಳನ್ನು ಈಡೇರಿಸದಿದ್ದರೆ ಅವರು ಯಾವ ಕ್ರಮಗಳನ್ನು ತೆಗೆದುಕೊಳ್ಳುತ್ತಾರೆ ಎಂಬುದು ಸ್ಪಷ್ಟವಾಗಿಲ್ಲ.

ಹಿಂದಿನ ಮೂರು ವರ್ಷಗಳಲ್ಲಿ ಸಂಸದರು ನೀಡಿದ್ದು 913 ಭರವಸೆ

ಈಡೇರಿದ್ದು 583

ದೆಹಲಿ: ಹಿಂದಿನ ಮೂರು ವರ್ಷಗಳಲ್ಲಿ ಸಂಸದರು 913 ಭರವಸೆಗಳನ್ನು ನೀಡಿದ್ದಾರೆ ಎಂದು ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಎಲ್ ಮುರುಗನ್ ಸೋಮವಾರ ರಾಜ್ಯಸಭೆಗೆ ತಿಳಿಸಿದ್ದಾರೆ. ಇದರಲ್ಲಿ 583 ಆಶ್ವಾಸನೆಗಳನ್ನು ಈಡೇರಿಸಲಾಗಿದೆ, ಉಳಿದ 330 ಇನ್ನೂ ಅನುಷ್ಠಾನಗೊಳ್ಳಬೇಕಿದೆ ಎಂದು ಸಂಸತ್ತಿನ ಮೇಲ್ಮನೆಯಲ್ಲಿ ಪೂರಕ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಮುರುಗನ್ ಹೇಳಿದ್ದಾರೆ. ನೀತಿಗಳಲ್ಲಿ ಬದಲಾವಣೆ ಮತ್ತು ತಿದ್ದುಪಡಿಗಳ ಅಗತ್ಯತೆಯಿಂದಾಗಿ ಇನ್ನೂ ಕಾರ್ಯಗತಗೊಳಿಸಬೇಕಾದವುಗಳನ್ನು ಪೂರೈಸಲು ಸಾಧ್ಯವಾಗಲಿಲ್ಲ. ಘೋಷಣೆಯ ದಿನಾಂಕದಿಂದ ಮೂರು ತಿಂಗಳ ಅವಧಿಯಲ್ಲಿ ಭರವಸೆಯನ್ನು ಪೂರೈಸಬೇಕು. ಪೂರ್ಣಗೊಳ್ಳದವರಿಗೆ ವಿಸ್ತರಣೆ ಕೋರಲಾಗಿದೆ ಎಂದು ಸಚಿವರು ತಿಳಿಸಿದರು.

ಸಂಸದೀಯ ವ್ಯವಹಾರಗಳ ರಾಜ್ಯ ಖಾತೆ ಸಚಿವ ಮುರುಗನ್, ಮೂರು ವರ್ಷಗಳ (ವರ್ಷಕ್ಕೆ ಮೂರು ಅಧಿವೇಶನಗಳು) ಸಂಸತ್ತಿನ ಹಿಂದಿನ ಒಂಬತ್ತು ಅಧಿವೇಶನಗಳಲ್ಲಿ ಸಂಸದರು ನೀಡಿದ ಒಟ್ಟು ಭರವಸೆಗಳ ವಿವರವನ್ನು ನೀಡಿದ್ದಾರೆ.

ಸಂಸತ್ತಿನ 253ನೇ ಅಧಿವೇಶನದಲ್ಲಿ 120 ಆಶ್ವಾಸನೆಗಳನ್ನು ನೀಡಲಾಗಿದೆ. 254 ರಿಂದ 262 ರವರೆಗೆ, ಸಂಖ್ಯೆಯು ಕ್ರಮವಾಗಿ 105, 25, 221, 70, 95, 118, 99, 0 ಮತ್ತು 60 ಆಗಿದೆ ''ಎಂದು ಅವರು ವಿವರಿಸಿದರು.

ಏತನ್ಮಧ್ಯೆ, ವೈಎಸ್‌ಆರ್ ಕಾಂಗ್ರೆಸ್ ಪಕ್ಷದ ಸದಸ್ಯ ರ ಯಾಗ ಕೃಷ್ಣಯ್ಯ ಅವರು ಕೇಳಿದ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಸಚಿವರು, ಸಂಸದೀಯ ವ್ಯವಹಾರಗಳ ಸಚಿವಾಲಯವು ರೂಪಿಸಿದ ಆನ್‌ಲೈನ್ ಅಶ್ಯೂರೆನ್ಸ್ ಮಾನಿಟರಿಂಗ್ ಸಿಸ್ಟಮ್ (ಒಎಎಂಎಸ್) ಎಂಬ ಸಾಫ್ಟ್‌ವೇರ್ ಅನ್ನು ಪ್ರಸ್ತಾಪಿಸಿದ್ದು, ಎಲ್ಲಾ ಸಚಿವಾಲಯಗಳು ಸಾಫ್ಟ್‌ವೇರ್‌ಗೆ ಐಡಿ ಮತ್ತು ಪಾಸ್‌ವರ್ಡ್ ಅನ್ನು ಹೊಂದಿವೆ ಎಂದಿದ್ದಾರೆ.

''ಅವರು (ಸಚಿವಾಲಯಗಳು) ಕಾರ್ಯಗತಗೊಳಿಸಿದ ವರದಿಗಳನ್ನು ಅಪ್‌ಲೋಡ್ ಮಾಡಬಹುದು, ಕೈಬಿಡುವ ವಿನಂತಿಗಳನ್ನು ಮಾಡಬಹುದು. ಈ ಪೋರ್ಟಲ್‌ನಲ್ಲಿ ಭರವಸೆಗಳ ನೆರವೇರಿಕೆಗಾಗಿ ವಿಸ್ತರಣೆಗಳನ್ನು ನೋಡಬಹುದು, ಇದು ಭರವಸೆಗಳ ಸಮಯೋಚಿತ ಅನುಷ್ಠಾನದ ಬಗ್ಗೆ ಅಗತ್ಯ ಸೂಚನೆಗಳನ್ನು ಸಹ ಒಳಗೊಂಡಿದೆ''.

ನಿರ್ಮಲಾ ಸೀತಾರಾಮನ್‌ಗೆ ಸಿಹಿ ಮೊಸರು ತಿನ್ನಿಸಿದ ದ್ರೌಪದಿ ಮುರ್ಮು

ಬಜೆಟ್‌ಗೆ ರಾಷ್ಟ್ರಪತಿ ಶುಭ ಹಾರೈಕೆ

ನವದೆಹಲಿ: ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ 2024-25ನೇ ಆರ್ಥಿಕ ವರ್ಷದ ಕೇಂದ್ರ ಬಜೆಟ್ ಮಂಡಿಸಲಿದ್ದಾರೆ. ನರೇಂದ್ರ ಮೋದಿ 3ನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರಕ್ಕೇರಿದ ಬಳಿಕ ಮಂಡನೆಯಾಗುತ್ತಿರುವ ಮೊದಲ ಬಜೆಟ್ ಇದಾಗಿರುವುದರಿಂದ ಸಹಜವಾಗಿಯೇ ಜನರ ಕುತೂಹಲ ಹೆಚ್ಚಾಗಿದೆ. ಈ ವೇಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಸಿಹಿ ಮೊಸರು ತಿನ್ನಿಸಿ ಶುಭ ಹಾರೈಸಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು (ಜುಲೈ 23) ರಾಷ್ಟ್ರಪತಿ ಭವನದಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ 2024ರ ಬಜೆಟ್ ಮಂಡನೆಗೆ ಮುನ್ನ ಸಿಹಿ ಹಾಕಿದ ಮೊಸರು ತಿನ್ನಿಸಿದರು. ಇದನ್ನು ಅದೃಷ್ಟದ ಸಂಕೇತ ಎಂದು ಪರಿಗಣಿಸಲಾಗುತ್ತದೆ. ನಿರ್ಮಲಾ ಸೀತಾರಾಮನ್ ಅವರು ಸಂಸತ್ತಿಗೆ ತೆರಳುವ ಮೊದಲು ರಾಷ್ಟ್ರಪತಿಗಳನ್ನು ಭೇಟಿ ಮಾಡಲು ರಾಷ್ಟ್ರಪತಿ ಭವನಕ್ಕೆ ಆಗಮಿಸಿದರು. ಇಂದು ಬೆಳಗ್ಗೆ 11 ಗಂಟೆಗೆ ಬಜೆಟ್ ಮಂಡನೆಯಾಗಲಿದೆ.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ನಿರ್ಣಾಯಕ ಎರಡನೇ ಅವಧಿಗೆ ಆಯ್ಕೆಯಾದಾಗ 2019ರಲ್ಲಿ ಭಾರತದ ಮೊದಲ ಪೂರ್ಣ ಸಮಯದ ಮಹಿಳಾ ಹಣಕಾಸು ಮಂತ್ರಿಯಾದ ನಿರ್ಮಲಾ ಸೀತಾರಾಮನ್ ಅವರು ಅಂದಿನಿಂದ ಪ್ರತಿ ವರ್ಷವೂ ಕೇಂದ್ರ ಬಜೆಟ್ ಅನ್ನು ನಿರಂತರವಾಗಿ ಮಂಡಿಸಿದ್ದಾರೆ.

ಕೇಂದ್ರ ಬಜೆಟ್ ಕೃಷಿ ಮತ್ತು ಮೂಲಸೌಕರ್ಯದಿಂದ ಶಿಕ್ಷಣ ಮತ್ತು ಆರೋಗ್ಯದವರೆಗೆ ವಿವಿಧ ಕ್ಷೇತ್ರಗಳನ್ನು ಒಳಗೊಳ್ಳುವುದರಿಂದ, ಇದು ಸರ್ಕಾರದ ಆದ್ಯತೆಗಳು ಮತ್ತು ಉಪಕ್ರಮಗಳ ಒಳನೋಟಗಳನ್ನು ನೀಡುತ್ತದೆ ಎಂದು ನಿರೀಕ್ಷಿಸಲಾಗಿದೆ. ಕಳೆದ ತಿಂಗಳು ಪುನರಾಯ್ಕೆಯಾದ ನಂತರ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದ ಮೊದಲ ಬಜೆಟ್ ಇದಾಗಿದೆ. ಈ ಬಜೆಟ್ ಮಂಡನೆ ಹಣದುಬ್ಬರವನ್ನು ನಿಭಾಯಿಸಲು, ಉದ್ಯೋಗವನ್ನು ಹೆಚ್ಚಿಸಲು ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಹೆಚ್ಚಿಸಲು ಸರ್ಕಾರದ ಯೋಜನೆಗಳ ಮೇಲೆ ಬೆಳಕು ಚೆಲ್ಲುತ್ತದೆ.

ಈ ಬಾರಿಯ ಬಜೆಟ್ ನಲ್ಲಿ ಮಧ್ಯಮ ವರ್ಗದ ತೆರಿಗೆದಾರರು ಸ್ಟ್ಯಾಂಡರ್ಡ್ ಡಿಡಕ್ಷನ್ ಮತ್ತು ಮೂಲಭೂತ ವಿನಾಯಿತಿ ಮಿತಿಯ ಹೆಚ್ಚಳ ಸಿಗಬಹುದು ಎಂದು ಆಶಿಸಿದ್ದಾರೆ. ಇದು ಒಟ್ಟಾರೆ ತೆರಿಗೆ ಹೊರೆಯನ್ನು ಕಡಿಮೆ ಮಾಡುತ್ತದೆ. ಸ್ಟ್ಯಾಂಡರ್ಡ್ ಡಿಡಕ್ಷನ್ ಮಿತಿಯನ್ನು ಹೆಚ್ಚಿಸುವುದರಿಂದ ಹಿಡಿದು ಹೊಸ ತೆರಿಗೆ ಪದ್ಧತಿಯಲ್ಲಿ ಮೂಲ ವಿನಾಯಿತಿ ಮಿತಿಯನ್ನು ಹೆಚ್ಚಿಸುವುದರಿಂದ ಬಂಡವಾಳ ಲಾಭಗಳ ತೆರಿಗೆ ರಚನೆಯನ್ನು ಸರಳಗೊಳಿಸುವವರೆಗೆ, ತೆರಿಗೆದಾರರು ಮತ್ತು ತಜ್ಞರು ಜನಸಾಮಾನ್ಯರ ಮೇಲೆ ಸಕಾರಾತ್ಮಕ ಪರಿಣಾಮ ಬೀರುವ ಬದಲಾವಣೆಗಳನ್ನು ನಿರೀಕ್ಷಿಸುತ್ತಿದ್ದಾರೆ.

ಪ್ರೇಯಸಿ, ಇಬ್ಬರು ಮಕ್ಕಳನ್ನು ನದಿಗೆಸೆದ ಪ್ರಿಯಕರ



ಪುಣೆ: ಪುಣೆಯಲ್ಲಿ ಹೃದಯ ವಿದ್ರಾವಕ ಘಟನೆಯೊಂದು ನಡೆದಿದೆ. ವ್ಯಕ್ತಿಯೊಬ್ಬ ಪ್ರೇಯಸಿ ಹಾಗೂ ಆಕೆಯ ಇಬ್ಬರು ಮಕ್ಕಳನ್ನು ನದಿಗೆ ಎಸೆದು ಅಮಾನವೀಯವಾಗಿ ವರ್ತಿಸಿದ್ದಾನೆ.

ಮಹಿಳೆ ಗಂಡನನ್ನು ತೊರೆದು ಮಕ್ಕಳೊಂದಿಗೆ ಪ್ರಿಯಕರನ ಜತೆ ಲಿವ್ ಇನ್ ರಿಲೇಷನ್ ಶಿಪ್ ನಲ್ಲಿದ್ದರು. ಆಕೆ ತನ್ನ ಜೀವನಕ್ಕೆ ಆಸರೆಯಾಗುತ್ತಾನೆಂದು ಭಾವಿಸಿ ಎಲ್ಲವನ್ನೂ ಅರ್ಪಿಸಿದ್ದಳು. ಪತಿಯನ್ನು ತೊರೆದು 25 ವರ್ಷದ ಮಹಿಳೆಯೊಬ್ಬಳು ಪ್ರಿಯಕರನೊಂದಿಗೆ ಜೀವನ ನಡೆಸುತ್ತಿದ್ದಳು, ಈಗ ಆಕೆ ಗರ್ಭಿಣಿಯಾಗದ್ದಳು, ವ್ಯಕ್ತಿಗೆ ಮಗು ಇಷ್ಟವಿರಲಿಲ್ಲ ಹೀಗಾಗಿ ಆಕೆಗೆ ಗರ್ಭಪಾತ ಮಾಡಿಸುವ ದೃಷ್ಟಿಯಿಂದ ಆಸ್ಪತ್ರೆಗೆ ಕರೆದೊಯ್ದಿದ್ದ. ಆಗ ಆಕೆ ಸಾವನ್ನಪ್ಪಿದ್ದಾಳೆ. ಬಳಿಕ ಸ್ನೇಹಿತನ ಜತೆ ಸೇರಿ ಆಕೆಯನ್ನು ನದಿಗೆ ಎಸೆದಿದ್ದಾನೆ, ಆದನ್ನು ನೋಡಿದ ಮಕ್ಕಳು ಅಳಲು ಶುರು ಮಾಡಿದ್ದರು, ಕೋಪಗೊಂಡ ವ್ಯಕ್ತಿ ಇಬ್ಬರು ಮಕ್ಕಳನ್ನೂ ಕೂಡ ನದಿಗೆ ಎಸೆದಿದ್ದಾನೆ. ಮೃತ ಮಹಿಳೆ ತಾಯಿ ತನ್ನ ಮಗಳು ಕಾಣೆಯಾಗಿರುವ ಬಗ್ಗೆ ಪೊಲೀಸರಿಗೆ ದೂರು ನೀಡಿದಾಗ ಘಟನೆ ಬೆಳಕಿಗೆ ಬಂದಿದೆ. ಪ್ರಿಯಕರನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಮಕ್ಕಳನ್ನೂ ಕೊಂದಿರುವ ವಿಚಾರ ಬಾಯ್ಬಿಟ್ಟಿದ್ದಾನೆ. ಪೊಲೀಸರು ಆರೋಪಿಗಳನ್ನು ಬಂಧಿಸಿ ಜೈಲಿಗೆ ಕಳುಹಿಸಿದ್ದಾರೆ. ಪ್ರಕರಣದ ಪರಿಶೀಲನೆ ನಡೆಯುತ್ತಿದೆ.

ಕನ್ವರ್ ಯಾತ್ರಾ ಮಾರ್ಗದಲ್ಲಿ ಆಹಾರ ಮಳಿಗೆಯಲ್ಲಿ ಹೆಸರು ಪ್ರದರ್ಶನ; ಸುಪ್ರೀಂ ತಡೆ

ದೆಹಲಿ: ಕನ್ವರ್ ಯಾತ್ರಾ ಮಾರ್ಗದಲ್ಲಿರುವ ಆಹಾರ ಮಳಿಗೆಗಳಲ್ಲಿ ಮಾಲೀಕರ ಹೆಸರು ಪ್ರದರ್ಶಿಸಬೇಕು ಎಂದು ಆದೇಶಿಸಿರುವ ಉತ್ತರಾಖಂಡ, ಉತ್ತರ ಪ್ರದೇಶ ಪೊಲೀಸರ ಆದೇಶಕ್ಕೆ ಸುಪ್ರೀಂಕೋರ್ಟ್ ಸೋಮವಾರ ತಡೆ ನೀಡಿದೆ. ಕನ್ವರ್ ಯಾತ್ರೆಯ ಹಾದಿಯಲ್ಲಿರುವ ಆಹಾರ ಮಳಿಗೆ, ಅಂಗಡಿ ಮಾಲೀಕರು ಅವರ ಮತ್ತು ಅಲ್ಲಿ ಕೆಲಸ ಮಾಡುವ ಸಿಬ್ಬಂದಿಯ ಹೆಸರುಗಳನ್ನು ಬಹಿರಂಗಪಡಿಸಬೇಕು ಎಂದು ಉತ್ತರ ಪ್ರದೇಶ ಮತ್ತು ಉತ್ತರಾಖಂಡ್ ಪೊಲೀಸರು ಆದೇಶಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಹೃಷಿಕೇಶ್ ರಾಯ್ ಮತ್ತು ಎಸ್.ವಿ.ಎನ್. ಭಟ್ಟಿ ಪೀಠವು ಆಹಾರ ಮಳಿಗೆಯಲ್ಲಿ, ಮಾಲೀಕರು ಆಹಾರದ ಹೆಸರುಗಳನ್ನವು ಪ್ರದರ್ಶಿಸಬಹುದು. ಆದರೆ ಅವರ ಹೆಸರುಗಳು, ಜಾತಿ ಅಥವಾ ಅವರ ಉದ್ಯೋಗಿಗಳ ಹೆಸರನ್ನು ಪ್ರದರ್ಶಿಸುವ ಅಗತ್ಯವಿಲ್ಲ ಎಂದು ಹೇಳಿದ್ದಾರೆ.

ಕನ್ವರ್ ಯಾತ್ರಾ ಮಾರ್ಗದಲ್ಲಿರುವ ತಿನಿಸುಗಳು ಅವುಗಳ ಮಾಲೀಕರ ಹೆಸರನ್ನು ಪ್ರದರ್ಶಿಸಬೇಕು ಎಂದು ಉತ್ತರ ಪ್ರದೇಶ ಮತ್ತು ಉತ್ತರಾಖಂಡ ಸರ್ಕಾರಗಳು ಔಪಚಾರಿಕ ಆದೇಶವನ್ನು ಹೊರಡಿಸಿದ್ದಾರೆಯೇ ಎಂದು ಆದೇಶದ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಮೊರೆ ಹೋದ ತೃಣಮೂಲ ಕಾಂಗ್ರೆಸ್ ಸಂಸದ ಮಹುವಾ ಮೊಯಿತ್ರಾ ಅವರನ್ನು ಪೀಠವು ಕೇಳಿದೆ.

ತಿನಿಸುಗಳ ಮಾಲೀಕರ ಹೆಸರನ್ನು ಪ್ರದರ್ಶಿಸಲು' ಆದೇಶವನ್ನು ರವಾನಿಸಲಾಗಿದೆಯೇ , ರಾಜ್ಯ ಸರ್ಕಾರಗಳು ಯಾವುದೇ ಔಪಚಾರಿಕ ಆದೇಶವನ್ನು ಅಂಗೀಕರಿಸಿದೆಯೇ'' ಎಂದು ಮಹುವಾ ಮೊಯಿತ್ರಾ ಪರವಾಗಿ ಹಾಜರಾದ ಹಿರಿಯ ವಕೀಲ ಅಭಿಷೇಕ್ ಸಿಂಘ್ವಿ ಅವರಲ್ಲಿ ನ್ಯಾಯಪೀಠ ಕೇಳಿದೆ. ಉತ್ತರ ಪ್ರದೇಶ ಮತ್ತು ಉತ್ತರಾಖಂಡ ಸರ್ಕಾರಗಳು ಜಾರಿಗೆ ತಂದಿರುವ ಆದೇಶಗಳು ಸಂವಿಧಾನಕ್ಕೆ ವಿರುದ್ಧವಾಗಿದೆ ಎಂದು ಸಿಂಘ್ವಿ ಹೇಳಿದರು.

ಕನ್ವಾರ್ ತೆರಳುವ ರಾಜ್ಯಗಳಿಗೆ ಸುಪ್ರೀಂ ಕೋರ್ಟ್ ನೋಟಿಸ್ ಜಾರಿ ಮಾಡಿದೆ. ಇದು ಮೇಲ್ನೋಟಕ್ಕೆ ಉತ್ತರ ಪ್ರದೇಶ, ಉತ್ತರಾಖಂಡ, ದೆಹಲಿ ಮತ್ತು ಮಧ್ಯಪ್ರದೇಶವನ್ನು ಒಳಗೊಂಡಿರಬಹುದು. ರಾಜ್ಯಗಳು ಮನವಿ ಮಾಡಿಲ್ಲ ಆದರೆ ಯಾತ್ರೆಗೆ ಹೋಗುವ ಮಾರ್ಗದಲ್ಲಿ ಸ್ವಯಂ ಪ್ರೇರಿತವಾಗಿ ನೋಟಿಸ್ ನೀಡಲಾಗಿದೆ ಎಂದು ಹೇಳಲಾಗಿದೆ. ನ್ಯಾಯಾಲಯ ಪ್ರಕರದ ವಿಚಾರಣೆಯನ್ನು ಶುಕ್ರವಾರ ನಡೆಸಲಿದೆ. ಹಿರಿಯ ವಕೀಲ ಸಿಯು ಸಿಂಗ್ ಪ್ರತಿನಿಧಿಸಿದ ಅಸೋಸಿಯೇಷನ್ ಫಾರ್ ಪ್ರೊಟೆಕ್ಷನ್ ಆಫ್ ಸಿವಿಲ್ ರೈಟ್ಸ್ ಮತ್ತು ಟಿಎಂಸಿ ಸಂಸದ ಮಹುವಾ ಮೊಯಿತ್ರಾ ಅವರು ಸಲ್ಲಿಸಿದ ಇತರ ಎರಡು ಅರ್ಜಿಗಳನ್ನು ಹಿರಿಯ ವಕೀಲ ಎಎಂ ಸಿಂಘ್ವಿ ಮತ್ತು ಚಿಂತಕ ಅಪೂರ್ವಾನಂದ್ ಝಾ ಮತ್ತು ಅಂಕಣಕಾರ ಆಕಾರ್ ಪಟೇಲ್ ಸಲ್ಲಿಸಿದ ಅರ್ಜಿಯ ಮೇಲೆ ಈ ಆದೇಶ ಬಂದಿದೆ. ಈ ನಿರ್ದೇಶನಗಳು ರಾಷ್ಟ್ರದ ಜಾತ್ಯತೀತ ಸ್ವರೂಪದ ಮೇಲೆ ಪರಿಣಾಮ ಬೀರುತ್ತದೆ, ಸಂವಿಧಾನದ ಪೀಠಿಕೆಯಲ್ಲಿ ಪ್ರತಿಪಾದಿಸಲಾದ ಆದರ್ಶಗಳು ಮತ್ತು ಮೌಲ್ಯಗಳನ್ನು ಉಲ್ಲಂಘಿಸುತ್ತದೆ. ಸಮಾನತೆ, ಜಾತಿ ತಾರತಮ್ಯ ಮತ್ತು ಜೀವನದ ಘನತೆಯ ಮೂಲಭೂತ ಹಕ್ಕುಗಳನ್ನು ಉಲ್ಲಂಘಿಸುತ್ತದೆ ಎಂದು ಅರ್ಜಿದಾರರು ವಾದಿಸಿದರು. ಈ ನಿರ್ದೇಶನಗಳು ಕನ್ವಾರ್ ಯಾತ್ರೆಯ ಮಾರ್ಗದ ಅಂಗಡಿಗಳಲ್ಲಿ ಕೆಲಸ ಮಾಡುವ ನೌಕರರನ್ನು ಬಲವಂತವಾಗಿ ಹಿಂಜರಿಯುವಂತೆ ಕಾರಣವಾಗಿವೆ, ಇದು ಜೀವನೋಪಾಯವನ್ನು ಗಳಿಸುವ ಅಥವಾ ವ್ಯಾಪಾರ ಮಾಡುವ ಮೂಲಭೂತ ಹಕ್ಕಿನ ಉಲ್ಲಂಘನೆಯಾಗಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

ಪ್ರಭಾಸ್ ಹೊಸ ಚಿತ್ರಕ್ಕೆ ನಾಯಕಿಯಾದ ಪಾಕಿಸ್ತಾನಿ ನಟಿ

ಟಾಲಿವುಡ್ ನಟ ಪ್ರಭಾಸ್‌ಗೆ ಈಗ 'ಕಲ್ಕಿ' ಸಿನಿಮಾ ಯಶಸ್ಸಿನಿಂದ ಬೇಡಿಕೆ ಹೆಚ್ಚಾಗಿದೆ. ಕೆರಿಯರ್‌ನಲ್ಲಿ ಹೊಸ ತಿರುವು ಸಿಕ್ಕಿದೆ. ಹೀಗಿರುವಾಗ ಡಾರ್ಲಿಂಗ್ ಪ್ರಭಾಸ್ ನಟನೆಯ ಹೊಸ ಸಿನಿಮಾಗೆ ಪಾಕಿಸ್ತಾನಿ ನಟಿಗೆ ಅವಕಾಶ ಕೊಡಲಾಗಿದೆ. ಪ್ರಭಾಸ್ ಜೊತೆ ಪಾಕಿಸ್ತಾನಿ ನಟಿ ಡ್ಯುಯೇಟ್ ಹಾಡಲಿದ್ದಾರೆ.

'ಕಲ್ಕಿ 2898 ಎಡಿ' ಸಿನಿಮಾ ಸಕ್ಸಸ್‌ನಿಂದ ಹಳೆಯ ಸಿನಿಮಾಗಳ ಸೋಲಿನ ಕಹಿ ಮರೆಸಿದೆ. ಈ ಸಿನಿಮಾ ಬಳಿಕ 'ದಿ ರಾಜಾ ಸಾಬ್' ಚಿತ್ರದ ಶೂಟಿಂಗ್‌ನಲ್ಲಿ ಪ್ರಭಾಸ್ ಬ್ಯುಸಿಯಾಗಿದ್ದಾರೆ. ಹನು ರಾಘವಪುಡಿ ನಿರ್ದೇಶನ ಮಾಡುತ್ತಿದ್ದಾರೆ.

ಈ ಸಿನಿಮಾದಲ್ಲಿ ನಾಯಕಿಯಾಗಿ ನಟಿಸಲು ಪಾಕಿಸ್ತಾನಿ ನಟಿ ಸಜಲ್ ಅಲಿಗೆ ಚಾನ್ಸ್ ಸಿಕ್ಕಿದೆ ಎಂಬ ಮಾಹಿತಿ ಹರಿದಾಡುತ್ತಿದೆ. ಈ ವಿಚಾರ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದ್ದಂತೆ ನೆಟ್ಟಿಗರು ಚಿತ್ರತಂಡಕ್ಕೆ ಕ್ಲಾಸ್ ತೆಗೆದುಕೊಂಡಿದ್ದಾರೆ. ಭಾರತದಲ್ಲಿ ನಾಯಕಿಯರಿಗೆ ಕೊರತೆ ಏನಿದೆ. ಪಾಕಿಸ್ತಾನಿ ನಟಿಗೆ ಅವಕಾಶ ಕೊಡುವ ಅಗತ್ಯ ಏನಿದೆ ಎಂದೆಲ್ಲಾ ಚಿತ್ರತಂಡಕ್ಕೆ ನೆಟ್ಟಿಗರು ಕ್ಲಾಸ್

ತೆಗೆದುಕೊಂಡಿದ್ದಾರೆ. ಆದರೆ ಸಜಲ್ ಅಲಿನೇ ಈ ಚಿತ್ರದ ನಾಯಕಿ ಎಂದು ಅಧಿಕೃತ ಘೋಷಣೆ ಮಾಡಿಲ್ಲ ಚಿತ್ರತಂಡ. ಕೇವಲ ಹರಿದಾಡುತ್ತಿರುವ ಸುದ್ದಿಗೆ ನೆಟ್ಟಿಗರು ರಾಂಗ್ ಆಗಿದ್ದಾರೆ. ಈ ಕುರಿತು ಚಿತ್ರತಂಡ ರಿಯಾಕ್ಟ್ ಮಾಡುತ್ತಾರಾ ಎಂದು ಕಾಯಬೇಕಿದೆ.

ಅಂದಹಾಗೆ, ಸಜಲ್ ಅಲಿಗೆ ಸೋಷಿಯಲ್ ಮೀಡಿಯಾದಲ್ಲಿ ಅಪಾರ ಅಭಿಮಾನಿಗಳಿದ್ದಾರೆ. ಬಾಲಿವುಡ್‌ನಲ್ಲಿ ಈ ಹಿಂದೆ 'ಮಾಮ್' ಎಂಬ ಸಿನಿಮಾದಲ್ಲಿ ಅವರು ನಟಿಸಿದ್ದರು.

'ಕಲ್ಕಿ'ಯಲ್ಲಿ ಧಾರ್ಮಿಕ ಭಾವನೆಗಳಿಗೆ ಧಕ್ಕೆ

'ಕಲ್ಕಿ 2898 ಎಡಿ' ಸಿನಿಮಾ ಸಕ್ಸಸ್ ಕಂಡಿದೆ. ಈ ಬೆನ್ನಲ್ಲೇ ಚಿತ್ರತಂಡಕ್ಕೆ ಸಂಕಷ್ಟ ಎದುರಾಗಿದೆ. ಈ ಚಿತ್ರದಲ್ಲಿ ಹಿಂದೂ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿದ್ದಾರೆ ಎಂದು ಆರೋಪಿಸಿ ಚಿತ್ರದ ನಿರ್ಮಾಪಕರಿಗೆ, ನಟರಾದ ಅಮಿತಾಭ್, ಪ್ರಭಾಸ್‌ಗೆ ಕಲ್ಕಿಧಾಮ ಪೀಠಾಧೀಶ್ವರ ಆಚಾರ್ಯ ಪ್ರಮೋದ್ ಕೃಷ್ಣಂ ಲೀಗಲ್ ನೋಟಿಸ್ ನೀಡಿದ್ದಾರೆ.

ನಿಮ್ಮ ಚಲನಚಿತ್ರವು ಭಗವಾನ್ ಕಲ್ಕಿಯ ಪರಿಕಲ್ಪನೆಯನ್ನು ಬದಲಾಯಿಸಿರುವಂತೆ ಇದೆ. ಹಿಂದೂ ಪುರಾಣ ಗ್ರಂಥಗಳಲ್ಲಿ ಬರೆದ ಮತ್ತು ವಿವರಿಸಿದ ಕಾರಣಗಳಿಗಾಗಿ, ಭಗವಾನ್ ಕಲ್ಕಿಯ ಕಥೆಯ ಚಿತ್ರಣ ಮತ್ತು ಚಿತ್ರಣವು ಸಂಪೂರ್ಣವಾಗಿ ತಪ್ಪಾಗಿದೆ. ಹಾಗಾಗಿ ಈ ಪವಿತ್ರ ಗ್ರಂಥಗಳಿಗೆ ಅಗೌರವವಾಗಿದೆ. ಕಲ್ಕಿಯ ಕಥೆಯನ್ನು ಸಂಪೂರ್ಣವಾಗಿ ತಪ್ಪಾಗಿ ನಿರೂಪಿಸಲಾಗಿದೆ. ಇದು ಪವಿತ್ರ ಗ್ರಂಥಗಳಿಗೆ ಅಪಮಾನ ಮಾಡಿದಂತಾಗುತ್ತದೆ ಎಂದು ಆರೋಪಿಸಿ ಚಿತ್ರತಂಡಕ್ಕೆ ಆಚಾರ್ಯ ಪ್ರಮೋದ್ ಕೃಷ್ಣಂ ಪರವಾಗಿ ಸುಪ್ರೀಂ ಕೋರ್ಟ್ ವಕೀಲ ಉಜ್ಜವಲ್ ಆನಂದ್ ಶರ್ಮಾ ಅವರು ನೋಟಿಸ್ ನೀಡಿದ್ದಾರೆ.

ಅಮಿತಾಭ್, ಪ್ರಭಾಸ್‌ಗೆ ಲೀಗಲ್ ನೋಟಿಸ್

ಕಲ್ಕಿ ಅವತಾರವು ವಿಷ್ಣುವಿನ ಕೊನೆಯ ಅವತಾರವಾಗಿದೆ. ಪ್ರಧಾನಿ ಮೋದಿ ಅವರು ಫೆಬ್ರವರಿ 19ರಂದು ಯುಪಿಯ ಸಂಭಾಲ್‌ನಲ್ಲಿ ಶ್ರೀ ಕಲ್ಕಿ ಧಾಮ್ ದೇವಾಲಯದ ಉದ್ಘಾಟನೆ ಮಾಡಿದರು. ಅಲ್ಲಿ ಭಗವಾನ್ ಕಲ್ಕಿ ಜನಿಸಲಿದ್ದಾರೆ. ಇಡೀ ಜಗತ್ತು ಅವನಿಗಾಗಿ ಕಾಯುತ್ತಿದೆ. ಆದರೆ ಈ ಚಿತ್ರವು ಜನರಿಗೆ ತಪ್ಪು ಸಂದೇಶವನ್ನು ನೀಡುತ್ತಿದೆ ಎಂದು ಎಂದು ಮಾಜಿ ಕಾಂಗ್ರೆಸ್ ನಾಯಕ ಆಚಾರ್ಯ ಪ್ರಮೋದ್ ಕೃಷ್ಣಂ ಹೇಳಿಕೆ ನೀಡಿದ್ದಾರೆ.

ಅಂದಹಾಗೆ, 'ಕಲ್ಕಿ 2898 ಎಡಿ' ಸಿನಿಮಾ ಬಹುಭಾಷೆಗಳಲ್ಲಿ ರಿಲೀಸ್ ಆಗಿ ಹೌಸ್‌ಫುಲ್ ಪ್ರದರ್ಶನ ಕಾಣುತ್ತಿದೆ. ಚಿತ್ರದಲ್ಲಿ ಅಮಿತಾಬ್, ಪ್ರಭಾಸ್ ಜೊತೆ ದೀಪಿಕಾ ಪಡುಕೋಣೆ, ಕಮಲ್ ಹಾಸನ್ ಸೇರಿದಂತೆ ಅನೇಕರು ನಟಿಸಿದ್ದಾರೆ. 2ಡಿ ಜೊತೆಗೆ 3ಡಿಯಲ್ಲೂ ಸಿನಿಮಾ ವೀಕ್ಷಿಸಲು ಲಭ್ಯವಿದೆ.

'ರಾಜಾ ರಾಣಿ' ಶೋಗೆ ಬಂದ್ಮೇಲೆ ನನ್ನ ಅಸ್ತಿತ್ವ ಕಾಣಿಸುತ್ತಿದೆ

ಸ್ಯಾಂಡಲ್‌ವುಡ್ ನಟಿ ಅದಿತಿ ಪ್ರಭುದೇವ ಸದ್ಯ 'ರಾಜಾ ರಾಣಿ' ರಿಯಾಲಿಟಿ ಶೋನ ಜಡ್ಜ್ ಆಗಿ ಕಾಣಿಸಿಕೊಳ್ತಿದ್ದಾರೆ. ಇನ್ನೂ ಹಾಲು ಕುಡಿಯುವ ಮಗುವನ್ನು ಬಿಟ್ಟು ಶೋ ಬಂದಿದ್ದಾರೆ ಎಂದು ನೆಗೆಟಿವ್ ಕಾಮೆಂಟ್ ಮಾಡುವವರಿಗೆ ನಟಿ ತಕ್ಕ ಉತ್ತರಿಸಿದ್ದಾರೆ.

ಸಾಕಷ್ಟು ಸಿನಿಮಾಗಳಲ್ಲಿ ನಾಯಕಿಯಾಗಿ ರಂಜಿಸಿದ್ದ ಅದಿತಿ ಈಗ ಕಿರುತೆರೆಯಲ್ಲಿ ಸೆಕೆಂಡ್ ಇನ್ನಿಂಗ್ಸ್ ಶುರು ಮಾಡಿದ್ದಾರೆ. ಇದರ ನಡುವೆ ಇನ್ಸ್ಟಾಗ್ರಾಂ ಲೈವ್‌ಗೆ ಬಂದು ಅಭಿಮಾನಿಗಳ ಜೊತೆ ನಟಿ ಮಾತನಾಡಿದ್ದಾರೆ. ಅವರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ್ದಾರೆ. ನಿಮ್ಮ

ಲೈಫ್ ಹೇಗೆ ನಡೆಯುತ್ತಿದೆ ಎಂದು ಅಭಿಮಾನಿಯೊಬ್ಬ ಕೇಳಲಾದ ಪ್ರಶ್ನೆಗೆ ಅದಿತಿ ಮಾತನಾಡಿದ್ದಾರೆ.

ಇದು ತೀರಾ ವೈಯಕ್ತಿಕ ವಿಚಾರ ಆದರೂ ಹಂಚಿಕೊಳ್ಳಬೇಕು ಅನಿಸುತ್ತಿದೆ. 'ರಾಜಾ ರಾಣಿ' ತಂಡ ನನಗೆ ಬೆಂಬಲವಾಗಿ ನಿಂತಿದೆ. ನನ್ನ ಮಗಳ ಆರೈಕೆ ಮಾಡಲು ಆಗಾಗ ಬ್ರೇಕ್ ಕೊಡುತ್ತಾ ಇರುತ್ತಾರೆ. ನನ್ನ ಮಗುವನ್ನು ಬಿಟ್ಟು ಶೂಟಿಂಗ್ ಬರುತ್ತಿಲ್ಲ. ಬದಲಿಗೆ ಜೊತೆಗೆ ಕರೆದುಕೊಂಡು ಬಂದು ಮಗುವಿಗೆ ಬೇಕಾದ ವ್ಯವಸ್ಥೆ ಮಾಡಲಾಗಿದೆ ಎಂದು ಅದಿತಿ ತಿಳಿಸಿದ್ದಾರೆ.

ನನಗೆ ಮಗು ಹುಟ್ಟುವುದಕ್ಕೂ ಮುಂಚೆ, ನಾನು ಮತ್ತು ನನ್ನ ಮನೆ ಕೆಲಸದ ಜೊತೆ ಬ್ಲಾಗ್ ಆಯಿತು ಅಂತ ಇರುತ್ತಿದ್ದೆ. ಅದು ಹತ್ತಿರತ್ತಿರ ಒಂದು ವರ್ಷ. ಆದರೆ ಈಗ ವಾರಕ್ಕೆ ಒಮ್ಮೆ ಆದರೂ ಜನರ ಜೊತೆಗೆ ಬೆರೆಯುತ್ತೇನೆ. ಇದರಿಂದ ವಿಭಿನ್ನ ವ್ಯಕ್ತಿತ್ವಗಳು ತಿಳಿಯುತ್ತದೆ. ನಾನು ಶೂಟಿಂಗ್ ಬಂದರು ನನ್ನ ಮಗಳು ನನ್ನ ಜೊತೆಗೆ ಇರುತ್ತಾಳೆ. ಆದರೆ ಜನರನ್ನ ನೋಡ್ತೀನಿ, ಮಾತಾಡ್ತೀನಿ. ರಾಜಾ ರಾಣಿ ಶೋಗೆ ಬಂದ್ಮೇಲೆ ನನ್ನ ಅಸ್ತಿತ್ವ ಕಾಣಿಸುತ್ತಾ ಇದೆ ಎಂದಿದ್ದಾರೆ.

ಅಂದಹಾಗೆ, ಧೈರ್ಯಂ, ಸಿಂಗ, ತ್ರಿಬಲ್ ರೈಡಿಂಗ್, ರಂಗನಾಯಕಿ, ಬ್ರಹ್ಮಚಾರಿ, ಬಜಾರ್ ಸೇರಿದಂತೆ ಹಲವು ಸಿನಿಮಾಗಳಲ್ಲಿ ಅದಿತಿ ನಾಯಕಿಯಾಗಿ ನಟಿಸಿದ್ದಾರೆ.

ಸರಣಿ ಗೆಲುವಿನೊಂದಿಗೆ ಡಬ್ಲ್ಯೂಟಿಸಿ ಪಾಯಿಂಟ್ ಪಟ್ಟಿಯಲ್ಲಿ

3 ಸ್ಥಾನ ಮೇಲೇರಿದ ಇಂಗ್ಲೆಂಡ್

ಇಂಗ್ಲೆಂಡ್ ಮತ್ತು ವೆಸ್ಟ್ ಇಂಡೀಸ್ ನಡುವಿನ ಮೂರು ಪಂದ್ಯಗಳ ಟೆಸ್ಟ್ ಸರಣಿಯ ಎರಡನೇ ಪಂದ್ಯ ನಾಟಿಂಗ್ ಹ್ಯಾಮ್‌ನಲ್ಲಿ ನಡೆಯಿತು. ಆಂಗ್ಲ ತಂಡ ಈ ಟೆಸ್ಟ್‌ನಲ್ಲಿ 241 ರನ್‌ಗಳಿಂದ ಜಯಗಳಿಸುವ ಮೂಲಕ ಸರಣಿಯಲ್ಲಿ 2-0 ಮುನ್ನಡೆ ಸಾಧಿಸಿದೆ. ಮೊದಲ ಟೆಸ್ಟ್‌ನಲ್ಲಿ ಇಂಗ್ಲೆಂಡ್ ಇನ್ನಿಂಗ್ಸ್ ಮತ್ತು 114 ರನ್‌ಗಳ ಜಯ ಸಾಧಿಸಿತ್ತು.

ಇದೀಗ ಸತತ ಎರಡು ಟೆಸ್ಟ್ ಪಂದ್ಯಗಳನ್ನು ಗೆದ್ದಿರುವ ಇಂಗ್ಲೆಂಡ್ ತಂಡ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಪಾಯಿಂಟ್ಸ್ ಪಟ್ಟಿಯಲ್ಲಿ ಭಾರಿ ಮುನ್ನಡೆ ಸಾಧಿಸಿದೆ. ತಂಡವು ಬರೋಬ್ಬರಿ ಮೂರು ಸ್ಥಾನಗಳನ್ನು ಮೇಲೇರಿ ನೇರವಾಗಿ ಆರನೇ ಸ್ಥಾನಕ್ಕೆ ಬಂದು ಕುಳಿತಿದೆ. ಮೂರನೇ ಟೆಸ್ಟ್ ಪಂದ್ಯವನ್ನು ಗೆಲ್ಲುವ ಮೂಲಕ ಬೆನ್ ಸ್ಟೋಕ್ಸ್ ಪಡೆ ಅಂಕಪಟ್ಟಿಯಲ್ಲಿ ತನ್ನ ಸ್ಥಾನವನ್ನು ಮತ್ತಷ್ಟು ಬಲಪಡಿಸಿಕೊಳ್ಳುವ ಅವಕಾಶವನ್ನು ಹೊಂದಿದೆ.

ಇಂಗ್ಲೆಂಡ್ ತಂಡ ಒಂಬತ್ತನೇ ಸ್ಥಾನದಿಂದ ನೇರವಾಗಿ ಆರನೇ ಸ್ಥಾನಕ್ಕೆ ಏರಿದೆ. ಈ ಜಿಗಿತದಿಂದಾಗಿ ದಕ್ಷಿಣ ಆಫ್ರಿಕಾ, ಬಾಂಗ್ಲಾದೇಶ ಮತ್ತು ವೆಸ್ಟ್ ಇಂಡೀಸ್ ತಂಡಗಳು ಕುಸಿತ ಕಂಡಿವೆ. ಅದೇ ಸಮಯದಲ್ಲಿ, ವೆಸ್ಟ್ ಇಂಡೀಸ್ ತಂಡವು ಪಾಯಿಂಟ್ ಪಟ್ಟಿಯಲ್ಲಿ ಒಂಬತ್ತನೇ ಸ್ಥಾನಕ್ಕೆ

ಜಾರಿದೆ. 2023-25ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಆವೃತ್ತಿಯಲ್ಲಿ ಇಂಗ್ಲೆಂಡ್ ಇದುವರೆಗೆ 12 ಪಂದ್ಯಗಳನ್ನು ಆಡಿದ್ದು, ಇದರಲ್ಲಿ ಐದು ಪಂದ್ಯಗಳನ್ನು ಗೆದ್ದಿದ್ದು, ಆರರಲ್ಲಿ ತಂಡ ಸೋತಿದೆ. ಒಂದು ಟೆಸ್ಟ್ ಡ್ರಾ ಆಗಿದೆ. ಇಂಗ್ಲೆಂಡ್ 45 ಅಂಕಗಳನ್ನು ಹೊಂದಿದ್ದು, ಗೆಲುವಿನ ಶೇಕಡಾವಾರು 31.25 ಆಗಿದೆ.

ಇತ್ತ ವೆಸ್ಟ್ ಇಂಡೀಸ್ ಇದುವರೆಗೆ ಆರು ಟೆಸ್ಟ್ ಪಂದ್ಯಗಳನ್ನು ಆಡಿದ್ದು, ಕೇವಲ ಒಂದು ಪಂದ್ಯವನ್ನು ಗೆದ್ದಿದೆ. ನಾಲ್ಕು ಟೆಸ್ಟ್‌ಗಳಲ್ಲಿ ಸೋಲು ಕಂಡಿದೆ. ಒಂದು ಟೆಸ್ಟ್ ಪಂದ್ಯ ಡ್ರಾದಲ್ಲಿ ಅಂತ್ಯಗೊಂಡಿದೆ. ಪ್ರಸ್ತುತ ವೆಸ್ಟ್ ಇಂಡೀಸ್ 16 ಅಂಕಗಳನ್ನು ಹೊಂದಿದ್ದು, ಅದರ ಗೆಲುವಿನ ಶೇಕಡಾವಾರು 22.22 ಆಗಿದೆ.

ಉಳಿದಂತೆ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ಪಾಯಿಂಟ್ಸ್ ಟೇಬಲ್‌ನಲ್ಲಿ ಪ್ರಸ್ತುತ ಟೀಂ ಇಂಡಿಯಾ ಅಗ್ರಸ್ಥಾನದಲ್ಲಿದೆ. 68.51 ರಷ್ಟು ಗೆಲುವಿನ ಶೇಕಡಾವಾರು ಹೊಂದಿರುವ ಟೀಂ ಇಂಡಿಯಾ ನಂಬರ್ ಒನ್ ಸ್ಥಾನದಲ್ಲಿ ಮುಂದುವರೆದಿದೆ. ಭಾರತದ ನಂತರ ಪಾಯಿಂಟ್ಸ್ ಟೇಬಲ್‌ನಲ್ಲಿ ಆಸ್ಟ್ರೇಲಿಯಾ ಎರಡನೇ ಸ್ಥಾನದಲ್ಲಿದ್ದು, ಆಸೀಸ್ ಪಡೆಯ ಗೆಲುವಿನ ಶೇಕಡಾವಾರು ಪ್ರಸ್ತುತ 62.50 ಆಗಿದೆ. ಅಂದರೆ ಮೊದಲ ಮತ್ತು ಎರಡನೇ ತಂಡದ ನಡುವಿನ ಅಂತರ ಹೆಚ್ಚಿಲ್ಲ.

ನ್ಯೂಜಿಲೆಂಡ್ ಕ್ರಿಕೆಟ್ ತಂಡ ಅಂಕಪಟ್ಟಿಯಲ್ಲಿ ಮೂರನೇ ಸ್ಥಾನದಲ್ಲಿದ್ದು, ತಂಡದ ಗೆಲುವಿನ ಶೇಕಡಾವಾರು ಪ್ರಸ್ತುತ 50 ಆಗಿದೆ. ಶ್ರೀಲಂಕಾ ಕೂಡ 50 ರಷ್ಟು ಗೆಲುವಿನ ಶೇಕಡಾವಾರು ಹೊಂದಿದೆ. ಆದರೆ ನ್ಯೂಜಿಲೆಂಡ್ 90 ಅಂಕ ಹಾಗೂ ಶ್ರೀಲಂಕಾ 24 ಅಂಕ ಹೊಂದಿರುವುದರಿಂದ ನ್ಯೂಜಿಲೆಂಡ್ ಪಾಯಿಂಟ್ ಪಟ್ಟಿಯಲ್ಲಿ ಮುಂದಿದೆ.

ಏಷ್ಯಾಕಪ್‌ನಲ್ಲಿ ಇತಿಹಾಸ ಸೃಷ್ಟಿಸಿದ ಚಾಮರಿ ಅಟಪಟ್ಟು

ಶ್ರೀಲಂಕಾದಲ್ಲಿ ನಡೆಯುತ್ತಿರುವ ಮಹಿಳಾ ಏಷ್ಯಾಕಪ್‌ನಲ್ಲಿ ನಡೆದ ಪಂದ್ಯದಲ್ಲಿ ಆತಿಥೇಯ ಶ್ರೀಲಂಕಾ ತಂಡ, ಮಲೇಷ್ಯಾ ತಂಡವನ್ನು ಬರೋಬ್ಬರಿ 144 ರನ್‌ಗಳ ಬೃಹತ್ ಅಂತರದಿಂದ ಪಣಿಸಿದೆ. ಲಂಕಾ ನೀಡಿದ 184 ರನ್‌ಗಳ ಗುರಿ ಬೆನ್ನಟ್ಟಿದ ಮಲೇಷ್ಯಾ ತಂಡ ಕೇವಲ 40 ರನ್‌ಗಳಿಗೆ ಆಲೌಟ್ ಆಯಿತು.

ಇದಕ್ಕೂ ಮುನ್ನ ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ ತಂಡ 20 ಓವರ್‌ಗಳಲ್ಲಿ 4 ವಿಕೆಟ್‌ಗೆ 184 ರನ್ ಗಳಿಸಿತು. ತಂಡದ ಪರ ಸಿಡಿಲಬ್ಬರದ ಬ್ಯಾಟಿಂಗ್ ಮಾಡಿದ ನಾಯಕಿ ಚಾಮರಿ ಅಟಪಟ್ಟು ಕೇವಲ 69 ಎಸೆತಗಳಲ್ಲಿ 119 ರನ್‌ಗಳ ಅಜೇಯ ಇನ್ನಿಂಗ್ಸ್ ಆಡಿದರು. ಅಟಪಟ್ಟು ಅವರ ಇನ್ನಿಂಗ್ಸ್‌ನಲ್ಲಿ 14 ಬೌಂಡರಿ ಹಾಗೂ 7 ಸಿಕ್ಸರ್‌ಗಳು ಸೇರಿದ್ದವು.

ಈ ಸಿಡಿಲಬ್ಬರದ ಶತಕದೊಂದಿಗೆ ಚಾಮರಿ ಅಟಪಟ್ಟು ಟಿ20 ಮಾದರಿಯಲ್ಲಿ ನಡೆಯುತ್ತಿರುವ ಈ ಟೂರ್ನಿಯಲ್ಲಿ ಶತಕ ಸಿಡಿಸಿದ ಮೊದಲ ಆಟಗಾರ್ತಿ ಎನಿಸಿಕೊಂಡಿದ್ದಾರೆ. ಈ ಮೊದಲು ಟಿ20 ಏಷ್ಯಾಕಪ್‌ನಲ್ಲಿ ಯಾವುದೇ ಮಹಿಳಾ ಆಟಗಾರ್ತಿ ಶತಕ ಸಿಡಿಸಿರಲಿಲ್ಲ.

ಈ ಶತಕದೊಂದಿಗೆ ಅಟಪಟ್ಟು ಟಿ20 ವೃತ್ತಿಜೀವನದಲ್ಲಿ ಮೂರನೇ ಶತಕ ದಾಖಲಿಸಿದರು.

ಇಲ್ಲಿಯವರೆಗೆ ಅವರು 136 ಪಂದ್ಯಗಳಲ್ಲಿ 24.44 ರ ಸರಾಸರಿಯಲ್ಲಿ 3153 ರನ್ ಗಳಿಸಿದ್ದಾರೆ. ಈ ಹಿಂದೆ ಆಸ್ಟ್ರೇಲಿಯಾ ಮತ್ತು ಸ್ಕಾಟ್ಲೆಂಡ್ ವಿರುದ್ಧವೂ ಅವರು ಶತಕ ಬಾರಿಸಿದ್ದರು. ಇದಲ್ಲದೆ ಮಲೇಷ್ಯಾ ವಿರುದ್ಧ ತನ್ನ ಇನ್ನಿಂಗ್ಸ್‌ನಲ್ಲಿ 7 ಸಿಕ್ಸರ್‌ಗಳನ್ನು ಬಾರಿಸಿದ ಅಟಪಟ್ಟು, ಏಷ್ಯಾಕಪ್ ಪಂದ್ಯವೊಂದರಲ್ಲಿ ಅತ್ಯಧಿಕ ಸಿಕ್ಸರ್ ಬಾರಿಸಿದ ದಾಖಲೆ ಕೂಡ ನಿರ್ಮಿಸಿದರು. ಇವರಿಗೂ ಮುನ್ನ ಯಾವುದೇ ಮಹಿಳಾ ಆಟಗಾರ್ತಿ ಏಷ್ಯಾಕಪ್ ಪಂದ್ಯವೊಂದರಲ್ಲಿ ಇಷ್ಟು ಸಿಕ್ಸರ್ ಬಾರಿಸಿಲ್ಲ.

ಈ ಟೂರ್ನಿಯಲ್ಲಿ ಇನ್ನಿಂಗ್ಸ್‌ನಲ್ಲಿ ಗರಿಷ್ಠ 3 ಸಿಕ್ಸರ್‌ಗಳನ್ನು ಬಾರಿಸಿರುವುದು ಇಲ್ಲಿಯವರೆಗಿನ ದಾಖಲೆಯಾಗಿತ್ತು. 2022ರ ಏಷ್ಯಾಕಪ್‌ನಲ್ಲಿ ಭಾರತದ ಶೆಫಾಲಿ ವರ್ಮಾ ಮಲೇಷ್ಯಾ ವಿರುದ್ಧ 3 ಸಿಕ್ಸರ್‌ಗಳನ್ನು ಬಾರಿಸಿದ್ದರು. ಹಾಗೆಯೇ ಭಾರತದ ರಿಚಾ ಘೋಷ್ ಕೂಡ ಪಾಕಿಸ್ತಾನದ ವಿರುದ್ಧ ಮೂರು ಸಿಕ್ಸರ್‌ಗಳನ್ನು ಬಾರಿಸಿದ್ದರು.

ಇವರಲ್ಲದೆ ಪಾಕಿಸ್ತಾನದ ಅಲಿಯಾ ರಿಯಾಜ್ 2022 ರ ಏಷ್ಯಾಕಪ್‌ನಲ್ಲಿ ಯುಎಇ ವಿರುದ್ಧ ಮೂರು ಸಿಕ್ಸರ್‌ಗಳನ್ನು ಬಾರಿಸಿದ್ದರು. ಭಾರತದ ಸ್ಮೃತಿ ಮಂಧಾನ ಕೂಡ 2022 ರಲ್ಲಿ ಶ್ರೀಲಂಕಾ ವಿರುದ್ಧ ಮೂರು ಸಿಕ್ಸರ್‌ಗಳನ್ನು ಬಾರಿಸುವಲ್ಲಿ ಯಶಸ್ವಿಯಾಗಿದ್ದರು. ಆದರೆ ಈಗ ಈ ಎಲ್ಲಾ ದಾಖಲೆಗಳನ್ನು ಅಟಪಟ್ಟು ಮುರಿದಿದ್ದಾರೆ.

ದರ್ಶನ್‌ಗೆ ಜೈಲೂಟವೇ ಗತಿ

ಬೆಂಗಳೂರು: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್ ಜೈಲೂಟವನ್ನೇ ಸೇವಿಸಬೇಕಿದೆ.

ಮನೆಯಿಂದ ಊಟ ಹಾಗೂ ಹಾಸಿಗೆ ಸೌಲಭ್ಯ ಪಡೆಯುವುದಕ್ಕೆ ಅನುಮತಿ ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ್ದ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಜುಲೈ 25ಕ್ಕೆ ಆದೇಶ ಕಾಯ್ದಿರಿಸಿದೆ. ದರ್ಶನ್ ಪರ ಮತ್ತು ಪೊಲೀಸರ ಪರ ವಕೀಲರ ವಾದವನ್ನು ಆಲಿಸಿದ ನ್ಯಾಯಾಧೀಶರು ಜುಲೈ 25 ರಂದು ಆದೇಶ ಪ್ರಕಟಿಸುವುದಾಗಿ ತಿಳಿಸಿದರು.

ದರ್ಶನ್ ಪರ ವಕೀಲರ ವಾದ ಏನಿತ್ತು?: ಆರೋಪಿಗೆ ಜೈಲಿನಲ್ಲಿ ಇರುವಾಗ ಮನೆಯ ಊಟ ಪಡೆಯಬಹುದು. ಇದು ವಿಚಾರಣಾಧೀನ ಕೈದಿಯ ಹಕ್ಕು. ಜೈಲಿನ ನಿಯಮಗಳಲ್ಲಿ ಇದರ ಉಲ್ಲೇಖ ಇದೆ. ಆರೋಪಿಗೆ ಕೆಲವೊಂದು ನಿಬಂಧನೆಗಳನ್ನು ಹೇಳಿ ಅವಕಾಶ ಕೊಡಿಸಬಹುದು. ತಮ್ಮದೇ ವೆಚ್ಚದಲ್ಲಿ ಇದನ್ನು ಪಡೆಯಲು ಅವಕಾಶವನ್ನು ಹೊಂದಿಸಲಾಗಿದೆ. ಕೊಲೆಯ ಆರೋಪಿಗಳಿಗೆ ವಿನಾಯಿತಿ ನೀಡಲಾಗಿದೆ

ಸೆಕ್ಷನ್ 30 ರ ಪ್ರಕಾರ ಜೈಲಿನಲ್ಲಿ ಇರುವ ಆರೋಪಿ ಮನೆಯ ಊಟ ಪಡೆಯಬಹುದು. ಅಲ್ಲದೇ ಮನೆಯಿಂದ ಹಾಸಿಗೆ ವ್ಯವಸ್ಥೆ ಮತ್ತು ಪುಸ್ತಕಗಳನ್ನು ಹೊಂದುವ ಅವಕಾಶ ಇದೆ. ಈ ಎಲ್ಲಾ ಅವಕಾಶಗಳನ್ನು ಆರೋಪಿಗಳಿಗೆ ಒದಗಿಸಿಕೊಡಬಹುದು.

ಮರಣ ದಂಡನೆ ಹೊಂದಿದ ಅಪರಾಧಿಗೂ ಕೆಲ ಅವಕಾಶ ಇದೆ. ಅಲ್ಲದೇ ದರ್ಶನ್ ಅವರು ಸಿನಿಮಾದ ನಟರಾಗಿರುವ ಕಾರಣ ಅತಿ ಹೆಚ್ಚಿನ ಪ್ರಚಾರ ಸಿಗುತ್ತಿದೆ. ಹೀಗಾಗಿ ಜೈಲಿನ ಅಧಿಕಾರಿಗಳು ಮನೆಯ ಊಟವನ್ನು ನೀಡುವುದಕ್ಕೆ ನಿರಾಕರಣೆ ಮಾಡುತ್ತಿದ್ದಾರೆ. ಹಿರಿಯ ಅಧಿಕಾರಿಗಳು ಇದರಿಂದ ಹಿಂದೆ ಸರಿಯುತ್ತಿದ್ದಾರೆ.

ಈ ಹಿಂದೆ ಕುಖ್ಯಾತ ಆರೋಪಿ ಚಾರ್ಲ್ಸ್ ಶೋಭರಾಜ್‌ಗೆ ಕೂಡ ಮನೆಯ ಊಟ ಕಲ್ಪಿಸಲಾಗಿತ್ತು. ಯಾವಾಗ ಆರೋಪಿ, ಅಪರಾಧಿ ಎಂ